ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು
JSS MAHAVIDYAPEETHA, MYSURU

# ಜೆಎಸ್‌ಎಸ್ ವಾರ್ತಾಪತ್ರ

## ಮಾಸಪತ್ರಿಕೆ

# JSS VARTHAPATHRA

*Monthly Magazine*

ಸಂಪುಟ 10 ಸಂಚಿಕೆ 9 ಸೆಪ್ಟೆಂಬರ್ 2025



ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ನಡೆದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವವನ್ನು ಸುತ್ತೂರು ಮತ್ತು ಸಿದ್ಧಗಂಗಾ ಶ್ರೀಗಳ ದಿವ್ಯ ಸಾನ್ನಿಧ್ಯದಲ್ಲಿ ಕೇಂದ್ರ ಸಚಿವರಾದ ಶ್ರೀ ಶಿವರಾಜ್ ಸಿಂಗ್ ಚೌಹಾಣ್‌ರವರು ಜ್ಯೋತಿ ಬೆಳಗಿಸಿ ಉದ್ಘಾಟಿಸುತ್ತಿರುವುದು. ಶ್ರೀ ಎಚ್.ಎಂ. ಗಣೇಶ್ ಪ್ರಸಾದ್, ಶ್ರೀ ಎ.ಆರ್. ಕೃಷ್ಣಮೂರ್ತಿ, ಶ್ರೀ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶ್ರೀ ಜಿ.ಟಿ. ದೇವೇಗೌಡ ಹಾಗೂ ಶ್ರೀ ಟಿ.ಎಸ್. ಶ್ರೀವತ್ಸ ಮೊದಲಾದವರುಗಳಿದ್ದಾರೆ. (29 ಆಗಸ್ಟ್ 2025)



ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ನಡೆದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವದಲ್ಲಿ ಸುತ್ತೂರು ಮತ್ತು ಸಿದ್ಧಗಂಗಾ ಶ್ರೀಗಳವರ ದಿವ್ಯ ಸಾನ್ನಿಧ್ಯದಲ್ಲಿ ಕೇಂದ್ರ ಸಚಿವರಾದ ಶ್ರೀ ಶಿವರಾಜ್ ಸಿಂಗ್ ಚೌಹಾಣ್‌ರವರು ವಿಶೇಷ ಸಂಚಿಕೆಗಳನ್ನು ಬಿಡುಗಡೆ ಮಾಡಿದರು. ಶ್ರೀ ತೋಟಂದಾರ್ಯ, ಶ್ರೀ ನಿರಂಜನ್, ಶ್ರೀ ವಿವೇಕಾನಂದ, ಶ್ರೀ ದರ್ಶನ್, ಶ್ರೀ ಅನಿಲ್ ಚಿಕ್ಕಮಾದು, ಶ್ರೀ ಎಚ್.ಎಂ. ಗಣೇಶ್ ಪ್ರಸಾದ್, ಶ್ರೀ ಎ.ಆರ್ ಕೃಷ್ಣಮೂರ್ತಿ, ಶ್ರೀ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶ್ರೀ ಜಿ.ಟಿ. ದೇವೇಗೌಡ, ಶ್ರೀ ಟಿ.ಎಸ್. ಶ್ರೀವತ್ಸ ಹಾಗೂ ಶ್ರೀ ಬಾಲರಾಜ್ ಮೊದಲಾದವರುಗಳಿದ್ದಾರೆ. (29 ಆಗಸ್ಟ್ 2025)




ಪಬ್ಲಿಕ್ ಶಾಲಾ ಶಿಕ್ಷಕರಿಗೆ ಏರ್ಪಡಿಸಿದ್ದ 'ಅಭಿಪ್ರೇರಣೆ ಹಾಗೂ 21ನೆಯ ಶತಮಾನದ ಕೌಶಲ್ಯಗಳ ತರಬೇತಿ ಕಾರ್ಯಾಗಾರ'ವನ್ನು ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಶ್ರೀ ಎಸ್.ಪಿ. ಮಂಜುನಾಥ್‌ರವರು ಉದ್ಘಾಟನೆ ಮಾಡಿದರು. (9 ಅಗಸ್ಟ್ 2025)

## ರಾಜೇಂದ್ರ ಶ್ರೀಗಳು ಶಿಕ್ಷಣವೇ ಸಮಾಜಕ್ಕೆ ನೀಡುವ ಶ್ರೇಷ್ಠ ಸೇವೆ ಎಂದು ನಂಬಿದ್ದರು – ಶ್ರೀ ಶಿವರಾಜ್ ಸಿಂಗ್ ಚೌಹಾಣ್

ಶಿಕ್ಷಣವೇ ಸಮಾಜಕ್ಕೆ ನೀಡುವ ಶ್ರೇಷ್ಠ ಸೇವೆ ಎಂದು ರಾಜೇಂದ್ರ ಶ್ರೀಗಳು ನಂಬಿದ್ದರು ಮತ್ತು ಅದರಲ್ಲಿ ದೃಢವಾದ ವಿಶ್ವಾಸವನ್ನು ಹೊಂದಿದ್ದರು ಎಂದು ಕೇಂದ್ರದ ಕೃಷಿ, ರೈತ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವರಾದ ಶ್ರೀ ಶಿವರಾಜ್ ಸಿಂಗ್ ಚೌಹಾಣ್‌ರವರು ಹೇಳಿದರು.

ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಆಗಸ್ಟ್ 29ರಂದು ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವವನ್ನು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಉದ್ಘಾಟಿಸಿ ಅವರು ಮಾತನಾಡಿದರು. ಇಂತಹ ಸಮಾಜಮುಖಿ ಭಾವನೆಯೊಂದಿಗೆ ರಾಜೇಂದ್ರ ಶ್ರೀಗಳು ಪ್ರಾಥಮಿಕ ಶಾಲೆಯಿಂದ ವಿಶ್ವವಿದ್ಯಾನಿಲಯಗಳನ್ನೊಳಗೊಂಡ ನೂರಾರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿದರು. ಇದರಿಂದಾಗಿ ಲಕ್ಷಾಂತರ ಬಡ ಮತ್ತು ಗ್ರಾಮೀಣ ಅಕ್ಷರ ವಂಚಿತ ಮಕ್ಕಳಿಗೆ ಶಿಕ್ಷಣ ಪಡೆಯುವ ಅವಕಾಶವಾಯಿತು. ಇಂದು ಅವರು ಸ್ಥಾಪಿಸಿದ ಸಂಸ್ಥೆಗಳು ಜ್ಞಾನದ ದಾರಿದೀಪಗಳಾಗಿವೆ. ಇಲ್ಲಿ ಶಿಕ್ಷಣ ಪಡೆದ ವೈದ್ಯರು, ಇಂಜಿನಿಯರುಗಳು, ಶಿಕ್ಷಕರು ಮತ್ತು ನಾಯಕರುಗಳು ಉತ್ತಮ ಸಂಸ್ಕಾರವಂತ ವ್ಯಕ್ತಿಗಳಾಗಿ ರೂಪುಗೊಂಡು ದೇಶ ಮಾತ್ರವಲ್ಲದೆ, ಜಗತ್ತಿನಾದ್ಯಂತ ಸೇವೆ ಸಲ್ಲಿಸುತ್ತಿದ್ದಾರೆ. ರಾಜೇಂದ್ರ ಶ್ರೀಗಳ ಜೀವನ 'ಸರ್ವಜನ ಹಿತಾಯ ಸರ್ವಜನ ಸುಖಾಯ' ಎಂಬ ಮಾತಿಗೆ ಅದ್ಭುತವಾದ ಉದಾಹರಣೆಯಾಗಿದೆ. ಅವರು ತಮ್ಮ ಜೀವನದ ಪ್ರತಿ ಕ್ಷಣವನ್ನು ಧರ್ಮದ ರಕ್ಷಣೆ ಮತ್ತು ಕಾಯಕಕ್ಕಾಗಿ ಮೀಸಲಿಟ್ಟಿದ್ದರು. ಶಿಕ್ಷಣ ಸಂಸ್ಥೆಗಳು, ವಿದ್ಯಾರ್ಥಿನಿಲಯಗಳನ್ನು ತೆರೆಯುವ ಮೂಲಕ ಮಾನವ ಸೇವೆಯೇ ನಿಜವಾದ ಭಗವಂತನ ಸೇವೆ ಎಂದು ನಂಬಿದ್ದರು. ಅಂತಹ ಪೂಜ್ಯರ ಸ್ಮರಣೆಯಲ್ಲಿ ಪಾಲ್ಗೊಂಡಿದ್ದು ನನಗೆ ಅತ್ಯಂತ ಧನ್ಯತಾ ಭಾವವನ್ನು ಮೂಡಿಸಿದೆ. "ಉದಾರ ಚರಿತಾನಾಂ ತು ವಸುಧೈವ ಕುಟುಂಬಕಂ ಎಂದು ಸಾವಿರಾರು ವರ್ಷಗಳ ಹಿಂದೆಯೇ ಇಲ್ಲಿನ ಸಂತರು, ಮಹಾತ್ಮರು ಸಾರಿದ್ದಾರೆ. ಭಾರತದಲ್ಲಿ ಮನುಷ್ಯರಲ್ಲಿ ಮಾತ್ರವಲ್ಲ, ಪ್ರಾಣಿಗಳಲ್ಲೂ ಸದ್ಭಾವನೆಯ ಗುಣವಿದೆ. ಭಾರತ ಜಗತ್ತಿಗೆ ಸದಾ ವಿಶ್ವಕಲ್ಯಾಣದ ಸಂದೇಶವನ್ನು ನೀಡುತ್ತಿದೆ ಎಂದು ಹೇಳಿದರು.

ಶ್ರೀ ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳವರು ಮೈಸೂರಿಗೆ ಅರಮನೆ ಗರಿಮೆಯಾದರೆ, ಸುತ್ತೂರು ಶ್ರೀಮಠ ಹಿರಿಮೆಯಾಗಿದೆ. ಸಮಾಜದಲ್ಲಿ ಶಾಂತಿ, ಸೌಹಾರ್ದ ಸ್ಥಾಪನೆಗಾಗಿಯೇ ಸ್ಥಾಪನೆಯಾದ ಮಠವಿದು. ವಚನಕಾರರಾದ ಶ್ರೀ ಘನಲಿಂಗ ಶಿವಯೋಗಿಗಳು, ಶ್ರೀ ಮಂತ್ರಮಹರ್ಷಿಗಳಂತಹ ಪೂಜ್ಯರನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದೆ. ಅಕ್ಷರ ಕ್ರಾಂತಿಯನ್ನು ಮಾಡಿದ ರಾಜೇಂದ್ರ ಶ್ರೀಗಳು ನಾಡಿನ ಉದ್ದಗಲಕ್ಕೂ ಮಠದ ಸೇವಾ ಕಾರ್ಯಗಳನ್ನು ಎಲ್ಲ ಕ್ಷೇತ್ರಕ್ಕೂ ವಿಸ್ತರಿಸಿದರು. ಅವರು ಮಾತ್ರ ಉದ್ಧಾರವಾಗದೇ, ಎಲ್ಲರ ಬದುಕನ್ನು ಉದ್ಧಾರವಾಗಿಸಿದರು. ಭವಸಾಗರದಿಂದ ಎಲ್ಲರನ್ನೂ ದಾಟಿಸುವ ಕೆಲಸವನ್ನು ಮಾಡಿದರು. ಬಹಳ ಕಷ್ಟಕಾಲದಲ್ಲಿ ಪ್ರಸಾದನಿಲಯಗಳನ್ನು ತೆರೆದರು. ಅನೇಕ ಕಷ್ಟದ ಸಂದರ್ಭಗಳಲ್ಲಿಯೂ ತ್ಯಾಗದಿಂದ ಪ್ರಸಾದನಿಲಯಗಳನ್ನು ಮುನ್ನಡೆಸಿದ್ದಾರೆ. ರಾಜೇಂದ್ರ ಶ್ರೀಗಳು ಈ ಭಾಗದ ಜನರಿಗೆ ದಾರಿದೀಪವಾದರು. ಪೂಜ್ಯ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಬಹಳ ದೊಡ್ಡ ಜ್ಯೋತಿಯಾಗಿ ಎಲ್ಲರನ್ನೂ ಕೈಹಿಡಿದು ಮುನ್ನಡೆಸುತ್ತಿದ್ದಾರೆ. ಸುತ್ತೂರು ಮತ್ತು ಸಿದ್ಧಗಂಗಾ ಶ್ರೀಮಠಗಳ ಮಧ್ಯೆ ಅವಿನಾಭಾವ ಸಂಬಂಧವಿದೆ. ಶಿವಕುಮಾರ ಶ್ರೀಗಳು ಮತ್ತು ರಾಜೇಂದ್ರ ಶ್ರೀಗಳು ಸಮಾಜದ ಎರಡು ಕಣ್ಣುಗಳಿದ್ದಂತೆ ಎಂದು ಗವಿಮಠದ ಶ್ರೀ ಗೌರಿಶಂಕರ ಸ್ವಾಮಿಗಳು ಹೇಳುತ್ತಿದ್ದರೆಂದು ಸ್ಮರಿಸಿದರು.

ಇದೇ ಸಂದರ್ಭದಲ್ಲಿ 'ಸರ್ವದರ್ಶನ ಸಂಗ್ರಹ' ಮತ್ತು 'ಕಾಯಕ ತಪಸ್ವಿ' ಕೃತಿಗಳ ನಾಲ್ಕನೇ ಆವೃತ್ತಿಗಳು ಹಾಗೂ 'ಪ್ರಸಾದ' ಮತ್ತು 'ಜೆಎಸ್‌ಎಸ್ ವಾರ್ತಾಪತ್ರ'ಗಳ ವಿಶೇಷ ಸಂಚಿಕೆಗಳನ್ನು ಬಿಡುಗಡೆಗೊಳಿಸಲಾಯಿತು.

ಲೋಕಸಭಾ ಸದಸ್ಯರಾದ ಶ್ರೀ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರುಗಳಾದ ಶ್ರೀ ಎ.ಆರ್. ಕೃಷ್ಣಮೂರ್ತಿ, ಶ್ರೀ ಹೆಚ್.ಎಂ. ಗಣೇಶ್‌ಪ್ರಸಾದ್, ಶ್ರೀ ಟಿ.ಎಸ್. ಶ್ರೀವತ್ಸರವರುಗಳು ಮಾತನಾಡಿದರು. ಶಾಸಕರು ಹಾಗೂ ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ ಅಧ್ಯಕ್ಷರಾದ ಶ್ರೀ ಅನಿಲ್ ಚಿಕ್ಕಮಾದು, ಶಾಸಕರು ಹಾಗೂ ಮಾಜಿ ಸಚಿವರಾದ ಶ್ರೀ ಜಿ.ಟಿ. ದೇವೇಗೌಡ, ಶಾಸಕರುಗಳಾದ ಶ್ರೀ ಕೆ. ವಿವೇಕಾನಂದ, ಶ್ರೀ ದರ್ಶನ್ ಧ್ರುವನಾರಾಯಣ್, ಮಾಜಿ ಶಾಸಕರುಗಳಾದ ಶ್ರೀ ತೋಂಟದಾರ್ಯ, ಶ್ರೀ ಬಾಲರಾಜ್, ಶ್ರೀ ಸಿ.ಎಸ್. ನಿರಂಜನಕುಮಾರ್ ಮೊದಲಾದವರುಗಳು ಉಪಸ್ಥಿತರಿದ್ದರು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಸಿ. ಸೋಮಶೇಖರ್ ಸ್ವಾಗತಿಸಿದರು. ಪ್ರೊ. ಮೊರಬದ ಮಲ್ಲಿಕಾರ್ಜುನರವರು ವಂದಿಸಿದರು. ಶ್ರೀಮತಿ ಕೆ.ಜಿ. ವಿನುತ, ಶ್ರೀಮತಿ ರೂಪ ಗುರುಪ್ರಸಾದ್ ಕು. ಭಾರತಿ, ಕು. ಭಾನುಮತಿ ಮತ್ತು ತಂಡದವರು ಪ್ರಾರ್ಥಿಸಿದರು. ಪ್ರೊ. ಕೆ.ಎಸ್. ಸುರೇಶ್ ಕಾರ್ಯಕ್ರಮ ನಿರೂಪಿಸಿದರು.

## ಪ್ರಸಾದ ಲೇಖನ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ




ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ನಡೆದ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಪ್ರಸಾದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಮಹಾವಿದ್ಯಾಪೀಠದ ಕಾರ್ಯದರ್ಶಿ–2 ಶ್ರೀ ಎಸ್. ಶಿವಕುಮಾರಸ್ವಾಮಿಯವರೂ ಇದ್ದಾರೆ. (29 ಆಗಸ್ಟ್ 2025)

ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜಯಂತಿ ಅಂಗವಾಗಿ ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಪ್ರಸಾದ ಲೇಖನ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ

ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಆಗಸ್ಟ್ 29ರಂದು ನಡೆದ ರಾಜೇಂದ್ರ ಶ್ರೀಗಳವರ ಶತೋತ್ತರ ದಶಮಾನೋತ್ಸವದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯದರ್ಶಿಗಳಾದ ಶ್ರೀ ಎಸ್. ಶಿವಕುಮಾರಸ್ವಾಮಿಯವರು ಬಹುಮಾನಗಳನ್ನು ವಿತರಿಸಿದರು.

ಪದವಿಪೂರ್ವ ವಿಭಾಗದಲ್ಲಿ ಮೈಸೂರು ವಿಜಯನಗರದ ಸದ್ವಿದ್ಯಾ ಸೆಮಿ–ರೆಸಿಡೆನ್ಸಿಯಲ್ ಪದವಿಪೂರ್ವ ಕಾಲೇಜಿನ ಕು. ಎಲ್. ದೀಕ್ಷಾ ಪ್ರಥಮ, ಹಾಸನ ಸಂತ ಜೋಸೆಫರ ಪದವಿಪೂರ್ವ ಕಾಲೇಜಿನ ಕು. ನಂದಿನಿ ದ್ವಿತೀಯ, ಸೋಮವಾರಪೇಟೆ ತಾಲ್ಲೂಕು ನೆಲ್ಲಿಹುದಿಕೇರಿ ಸರ್ಕಾರಿ ಪದವಿಪೂರ್ವ ಕಾಲೇಜಿನ ಕು. ಕೆ.ಎಸ್. ಸಫ ತೃತೀಯ ಬಹುಮಾನ ಪಡೆದರು.

ಪದವಿ ವಿಭಾಗದಲ್ಲಿ ಮೈಸೂರು ಹಿಂದೂಸ್ತಾನ್ ಕಾಲೇಜಿನ ಕು. ಎ.ಎಂ. ಪ್ರಣವಿ ಪ್ರಥಮ, ತಾಂಡವಪುರ ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದ ಕು. ಕೆ.ಎಸ್. ಧನ್ಯಶ್ರೀ ದ್ವಿತೀಯ, ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ಕು. ಎಂ. ನಿಶಾ ತೃತೀಯ ಬಹುಮಾನ ಪಡೆದರು.

ಸ್ನಾತಕೋತ್ತರ ವಿಭಾಗದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಕು. ಆರ್. ಕುಸುಮಾಬಾಯಿ ಪ್ರಥಮ, ಮೈಸೂರು ಊಟಿ ರಸ್ತೆ ಜೆಎಸ್‌ಎಸ್ ಕಾಲೇಜಿನ ಕು. ಹರ್ಷಿತ ದ್ವಿತೀಯ ಹಾಗೂ ಶ್ರೀ ಆಕಾಶ್ ತೃತೀಯ ಬಹುಮಾನ ಪಡೆದರು. ಶ್ರೀ ಜಿ.ಎಂ. ಪ್ರಸಾದ್ ವಿವರಗಳನ್ನು ಮಂಡಿಸಿದರು.

## ಜೆಎಸ್‌ಎಸ್ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದವರಿಗೆ ಅಭಿನಂದನೆ

ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಆಗಸ್ಟ್ 29ರಂದು ನಡೆದ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವ ಸಂದರ್ಭದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ವಿವಿಧ ಸಂಸ್ಥೆಗಳಲ್ಲಿ ಸೇವೆಸಲ್ಲಿಸಿ 2024–25ನೇ ಸಾಲಿನಲ್ಲಿ ನಿವೃತ್ತರಾದವರಿಗೆ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ನಿವೃತ್ತರ ಪರಿಚಯದ 'ತೇರನೆಳೆದವರು' ಪುಸ್ತಕವನ್ನು ಬಿಡುಗಡೆಗೊಳಿಸಿ, ಅಭಿನಂದಿಸಿ ಆಶೀರ್ವದಿಸಿದರು.

ಸೇವೆಯ ದಿನಗಳ ಅನುಭವಗಳನ್ನು ಹಂಚಿಕೊಂಡ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯದ ಡಾ. ಸ್ವರೂಪ ಸಿಂಹರವರು ಜೆಎಸ್‌ಎಸ್ ಸಂಸ್ಥೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿದ್ದು ಸೌಭಾಗ್ಯ. ಒಂದು ಕುಟುಂಬದ ಸದಸ್ಯರ ರೀತಿಯಲ್ಲಿ ಎಲ್ಲ ನೌಕರರನ್ನು ಕಾಣಲಾಗುತ್ತದೆ. ಸೇವೆಯ ಸಂದರ್ಭದಲ್ಲಿ ಸಹೋದ್ಯೋಗಿಗಳು ಮತ್ತು ವಿದ್ಯಾರ್ಥಿಗಳೊಂದಿಗೆ ಕಳೆದ ಕ್ಷಣಗಳು ಜೀವನದಲ್ಲಿ ಸದಾ ಹಸಿರಾಗಿರುತ್ತವೆ. ಜೆಎಸ್‌ಎಸ್ ಸಂಸ್ಥೆ ಇನ್ನೂ ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿಯನ್ನು ಹೊಂದಲಿ ಎಂಬುದೇ ನಮ್ಮೆಲ್ಲರ ಆಶಯ ಎಂದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಪೀಠದ ಸಂಸ್ಥೆಗಳಲ್ಲಿ ಸೇವೆಸಲ್ಲಿಸಿ 2024 ಸೆಪ್ಟೆಂಬರ್‌ನಿಂದ 2025 ಆಗಸ್ಟ್ ಅಂತ್ಯದವರೆಗೆ ನಿವೃತ್ತರಾದವರು ಹಾಗೂ ಸೇವೆಯಿಂದ ಬಿಡುಗಡೆಗೊಂಡವರಿಗೆ ಅಭಿನಂದನೆ ಮತ್ತು ಸೇವೆಯಲ್ಲಿ ಇರುವಾಗಲೇ ಅಗಲಿದವರ ಕುಟುಂಬದವರಿಗೆ ಸಾಂತ್ವನ ಹೇಳಲಾಯಿತು. – ಹೀಗೆ ಒಟ್ಟು 202 ನೌಕರರು ಹಾಗೂ ಅವರ ಕುಟುಂಬವರ್ಗದವರನ್ನು ಪೂಜ್ಯರು ಆಶೀರ್ವದಿಸಿ ಅಭಿನಂದಿಸಿದರು.

ಶ್ರೀ ಬಿ. ನಿರಂಜನಮೂರ್ತಿ ಸ್ವಾಗತಿಸಿದರು. ಡಾ. ಬಿ. ಪ್ರಭುಸ್ವಾಮಿ, ಕು. ಎಚ್.ಎಸ್. ಅಂಬಿಕಾ, ಡಾ. ಪ್ರಿಯದರ್ಶಿನಿ, ಡಾ. ಹೆಚ್.ಆರ್. ಮಮತ, ಶ್ರೀ

ಆರ್.ಎಸ್. ಕುಮಾರ್, ಶ್ರೀಮತಿ ಡಿ.ಎಸ್. ಅಂಬಿಕಾ, ಶ್ರೀಮತಿ ಕೆ.ಜಿ. ವಿನುತಾ, ಶ್ರೀಮತಿ ಸಿ. ವಾಣಿ, ಶ್ರೀಮತಿ ಹೆಚ್.ಎಸ್. ಮಾನಸ, ಡಾ. ಬಿ.ಎಸ್. ಸುದೀಪ್ ಹಾಗೂ ಶ್ರೀ ಜಿ. ಶಿವಸ್ವಾಮಿಯವರುಗಳು ನಿವೃತ್ತರುಗಳ ಪರಿಚಯವನ್ನು ನಡೆಸಿಕೊಟ್ಟರು. ಕಾನೂನು ಕಾಲೇಜು ವಿದ್ಯಾರ್ಥಿಗಳಾದ ಕು. ಎಸ್. ಲಿಖಿತ ಮತ್ತು ಕು. ವಿನ್ಮಯಿರವರು ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕರಾದ ಡಾ. ಪಿ. ಶಿವಾನಂದ ಭಾರತಿ ವಂದಿಸಿದರು. ಶ್ರೀಮತಿ ಎಂ. ತೇಜಸ್ವಿನಿ ನಿರೂಪಿಸಿದರು.

## ಉತ್ತಮ ವಾರ್ಷಿಕ ಸಂಚಿಕೆಗಳಿಗೆ ಬಹುಮಾನ ವಿತರಣೆ




ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಆಗಸ್ಟ್ 29ರಂದು ಏರ್ಪಡಿಸಿದ್ದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ 2024–25ನೇ ಸಾಲಿನ ಉತ್ತಮ ವಾರ್ಷಿಕ ಸಂಚಿಕೆಗಳಿಗೆ ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠರವರು ಬಹುಮಾನಗಳನ್ನು ವಿತರಿಸಿದರು.

ಮೈಸೂರಿನ ಜೆಎಸ್‌ಎಸ್ ದಂತವೈದ್ಯಕೀಯ ಕಾಲೇಜಿನ 'ಪ್ರತಿಬಿಂಬ', ಚಾಮರಾಜನಗರ ಜೆಎಸ್‌ಎಸ್ ಮಹಿಳಾ ಕಾಲೇಜಿನ 'ಸುವರ್ಣ', ನಂಜನಗೂಡು ಪಾಲಿಟೆಕ್ನಿಕ್‌ನ 'ನವ್ಯ', ಮೈಸೂರು ಶ್ರೀ ಶಿವರಾತ್ರೀಶ್ವರ ನಗರದ ಜೆಎಸ್‌ಎಸ್ ಪ್ರೌಢಶಾಲೆಯ 'ಹೊಂಗಿರಣ' ಸಂಚಿಕೆಗಳಿಗೆ ಪ್ರಥಮ ಬಹುಮಾನ, ಶ್ರೀ ಜಯಚಾಮರಾಜೇಂದ್ರ ಇಂಜಿನಿಯರಿಂಗ್ ಕಾಲೇಜಿನ 'ಜೇಜೀನ್', ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ 'ಸಿಂಧೂರ', ಸರಸ್ವತಿಪುರಂ ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನ 'ಸಿಂಚನ', ಊಟಿ ಜೆಎಸ್‌ಎಸ್ ಪಬ್ಲಿಕ್ ಶಾಲೆಯ 'ಜ್ಞಾನಜ್ಯೋತಿ' ಸಂಚಿಕೆಗಳಿಗೆ ದ್ವಿತೀಯ ಬಹುಮಾನ, ಊಟಿ ಜೆಎಸ್‌ಎಸ್ ಫಾರ್ಮಸಿ ಕಾಲೇಜಿನ 'ಫಾರ್ಮಸಾಗ', ಮೈಸೂರು ಜೆಎಸ್‌ಎಸ್ ನರ್ಸಿಂಗ್ ಕಾಲೇಜಿನ 'ಬಿಂಬ', ಮೈಸೂರು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್‌ನ 'ಚೈತನ್ಯ', ಸುತ್ತೂರು ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ 'ಸುತ್ತೂರು ಚಿಗುರು' ಸಂಚಿಕೆಗಳಿಗೆ ತೃತೀಯ ಬಹುಮಾನ ವಿತರಿಸಲಾಯಿತು. ಶ್ರೀ ಎನ್.ಆರ್. ಶಿವಕುಮಾರ್‌ರವರು ವಿವರಗಳನ್ನು ಮಂಡಿಸಿದರು.

## ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ




ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ನಡೆದ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತೋತ್ತರ ದಶಮಾನೋತ್ಸವ ಸಂದರ್ಭದಲ್ಲಿ ಪರಮಪೂಜ್ಯ ಜಗದ್ಗುರುಗಳವರು ಜೆಎಸ್‌ಎಸ್ ವಿದ್ಯಾಸಂಸ್ಥೆಗಳಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪುರಸ್ಕರಿಸಿ ಆಶೀರ್ವದಿಸಿದರು. (29 ಆಗಸ್ಟ್ 2025)

ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಆಗಸ್ಟ್ 29ರಂದು ನೆರವೇರಿದ ರಾಜೇಂದ್ರ ಶ್ರೀಗಳವರ ಶತೋತ್ತರ ದಶಮಾನೋತ್ಸವದ ಸಂದರ್ಭದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರೌಢಶಾಲೆಗಳು, ಪದವಿಪೂರ್ವ ಕಾಲೇಜುಗಳು, ಪಬ್ಲಿಕ್ ಶಾಲೆ ಹಾಗೂ ಜೆಎಸ್‌ಎಸ್ ಕೆಒಎಸ್‌ನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಮೊದಲ ಮೂವರು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಿ ಆಶೀರ್ವದಿಸಿದರು.

ಎಸ್‌ಎಸ್‌ಎಲ್‌ಸಿಯ ಪ್ರೌಢಶಾಲಾ ವಿಭಾಗದಲ್ಲಿ ಕನ್ನಡ ಮತ್ತು ಆಂಗ್ಲ ಮಾಧ್ಯಮದ ಆರು ವಿದ್ಯಾರ್ಥಿಗಳು, ಪಿಯುಸಿ ಕಲಾ ವಿಭಾಗದ ಆರು, ವಾಣಿಜ್ಯ ವಿಭಾಗದ ನಾಲ್ಕು ಮತ್ತು ವಿಜ್ಞಾನ ವಿಭಾಗದ ನಾಲ್ಕು ವಿದ್ಯಾರ್ಥಿಗಳು, ಪಬ್ಲಿಕ್ ಶಾಲಾ ವಿಭಾಗದ 10ನೇ ತರಗತಿಯ ನಾಲ್ಕು ಹಾಗೂ 12ನೇ ತರಗತಿಯ ಕಲಾ, ವಾಣಿಜ್ಯಶಾಸ್ತ್ರ ಮತ್ತು ವಿಜ್ಞಾನ ವಿಭಾಗದ ಒಂಬತ್ತು ವಿದ್ಯಾರ್ಥಿಗಳು ಹಾಗೂ ಜೆಎಸ್‌ಎಸ್ ಕರ್ನಾಟಕ ಮುಕ್ತ ವಿದ್ಯಾಲಯದ ಎಸ್‌ಎಸ್‌ಎಲ್‌ಸಿಯ ನಾಲ್ಕು ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರ ಸ್ವೀಕರಿಸಿದರು. ಶ್ರೀ ಎಸ್.ಸಿ. ಚನ್ನಬಸಪ್ಪ, ಶ್ರೀ ಎಂ. ಶಿವಮಾದಪ್ಪ ಮತ್ತು ಶ್ರೀ ಅಶೋಕ್ ಪಾಳ್ಯರವರುಗಳು ವಿವರಗಳನ್ನು ಮಂಡಿಸಿದರು.

## ಶಕ್ತಿ, ಯುಕ್ತಿಯಿಂದ ಗೆಲ್ಲಲಾಗದ್ದನ್ನು ಭಕ್ತಿಯಿಂದ ಗೆಲ್ಲಬಹುದು




ಸುತ್ತೂರು ಶ್ರೀಕ್ಷೇತ್ರದಲ್ಲಿ ನಡೆದ ಶ್ರಾವಣಮಾಸದ ಪ್ರವಚನ ಸಮಾರೋಪ ಸಮಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀ ವಿ.ಎನ್. ಮಲ್ಲಿಕಾರ್ಜುನಸ್ವಾಮಿರವರು ಸಮಾರೋಪ ಭಾಷಣ ಮಾಡಿದರು. ಬಿ.ಜಿ. ಪುರ ಶ್ರೀ ಹೊರಮಠದ ಶ್ರೀ ಚಂದ್ರಶೇಖರ ಸ್ವಾಮಿಗಳು, ಚಾಮರಾಜನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯವಸ್ಥಾಪಕರಾದ ಶ್ರೀ ಬಿ.ಎನ್. ನಾಗೇಂದ್ರ ಪ್ರಸಾದ್‌ರವರಿದ್ದಾರೆ. (22 ಆಗಸ್ಟ್ 2025)

ಶಕ್ತಿ, ಯುಕ್ತಿಯಿಂದ ಗೆಲ್ಲಲಾಗದ್ದನ್ನು ಭಕ್ತಿಯಿಂದ ಗೆಲ್ಲಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀ ವಿ.ಎನ್. ಮಲ್ಲಿಕಾರ್ಜುನಸ್ವಾಮಿಯವರು ಅಭಿಪ್ರಾಯಪಟ್ಟರು.

ಸುತ್ತೂರು ಶ್ರೀಕ್ಷೇತ್ರದಲ್ಲಿ ದಿನಾಂಕ 22.8.2025ರಂದು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಆಶೀರ್ವಾದದಿಂದ ಶ್ರಾವಣಮಾಸದಾದ್ಯಂತ ಜರುಗಿದ, ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನದ ಸಮಾರೋಪ ನುಡಿಗಳನ್ನಾಡಿದ ಅವರು, ಪರಮೇಶ್ವರನು ಭಕ್ತಿಗೆ ಮಾತ್ರ ಒಲಿಯುತ್ತಾನೆ ಎಂಬುದನ್ನು ಲಕ್ಕಣ್ಣ ದಂಡೇಶ ವಿರಚಿತ 'ಶಿವತತ್ತ್ವ ಚಿಂತಾಮಣಿ' ಕೃತಿಯು ತಿಳಿಸುತ್ತದೆ. ಶಿವತತ್ತ್ವವು ಎಲ್ಲಾ ಕಾಲಕ್ಕೂ ನವನವೀನವಾಗಿದೆ. ಶ್ರಾವಣಮಾಸವು ಸೃಷ್ಟಿಯ ರಮ್ಯತೆಯಲ್ಲಿ ಮಂದಹಾಸ ಮೂಡಿಸುವುದಾಗಿದೆ. ಶ್ರವಣ ಎಂದರೆ ಸದ್ವಿಚಾರಗಳನ್ನು ಕೇಳಿಸಿಕೊಂಡು, ಮನನ ಮಾಡಿಕೊಳ್ಳುವುದು. 12ನೇ ಶತಮಾನದ ಶಿವಶರಣರ ನಡೆನುಡಿಯಿಂದ ವಚನಕ್ರಾಂತಿಯು ಈ ಪುಣ್ಯಭೂಮಿಯಲ್ಲಿ ಸಂಭವಿಸಿತು. ಇಂತಹ ಶರಣರ ನೆಲೆಯಲ್ಲಿ ನಾವೆಲ್ಲರೂ ಬಾಳಿ ಬದುಕುತ್ತಿರುವುದು ನಮ್ಮ ಪುಣ್ಯ. ಸುತ್ತೂರು ಶ್ರೀಮಠವು ಶಿವತತ್ತ್ವಗಳನ್ನು ವಿದ್ಯಾರ್ಥಿಗಳಿಗೆ, ಭಕ್ತರಿಗೆ ಇಂತಹ ಪ್ರವಚನ ಕಾರ್ಯಕ್ರಮಗಳ ಮೂಲಕ ಪಸರಿಸುತ್ತಿದೆ ಎಂದು ತಿಳಿಸಿದರು.

ಚಾಮರಾಜನಗರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ವ್ಯವಸ್ಥಾಪಕರಾದ ಶ್ರೀ ಬಿ.ಎನ್. ನಾಗೇಂದ್ರ ಪ್ರಸಾದ್‌ರವರು, ಪ್ರವಚನಗಳನ್ನು ಚಿಕ್ಕ

ವಯಸ್ಸಿನಲ್ಲಿಯೇ ಅರ್ಥೈಸಿಕೊಂಡು ಬದುಕಿನಲ್ಲಿ ಅಳವಡಿಸಿಕೊಳ್ಳುವುದು ಬಹಳ ಮುಖ್ಯ. ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉನ್ನತ ವ್ಯಾಸಂಗ ಮಾಡಿ ಉತ್ತಮ ಕೃತಿಗಳನ್ನು ರಚಿಸಬೇಕು. ಪ್ರಗತಿಪರ ರೈತರಾಗಿ ದೇಶದ ಬೆನ್ನೆಲುಬಾಗಬೇಕು ಎಂದು ಸಲಹೆ ನೀಡಿದರು.

ಬಿ.ಜಿ.ಪುರ ಶ್ರೀ ಹೊರಮಠದ ಶ್ರೀ ಚಂದ್ರಶೇಖರ ಸ್ವಾಮಿಗಳು, ಜೀವನ ಎಂಬುದು ಅಮೂಲ್ಯ ರತ್ನ, ಇಂತಹ ಜೀವನ ಎಂದೂ ಸುಮ್ಮನೆ ಬಂದುದಲ್ಲ. ಸುತ್ತೂರು ಶ್ರೀಗಳವರು ತ್ರಿವಿಧ ದಾಸೋಹವನ್ನು ನಾಡಿಗೆ ನೀಡುತ್ತಿರುವುದು ಅನುಪಮವಾದ ಕೊಡುಗೆ. ಸಾರ್ಥಕ ಬದುಕನ್ನು ಕಂಡುಕೊಳ್ಳಬೇಕು. ಮನುಷ್ಯ ಬದುಕಿದ್ದಾಗ ಮಾತ್ರ ಬೆಲೆ. ಜೀವ ಹೋದ ಮೇಲೆ ಬೆಲೆ ಇರುವುದಿಲ್ಲ. ಜಗತ್ತಿಗೆ ಏನಾದರೂ ಕೊಡುಗೆ ನೀಡುವ ಮನೋಭಾವನೆಯನ್ನು ಮನುಷ್ಯ ಬೆಳೆಸಿಕೊಳ್ಳಬೇಕೇ ಹೊರತು, ಜಗತ್ತಿನಿಂದ ಏನನ್ನೂ ಬಯಸಬಾರದು. ದೇವರಲ್ಲಿ ಭಕ್ತಿಯಿಂದ ನಡೆದುಕೊಂಡರೆ ಮಾತ್ರ ಫಲಾಫಲಗಳು ದೊರೆಯುತ್ತವೆ ಎಂದು ನುಡಿದರು.

ಶ್ರಾವಣ ಮಾಸದ ಪೂಜಾನುಷ್ಠಾನದಲ್ಲಿ ಹರಗುರು ಚರಮೂರ್ತಿಗಳು, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಶ್ರೀ ಎಸ್. ಶಿವಕುಮಾರಸ್ವಾಮಿಯವರು, ಜೆಎಸ್‌ಎಸ್ ಸಂಸ್ಥೆಗಳ ಆಡಳಿತಾಧಿಕಾರಿಗಳಾದ ಶ್ರೀ ಎಸ್.ಪಿ. ಉದಯಶಂಕರ್‌ರವರು ಉಪಸ್ಥಿತರಿದ್ದರು.

ಲಕ್ಕಣ್ಣ ದಂಡೇಶ ವಿರಚಿತ 'ಶಿವತತ್ತ್ವ ಚಿಂತಾಮಣಿ' ಪ್ರವಚನವನ್ನು ಜೆಎಸ್‌ಎಸ್ ಕಾಲೇಜಿನ ಕನ್ನಡ ಪ್ರಾಧ್ಯಾಪಕರಾದ ಪ್ರೊ. ಹೆಚ್.ಬಿ. ದೇವಣ್ಣನವರು ನಡೆಸಿಕೊಟ್ಟರು. ಪ್ರವಚನವನ್ನು ಆಲಿಸಿ ಪ್ರಬಂಧಗಳನ್ನು ರಚಿಸಿದ ಶ್ರೋತೃಗಳು ಹಾಗೂ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಶಾಲಾ ಮಕ್ಕಳು ಪ್ರಾರ್ಥಿಸಿದರು. ಶ್ರೀ ಹೆಚ್.ಎಂ. ದಯಾನಂದಸ್ವಾಮಿ ಸ್ವಾಗತಿಸಿದರು. ಶ್ರೀಮತಿ ಕೆ.ಎಂ. ಬಿಂದು ವಂದಿಸಿದರು. ಶ್ರೀ ಎಸ್. ಚಂದ್ರಮೌಳೇಶ್ವರ ನಿರೂಪಿಸಿದರು. ಗುರುಕುಲದ ಸಾಧಕರು, ಜೆಎಸ್‌ಎಸ್ ಸಂಸ್ಥೆಗಳ ಅಧಿಕಾರಿ ವರ್ಗದವರು, ಸುತ್ತೂರು ಹಾಗೂ ಸುತ್ತಮುತ್ತಲ ಗ್ರಾಮದ ಸದ್ಭಕ್ತರು ಹಾಗೂ ಆಧ್ಯಾತ್ಮಿಕ ಜಿಜ್ಞಾಸುಗಳು ಪಾಲ್ಗೊಂಡಿದ್ದರು.

## ಭಕ್ತಿಯಿಂದ ಲೌಕಿಕ ಜಂಜಾಟಗಳಿಗೆ ಮುಕ್ತಿ

ದೈನಂದಿನ ಲೌಕಿಕ ಜಂಜಾಟಗಳಿಂದ ಹೊರಬರಬೇಕಾದರೆ ಭಕ್ತಿಯಿಂದ ಭಗವಂತನ ಸ್ಮರಣೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ನಗರ ಯೋಜನಾಧಿಕಾರಿಗಳಾದ ಶ್ರೀಮತಿ ಜಿ. ಸೀಮಂತಿನಿಯವರು ಹೇಳಿದರು.

ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 23.8.2025 ರಂದು ನಡೆದ ಶ್ರಾವಣಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪದಲ್ಲಿ ಅವರು ಮಾತನಾಡಿದರು. ಶ್ರಾವಣಮಾಸದಲ್ಲಿ ಸದ್ವಿಚಾರಗಳನ್ನು ತಿಳಿದುಕೊಳ್ಳಲು ಸಾಕಷ್ಟು ಅವಕಾಶಗಳು ದೊರಕುತ್ತವೆ. ಅಧ್ಯಯನಕ್ಕೆ ಇದು ಪ್ರಶಸ್ತವಾದ ಕಾಲ. ಹಿಂದಿನ ಕಾಲದಲ್ಲಿ ಈ ಮಾಸದಲ್ಲಿ ಅಧ್ಯಯನದ ಹೊಸ ಶಾಖೆಗಳನ್ನು ಪ್ರಾರಂಭಿಸುತ್ತಿದ್ದರು. ಶಾಸ್ತ್ರ, ಪುರಾಣ, ಕಾವ್ಯಗಳು ಮತ್ತು ಶರಣರ ವಚನಗಳನ್ನು ಎಲ್ಲರೂ ಕೇಳಲು ಸಾಧ್ಯವಾಗುವಂತಹ ಮಾಸವಿದು. ಶ್ರವಣ, ಮನನ ಮತ್ತು ನಿಧಿಧ್ಯಾಸನದ ಮೂಲಕ ಜೀವನ ಸಾಕ್ಷಾತ್ಕಾರಗೊಳಿಸಿಕೊಳ್ಳಬೇಕು ಎಂದು ಹೇಳಿದರು.

ಡಾ. ಕೆ. ಅನಂತರಾಮುರವರು ಮಾತನಾಡಿ ಲಕ್ಕಣ್ಣ ದಂಡೇಶನು ಶಿವತತ್ತ್ವ ಚಿಂತಾಮಣಿಯ ಒಂದೊಂದು ಪದ್ಯದಲ್ಲಿಯೂ ಒಬ್ಬೊಬ್ಬ ವ್ಯಕ್ತಿಯ ಮಹತ್ವಪೂರ್ಣವಾದ ಜೀವನವನ್ನೇ ಅಡಕಗೊಳಿಸಿದ್ದಾನೆ. ತಮಿಳುನಾಡಿನ ತಿರುವಣ್ಣೂರು ಎಂಬ ಗ್ರಾಮದಲ್ಲಿ ಅತಿಭಕ್ತನೆಂಬ ಮಹಾನ್ ಶಿವಭಕ್ತನಿದ್ದನು. ಮೀನು ಹಿಡಿಯುವುದು ಆತನ



ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ನಡೆದ ಶ್ರಾವಣಮಾಸದ ಪೂಜಾನುಷ್ಠಾನ ಮತ್ತು ಪ್ರವಚನ ಸಮಾರೋಪದಲ್ಲಿ ಶ್ರೀಮತಿ ಜಿ. ಸೀಮಂತಿನಿಯವರು ಮಾತನಾಡುತ್ತಿರುವುದು. ಡಾ. ಕೆ. ಅನಂತರಾಮು, ಡಾ. ಬಿ.ವಿ. ವಸಂತಕುಮಾರ್, ಶ್ರೀಮತಿ ಎಲ್. ಮೇಘಲಾ ಹಾಗೂ ಕುಣಿಗಲ್ ಹಿರೇಮಠ, ಹುಲಿಯೂರುದುರ್ಗ ಮತ್ತು ಕುದೇರು ಮಠದ ಶ್ರೀಗಳಿದ್ದಾರೆ. (23 ಆಗಸ್ಟ್ 2025)

ಕಾಯಕವಾಗಿತ್ತು. ಅದರಿಂದ ಬಂದ ಸಂಪಾದನೆಯಲ್ಲಿ ನಿತ್ಯವೂ ಜಂಗಮ ಸೇವೆಯನ್ನು ಮಾಡುತ್ತಿದ್ದನು. ಆತ ಮೀನು ಹಿಡಿಯುವ ಸಂದರ್ಭದಲ್ಲಿ ಬಲೆಗೆ ಬೀಳುವ ಮೊದಲ ಮೀನನ್ನು ಶಿವನಿಗೇ ಅರ್ಪಿಸುತ್ತೇನೆಂಬ ಸಂಕಲ್ಪದಿಂದ ಅದನ್ನು ಮರಳಿ ನೀರಿಗೆ ಬಿಡುತ್ತಿದ್ದನು. ಒಂದು ದಿನ ಶಿವನು ಅತಿಭಕ್ತನನ್ನು ಪರೀಕ್ಷಿಸಲು ಚಿನ್ನ ಮತ್ತು ವಜ್ರದ ಹರಳುಗಳಿಂದ ಕೂಡಿದ ಮೀನನ್ನು ಮೊದಲು ಬಲೆಗೆ ಬೀಳಿಸುತ್ತಾನೆ. ಅದು ಶಿವನಿಗೇ ಅರ್ಪಿತವಾದುದು ಎಂದು ಆತ ಮರಳಿ ಅದನ್ನು ಬಿಡುತ್ತಾನೆ. ಪುನಃಪುನಃ ಮತ್ತದೇ ಮೀನು ಅವನ ಬಲೆಯಲ್ಲಿ ಬೀಳುತ್ತದೆ. ಐದಾರು ದಿನಗಳ ಕಾಲ ಆತನಿಗೆ ಇದೇ ರೀತಿ ಪುನರಾವರ್ತನೆಯಾಗುತ್ತದೆ. ಆತ ತನ್ನ ಬಲೆಗೆ ಬೀಳುತ್ತಿದ್ದ ಅದೇ ಚಿನ್ನದ ಮೀನನ್ನು ತೆಗೆದುಕೊಳ್ಳದೆ ನೀರಿಗೇ ಹಾಕಿ ಬರುತ್ತಿದ್ದನು. ಒಂದು ದಿನ ಅತಿಭಕ್ತನು ಇಂದು ಅದೇ ಚಿನ್ನದ ಮೀನು ನನ್ನ ಬಲೆಗೆ ಬಿದ್ದರೆ ಕೈಯನ್ನೇ ಕತ್ತರಿಸಿಕೊಳ್ಳುತ್ತೇನೆಂದು ಶಿವನಲ್ಲಿ ಬೇಡಿ ಹರಿತವಾದ ಕತ್ತಿಯನ್ನು ತೆಗೆದುಕೊಂಡು ಹೋಗಿರುತ್ತಾನೆ. ಬಲೆ ಬೀಸಿದಾಗ ಅದರಲ್ಲಿ ಶಿವ–ಪಾರ್ವತಿಯವರೇ ಪ್ರತ್ಯಕ್ಷರಾಗುತ್ತಾರೆ. ಆತನ ನಿಷ್ಠಾವಂತ ಭಕ್ತಿಗೆ ಮೆಚ್ಚುತ್ತಾರೆ. ಮುಂದೆ ಆತನಿಗೆ ಗಣಪದವಿ ಪ್ರಾಪ್ತಿಯಾಗುತ್ತದೆ. ಇಂತಹ ಅರವತ್ತೂರು ಪುರಾತನರು ಅವರವರ ಶಿವಭಕ್ತಿಯನ್ನು ಮೆರೆದಿದ್ದಾರೆ. ಅವರ ಜೀವನದ ಗಾಥೆಯನ್ನು ಕೇಳಿಸಿಕೊಳ್ಳಲು ಸಾಧ್ಯವಾಗಿದ್ದು ಎಲ್ಲರ ಸೌಭಾಗ್ಯ. ಇಂತಹ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು. ಪೂಜ್ಯರು ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಪೋಷಿಸುವ ಮಹಾಪೋಷಕರು. ಪಂಚದಾಸೋಹಗಳ ಮೂಲಕ ರಾಜೇಂದ್ರ ಶ್ರೀಗಳು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆದು ಶ್ರೀಮಠವನ್ನು ಹೆಮ್ಮರವಾಗಿ ಬೆಳೆಸಿದ್ದಾರೆ ಎಂದು ತಿಳಿಸಿದರು.

ಡಾ. ಬಿ.ವಿ. ವಸಂತಕುಮಾರ್‌ರವರು ನಾದಬಿಂದು ಕಳಾತೀತಂ ಎಂಬಂತೆ ಶಬ್ದವೇ ವಿಶ್ವದ ಸೃಷ್ಟಿಯ ಮೂಲವಾಗಿದೆ. ಇದು ವಿಜ್ಞಾನದ ಕ್ವಾಂಟಮ್ ಸಿದ್ಧಾಂತದ ಮೂಲಕವೂ ಸಾಬೀತಾಗಿದೆ. ನಾವು ಕೇಳುವ ಒಳ್ಳೆಯ ಮಾತುಗಳನ್ನು ಜೀವನಕ್ಕೆ ಬೆಳಕಾಗಿ ಪರಿವರ್ತಿಸಿಕೊಳ್ಳಬೇಕು. ಪಂಪನು ಆದಿಪುರಾಣದಲ್ಲಿ ಭಾವಿಸಿ ಓದಬೇಕು, ಭಾವಿಸಿ ಕೇಳಬೇಕು, ಭಾವಿಸಿ ಪೂಜಿಸಬೇಕು ಮತ್ತು ಭಾವಿಸಿ ಆರಾಧಿಸಬೇಕು ಎಂದಿದ್ದಾನೆ. ಹಾಗಾದಾಗ ಅನುಭವವು ಅನುಭಾವವಾಗುತ್ತದೆ. ಮಾತಿನಾಚೆಗಿನ ಮೌನವೂ ಅಷ್ಟೇ ಮುಖ್ಯ ಎಂದು ಹೇಳಿದರು.

ಖಾದಿ ಮತ್ತು ಗ್ರಾಮೋದ್ಯೋಗ ಇಲಾಖೆಯ ಉಪ ನಿರ್ದೇಶಕರಾದ ಶ್ರೀಮತಿ ಎಲ್. ಮೇಘಲರವರು ನಮ್ಮ ಇಲಾಖೆಯಿಂದ ಪ್ರತಿವರ್ಷ ಸುತ್ತೂರು ಜಾತ್ರೆಯಲ್ಲಿ ಮಳಿಗೆಗಳನ್ನು ತೆರೆಯುವ ಮೂಲಕ ಗ್ರಾಮೀಣ ಪ್ರದೇಶದ ಮಹಿಳೆಯರ ಕೌಶಲಕ್ಕೆ ಪ್ರೋತ್ಸಾಹ ನೀಡುತ್ತಿದ್ದೇವೆ. ಇಂತಹ ಕಾರ್ಯಕ್ರಮಗಳನ್ನು ಸುತ್ತೂರು ಶ್ರೀಮಠ ಸದಾ ಪ್ರೋತ್ಸಾಹಿಸುತ್ತಿದೆ. ಶ್ರಾವಣಮಾಸದ ಇಂತಹ ಅಪೂರ್ವವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಹಿತವಚನಗಳನ್ನು ಕೇಳಲು ಅವಕಾಶ ದೊರೆತದ್ದು ಸೌಭಾಗ್ಯದ ಸಂಗತಿ. ಮಾಸಪೂರ್ತಿ ಇದರ ಸದುಪಯೋಗಯೋಗಪಡಿಸಿಕೊಂಡವರು ಪುಣ್ಯವಂತರು ಎಂದರು.

ಮೈಸೂರಿನ ಶ್ರೀ ಕುದೇರು ಮಠದ ಶ್ರೀ ಇಮ್ಮಡಿ ಗುರುಲಿಂಗ ಸ್ವಾಮಿಗಳು, ಸುತ್ತೂರು ಶ್ರೀಮಠದಲ್ಲಿ ಪ್ರತಿವರ್ಷವೂ ಶ್ರಾವಣ ಮಾಸದ ಪೂಜಾನುಷ್ಠಾನ ಮತ್ತು ಪ್ರವಚನವನ್ನು ಏರ್ಪಡಿಸಿಕೊಂಡು ಬರಲಾಗುತ್ತಿದೆ. ಭಕ್ತಿ ಕೇಂದ್ರಿತ ಸ್ಥಳಕ್ಕೆ ಇನ್ನೊಂದು ಹೆಸರೇ ಶ್ರೀ ಸುತ್ತೂರು ಮಠ. ಶ್ರಾವಣ ನೆತ್ತಿಯ ಮಡಿಲನ್ನು ತುಂಬುವ ಮಾಸವಾಗಿದೆ. ಒಳ್ಳೆಯ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಉತ್ತಮ ಸಂದರ್ಭ ಎಂದು ತಿಳಿಸಿದರು.

ಹುಲಿಯೂರುದುರ್ಗದ ಶ್ರೀ ಸಿದ್ಧಲಿಂಗ ಶಿವಾನಂದ ಸ್ವಾಮಿಗಳು, ದಾರಿ ತಪ್ಪುತ್ತಿರುವ ಮನುಷ್ಯ ನೈತಿಕ ಮಾರ್ಗದಲ್ಲಿ ನಡೆಯಲು ಪೂಜ್ಯರು ಇಂತಹ ಕಾರ್ಯಕ್ರಮಗಳನ್ನು ಏರ್ಪಡಿಸುತ್ತಾರೆ. ಶ್ರಾವಣ ಮಾಸದ ಪೂಜಾನುಷ್ಠಾನದಿಂದ ಸೃಷ್ಟಿಯಲ್ಲಿ ಒಳ್ಳೆಯ ವಾತಾವರಣ ನಿರ್ಮಾಣವಾಗುತ್ತದೆ. ಗುರುಗಳು ಮಾಡುವ ಅನುಷ್ಠಾನದ ಫಲ ಸಾರ್ವತ್ರಿಕವಾಗಿ ಎಲ್ಲರಿಗೂ ಲಭ್ಯವಾಗುತ್ತದೆ. ಭಕ್ತಿಯಿಂದ ಬದುಕಿನಲ್ಲಿ ಏನನ್ನಾದರೂ ಸಾಧಿಸಬಹುದು. ನಿತ್ಯವೂ ಪ್ರಾತಃಕಾಲದಲ್ಲಿ ನಡೆಯುತ್ತಿದ್ದ ಪೂಜಾನುಷ್ಠಾನದಲ್ಲಿ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದುದು ಸಂತೋಷದ ಸಂಗತಿ ಎಂದು ಹೇಳಿದರು.

ಕುಣಿಗಲ್ ಶ್ರೀ ಹಿರೇಮಠದ ಶ್ರೀ ವೀರರುದ್ರ ಶಿವಾಚಾರ್ಯ ಸ್ವಾಮಿಗಳು, ಗುರುವಿನ ಕೃಪೆಯಿದ್ದರೆ ಜೀವನದಲ್ಲಿ ಏನನ್ನಾದರೂ ಸಾಧಿಸಬಹುದು. ಗುರುವಿನ ಗುಲಾಮನಾಗುವ ತನಕ ಮುಕ್ತಿ ದೊರೆಯಲು ಸಾಧ್ಯವಿಲ್ಲ. ಇಂತಹ ಕಾರ್ಯಕ್ರಮಗಳಿಗೆ ಮಕ್ಕಳನ್ನೂ ಕರೆದುಕೊಂಡು ಬರಬೇಕು. ಯುವಪೀಳಿಗೆಗೆ ನಮ್ಮ ಸಂಸ್ಕೃತಿಯನ್ನು ಪರಿಚಯಿಸುವ ಕೆಲಸವಾಗಬೇಕು ಎಂದು ಹೇಳಿದರು.

ಶ್ರೀ ಎಂ. ಗಿರೀಶ್, ಶ್ರೀ ವಸಂತಕುಮಾರಯ್ಯ ಮತ್ತು ಶ್ರೀಮತಿ ಉಮಾ ನಾಗೇಶ್‌ರವರುಗಳು ಅನಿಸಿಕೆಗಳನ್ನು ಹಂಚಿಕೊಂಡರು. ಪ್ರವಚನ ಆಲಿಸಿ ಉತ್ತಮ ಪ್ರಬಂಧ ರಚಿಸಿದವರಿಗೆ ಬಹುಮಾನ ವಿತರಿಸಲಾಯಿತು. ಶ್ರೀ ಕೆ.ಬಿ. ಸೋಮಶೇಖರ್ ಹಾಗೂ ಶ್ರೀ ಹೆಚ್.ಎಸ್. ರಮೇಶ್‌ರವರು ಮತ್ತು ಕುಟುಂಬದವರು ಸೇವಾರ್ಥ ನೆರವೇರಿಸಿದರು. ಜೆಎಸ್‌ಎಸ್ ಲಲಿತಕಲಾ ವೃಂದದವರು ಪ್ರಾರ್ಥಿಸಿದರು. ಶ್ರೀ ಎನ್.ಆರ್. ಶಿವಕುಮಾರ್ ಸ್ವಾಗತಿಸಿದರು. ಶ್ರೀ ಕಲ್ಯಾಣ ದೇವರು ವಂದಿಸಿದರು. ಶ್ರೀ ಕುಮಾರಸ್ವಾಮಿ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು. ಭಕ್ತಾದಿಗಳು, ಆಧ್ಯಾತ್ಮಿಕ ಜಿಜ್ಞಾಸುಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

□

## ರಕ್ತದಾನವು ಜೀವ ರಕ್ಷಣೆಗೆ ಸಮ




**ನಂಜನಗೂಡಿನ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ** ಸಮುಚ್ಚಯದಲ್ಲಿ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 110ನೇ ಜಯಂತಿ ಮಹೋತ್ಸವದ ಅಂಗವಾಗಿ ಕಾಲೇಜಿನ ಯುವ ರೆಡ್‌ಕ್ರಾಸ್, ಎನ್‌ಎಸ್‌ಎಸ್, ಎನ್‌ಸಿಸಿ, ರೋವರ್ಸ್– ರೇಂಜರ್ಸ್ ಹಾಗೂ ಆಂತರಿಕ ಗುಣಮಟ್ಟ ಭರವಸೆ ಘಟಕ ಮತ್ತು ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ, ಸಹಯೋಗದೊಂದಿಗೆ ರಕ್ತದ ಗುಂಪು ಪರೀಕ್ಷೆ ಮತ್ತು ರಕ್ತದಾನ ಶಿಬಿರವನ್ನು ದಿನಾಂಕ 22.8.2025ರಂದು ಆಯೋಜಿಸಲಾಗಿತ್ತು.

ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಪೆಥಾಲಜಿ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಅರ್ಚನರವರು ಮಾತನಾಡಿ, ಜೀವನ ಪ್ರತಿಯೊಬ್ಬರಿಗೂ ಅಮೂಲ್ಯವಾದದ್ದು. ವಿಶೇಷವಾಗಿ ಯುವ ಜನತೆ ಕಷ್ಟದಲ್ಲಿರುವ ರೋಗಿಗಳ ಅವಶ್ಯಕತೆಯನ್ನು ಮನಗಂಡು ದಾನದಲ್ಲಿ ಶ್ರೇಷ್ಠವಾದ ರಕ್ತದಾನವನ್ನು ಮಾಡಿದರೆ ರೋಗಿಗಳಿಗೆ ಜೀವ ರಕ್ಷಣೆಯನ್ನು ನೀಡಿದಂತಾಗುತ್ತದೆ ಎಂದರು. ತಾವೂ ಕೂಡ ರಕ್ತದಾನ ಮಾಡುವ ಮೂಲಕ ಯುವ ಜನತೆಗೆ ಪ್ರೇರಣೆ ನೀಡಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಸಿ.ಎಸ್. ಹೊನ್ನೇಗೌಡರವರು, ಜೀವ ಮತ್ತು ಜೀವನ ಎರಡೂ ಸಹ ಮುಖ್ಯವಾದುದು, ಈ ದಿಸೆಯಲ್ಲಿ ಜೆಎಸ್‌ಎಸ್ ಆಸ್ಪತ್ರೆ ನಾಡಿನ ಬಡಜನತೆಗೆ ವಿಶೇಷವಾದ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುತ್ತಿದೆ. ಈ ಸೌಲಭ್ಯ ಸಾಕಾರಗೊಳ್ಳಬೇಕಾದರೆ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಪದವಿ ಪ್ರಮಾಣಪತ್ರಗಳನ್ನು ಪಡೆಯುವುದರೊಂದಿಗೆ ಸಾಮಾಜಿಕ ಮೌಲ್ಯಗಳು, ಜನಸೇವೆಯಂತಹ ಸ್ವಯಂ ನಿಸ್ವಾರ್ಥ ಸೇವೆಗಳ ಪ್ರಾಮುಖ್ಯತೆಯನ್ನು ಅರಿತುಕೊಳ್ಳಬೇಕು ಕಷ್ಟದಲ್ಲಿರುವ ರೋಗಿಗಳಿಗೆ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ರಕ್ತದಾನ ಮಾಡಿ ವ್ಯಕ್ತಿಯ ಜೀವವನ್ನು ಉಳಿಸಬೇಕೆಂದು ಹೇಳಿದರು.

ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಕೆ.ಎನ್. ಶಿವಕುಮಾರ್, ಐಕ್ಯೂಎಸಿ ಸಂಚಾಲಕರಾದ ಡಾ. ಬಿ.ಕೆ. ಕೆಂಡಗಣ್ಣಸ್ವಾಮಿ, ಅಧೀಕ್ಷಕರಾದ ಶ್ರೀ ಕೆ.ವಿ. ಸುಂದರರಾಜು, ಸಂಚಾಲಕರುಗಳಾದ ಶ್ರೀ ಆರ್. ರವಿತೇಜ, ಶ್ರೀ ಹೆಚ್.ಆರ್. ಗುರು, ಶ್ರೀಮತಿ ಎಂ.ಎಸ್. ದೀಪಾಲಿ, ಶ್ರೀ ಹೆಚ್.ಎಸ್. ಪ್ರವೀಣ್ ಕುಮಾರ್, ಅಧ್ಯಾಪಕರು–ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ತೃತೀಯ ಬಿ.ಎಸ್‌ಸಿ ವಿದ್ಯಾರ್ಥಿನಿ ಕು. ಸ್ನೇಹ ಪ್ರಾರ್ಥಿಸಿದರು. ಯುವ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಶ್ರೀ ಅರ್. ರವಿತೇಜ ಸ್ವಾಗತಿಸಿದರು, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಶ್ರೀ ಹೆಚ್.ಆರ್. ಗುರು ವಂದಿಸಿದರು.

## ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಗೆ ಕ್ರೀಡಾ ಸಮಗ್ರ ಪ್ರಶಸ್ತಿ



ನಂಜನಗೂಡಿನ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹಯೋಗದಲ್ಲಿ ಸುತ್ತೂರಿನಲ್ಲಿ ಆಯೋಜಿಸಿದ್ದ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ **ಸುತ್ತೂರು ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ** ಕ್ರೀಡಾಪಟುಗಳು ಆಟ–ಮೇಲಾಟಗಳಲ್ಲಿ ಭಾಗವಹಿಸಿ 187 ಅಂಕ ಗಳಿಸುವುದರೊಂದಿಗೆ ಸಮಗ್ರ ಪ್ರಶಸ್ತಿ ಪಡೆದಿದ್ದಾರೆ.

ಬಾಲಕರ ವಿಭಾಗದ ಖೋಖೋ, ಕಬಡ್ಡಿ, ವಾಲಿಬಾಲ್, ಬಾಲ್ ಬ್ಯಾಡ್ಮಿಂಟನ್, ಥ್ರೋಬಾಲ್ ಪಂದ್ಯಾವಳಿಗಳಲ್ಲಿ ಹಾಗೂ ಬಾಲಕಿಯರ ವಿಭಾಗದ ಕಬಡ್ಡಿ, ಖೋಖೋ, ವಾಲಿಬಾಲ್, ಬಾಲ್ ಬ್ಯಾಡ್ಮಿಂಟನ್, ಥ್ರೋಬಾಲ್ ಪಂದ್ಯಾವಳಿಗಳಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ಅಥ್ಲೆಟಿಕ್ಸ್ ವಿಭಾಗದಲ್ಲಿ ಬೀಟಾರಾಜ್ – 100 ಮೀ ಓಟ ಮತ್ತು ಗುಂಡು ಎಸೆತದಲ್ಲಿ ಪ್ರಥಮ ಹಾಗೂ 400 ಮೀ. ಓಟದಲ್ಲಿ ದ್ವಿತೀಯ ಸ್ಥಾನ ಗಳಿಸುವ ಮೂಲಕ ವೈಯಕ್ತಿಕ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾನೆ. ಅಬಾನಾ ಲಿಂಗ್ದೋ ಗುಂಡು ಎಸೆತ ಮತ್ತು ತಟ್ಟೆ ಎಸೆತದಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ವೈಯಕ್ತಿಕ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾಳೆ.

ಬಾಲಕರ ವಿಭಾಗದಲ್ಲಿ ಸಂಗಮೇಶ್ – 100 ಮೀ. ಓಟದಲ್ಲಿ ತೃತೀಯ, 200 ಮೀ. ಓಟದಲ್ಲಿ ಧನಂದಿತ್ – ದ್ವಿತೀಯ ಸ್ಥಾನ, 400 ಮೀ. ಓಟದಲ್ಲಿ ಮಹಾಂತೇಶ್ ನಾಯಕ ಪ್ರಥಮ, 600 ಮೀ. ಓಟದಲ್ಲಿ ಗುರುಪ್ರಸಾದ್ ಪ್ರಥಮ, ಬಸವರಾಜ್ ದ್ವಿತೀಯ ಸ್ಥಾನಗಳಿಸಿದ್ದಾರೆ. ಗುಂಡು ಎಸೆತದಲ್ಲಿ ಕೆ. ಹರ್ಷಿತ್ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಮೋಹಿತ್ ಕುಮಾರ್ ಮೆಹತೊ ತಟ್ಟೆ ಎಸೆತ ಮತ್ತು ಎತ್ತರ ಜಿಗಿತದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. 4x100 ಮೀ. ರಿಲೇಯಲ್ಲಿ ಬೀಟಾರಾಜ್ ಮತ್ತು ತಂಡ

ಪ್ರಥಮ ಹಾಗೂ ಮಹಾಂತೇಶ್ ಮತ್ತು ತಂಡ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ಬಾಲಕಿಯರ ವಿಭಾಗದಲ್ಲಿ ನಿಂಗ್‌ಸೀತ್ವೈ 100 ಮೀ. ಓಟದಲ್ಲಿ ದ್ವಿತೀಯ, ಮನತ್ ತೃತೀಯ, 200 ಮೀ. ಓಟದಲ್ಲಿ ಉಷಾ ತೃತೀಯ, 600 ಮೀ ಓಟದಲ್ಲಿ ಅಮೃತಾ ದ್ವಿತೀಯ ಮತ್ತು ಸರ್ಜಿನ್ ಸುಖ್ ತೃತೀಯ ಸ್ಥಾನ ಪಡೆದಿದ್ದಾರೆ. ಮೇಘನ ಗುಂಡು ಎಸೆತ ಮತ್ತು ತಟ್ಟೆ ಎಸೆತ ಸ್ಪರ್ಧೆಯಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಲೈಸಾರಾಮ್ ಜೀನಲಕ್ಷ್ಮಿದೇವಿ ಎತ್ತರಜಿಗಿತದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ಈ ವಿದ್ಯಾರ್ಥಿಗಳಿಗೆ ಸಂಸ್ಥೆಯ ಆಡಳಿತಾಧಿಕಾರಿಗಳು, ಸಂಯೋಜನಾಧಿಕಾರಿಗಳು, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕ ವೃಂದದವರು ಅಭಿನಂದನೆ ಸಲ್ಲಿಸಿದ್ದಾರೆ.

---

## ಶ್ರೀ ಸುತ್ತೂರು ಮಠದಿಂದ ಮೃಗಾಲಯಕ್ಕೆ ಕೊಡುಗೆ




ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 110ನೆಯ ಜಯಂತಿಯ ಸಂದರ್ಭದಲ್ಲಿ ಶ್ರೀ ಚಾಮರಾಜೇಂದ್ರ ಮೃಗಾಲಯದ ಪ್ರಾಣಿ–ಪಕ್ಷಿಗಳ ಆಹಾರದ ನಿರ್ವಹಣೆಗಾಗಿ ಆಗಸ್ಟ್ 25ರಂದು ಒಂದು ಲಕ್ಷ ರೂ.ಗಳ ಚೆಕ್ಕನ್ನು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರಾದ ಶ್ರೀ ಎ.ವಿ. ಸೂರ್ಯ ಸೇನ್‌ರವರಿಗೆ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಶ್ರೀ ಎಸ್. ಶಿವಕುಮಾರಸ್ವಾಮಿಯವರು ನೀಡಿದರು. ಚಿತ್ರದಲ್ಲಿ ಶ್ರೀ ಸಿ.ಆರ್. ರಾಜೇಗೌಡ, ಶ್ರೀಮತಿ ಎಂ.ಆರ್. ಧನ್ಯಶ್ರೀ, ಪ್ರೊ. ಮೊರಬದ ಮಲ್ಲಿಕಾರ್ಜುನ ಹಾಗೂ ಶ್ರೀ ಬಿ. ನಿರಂಜನಮೂರ್ತಿಯವರುಗಳಿದ್ದಾರೆ.

## ಪದವೀಧರರ ಯಶಸ್ಸಿನಲ್ಲಿ ದೇಶದ ಪ್ರಗತಿಯಿದೆ




ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ 17ನೇ ಪದವೀಧರರ ದಿನಾಚರಣೆಯಲ್ಲಿ ಪ್ರೊ. ಎಲ್.ಎಸ್. ಶಶಿಧರರವರು ಮಾತನಾಡುತ್ತಿರುವುದು. ಪ್ರೊ. ಬಿ.ವಿ. ಸಾಂಬಶಿವಯ್ಯ, ಡಾ. ಎಂ. ಮುನಿಯಮ್ಮ, ಡಾ. ಸಿ.ಜಿ. ಬೆಟಸೂರಮಠ, ಡಾ. ಎಂ. ಪ್ರಭು ಹಾಗೂ ಡಾ. ಬಿ. ಪ್ರಭುಸ್ವಾಮಿಯವರುಗಳಿದ್ದಾರೆ. (12 ಆಗಸ್ಟ್ 2025)

ಪದವೀಧರರ ಯಶಸ್ಸಿನ ಹಿಂದೆ ದೇಶದ ಪ್ರಗತಿಯಿದೆ ಎಂದು ಬೆಂಗಳೂರಿನ ಟಿಐಎಫ್‌ಆರ್ – ರಾಷ್ಟ್ರೀಯ ಜೀವ ವಿಜ್ಞಾನ ಕೇಂದ್ರದ ನಿರ್ದೇಶಕರಾದ ಪ್ರೊ. ಎಲ್.ಎಸ್. ಶಶಿಧರರವರು ಹೇಳಿದರು.

**ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.8.2025 ರಂದು ನಡೆದ 17ನೇ ಪದವೀಧರರ ದಿನಾಚರಣೆಯಲ್ಲಿ ಮಾತನಾಡುತ್ತಾ ಅವರು ತಿಳಿಸಿದರು. ಇಂದಿನ ಆಧುನಿಕ ಯುಗದಲ್ಲಿ ಶಿಕ್ಷಣದ ಅಗತ್ಯಗಳು ವಿಭಿನ್ನವಾಗಿವೆ. ವಿದ್ಯಾರ್ಥಿಗಳು ಶಿಕ್ಷಣ ಪಡೆಯುವುದರ ಹಿಂದೆ ಕೇವಲ ಪದವಿ ಪ್ರಮಾಣ ಪತ್ರ ಪಡೆಯುವ ಉದ್ದೇಶವಿರಬಾರದು. ಶಿಕ್ಷಣದಿಂದ ಹೊಸ ಅನ್ವೇಷಣೆಗಳು ಸಾಧ್ಯವಾಗಬೇಕು. ಜ್ಞಾನ ಮತ್ತು ಯಶಸ್ಸಿನ ಹಿಂದೆ ದೇಶದ ಪ್ರಗತಿಯದೆ ಎಂಬುದನ್ನು ಸದಾ ಮನಸ್ಸಿನಲ್ಲಿಟ್ಟುಕೊಂಡು ಕಾರ್ಯಪ್ರವೃತ್ತರಾಗಬೇಕು. ಸ್ವಾತಂತ್ರ್ಯಪೂರ್ವ ಭಾರತದ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿ ಬೇರೆಯಿತ್ತು. ಇವುಗಳಲ್ಲಿ ಇಂದು ಸಾಕಷ್ಟು ಬದಲಾವಣೆಯಾಗಿದೆ. ಸಾಕ್ಷರತೆಯ ಪ್ರಮಾಣ ಹೆಚ್ಚಿದೆ. ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗಳು ಸುಧಾರಿಸಿವೆ. ಕೃಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನಗಳಲ್ಲಿ ಹೊಸ ಅನ್ವೇಷಣೆಗಳಿಂದ ಅಚ್ಚರಿಯಾಗುವಂತೆ ಬೆಳವಣಿಗೆಯನ್ನು ಸಾಧಿಸಿದೆ. ಇದೆಲ್ಲದರ ಹಿಂದೆ ಸಮಗ್ರ ರಾಷ್ಟ್ರನಿರ್ಮಾಣದ ಕನಸು ಇದೆ. ಶಿಕ್ಷಣ ಪಡೆದು ಪದವೀಧರರಾಗುವ ವಿದ್ಯಾರ್ಥಿಗಳಿಗೆ ಇದೆಲ್ಲದರ ಅರಿವು ಸದಾ ಇರಬೇಕು. ಆಯಾ ಕ್ಷೇತ್ರಗಳಲ್ಲಿ ಹೊಸ ಅನ್ವೇಷಣೆಯ ಸಾಧ್ಯತೆಗಳನ್ನು ಕಂಡುಕೊಳ್ಳುವುದಕ್ಕೆ ಆದ್ಯತೆ ನೀಡಬೇಕು. ಜೆಎಸ್‌ಎಸ್ ಸಂಸ್ಥೆ ಶೈಕ್ಷಣಿಕ ಕ್ಷೇತ್ರದಲ್ಲಿ ಕೌಶಲ್ಯ ಮತ್ತು ಮೌಲ್ಯಾಧಾರಿತ ಕಲಿಕೆಗೆ ಹೆಚ್ಚು ಒತ್ತು ನೀಡುತ್ತಾ ಬಂದಿದೆ. ಇಂದು ವಿಶ್ವವು ಕೃತಕ ಬುದ್ಧಿಮತ್ತೆಯ ಜೊತೆಯಲ್ಲಿಯೇ ಸಾಗುತ್ತಿದೆ. ವಿಜ್ಞಾನ ಮತ್ತು ಜ್ಞಾನಗಳ ಸಮತೋಲನವನ್ನು ಕಾಯ್ದುಕೊಂಡು ಸ್ವಸ್ಥ ಸಮಾಜವನ್ನು ನಿರ್ಮಿಸಬೇಕು. ಶಿಕ್ಷಕರು ಈ ಅರಿವನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟು ಔದ್ಯೋಗಿಕ ಕ್ಷೇತ್ರದಲ್ಲಿ ಮೌಲ್ಯಯುತ ನೆಲೆಯನ್ನು ಕಲ್ಪಿಸಬೇಕು ಎಂದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠ ಅವರು ನೂತನ ಪದವೀಧರರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಸಮಾರಂಭದಲ್ಲಿ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗಗಳಿಂದ ಒಟ್ಟು 903 ವಿದ್ಯಾರ್ಥಿಗಳು ಪದವೀಧರರಾದರು. ಇವರಲ್ಲಿ ಹೆಚ್ಚು ಅಂಕ ಪಡೆದ ಒಟ್ಟು 62 ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಮಾಣ ಪತ್ರಗಳನ್ನು ನೀಡಿ ಪುರಸ್ಕರಿಸಲಾಯಿತು. 17 ಮಂದಿ ವಿದ್ಯಾರ್ಥಿಗಳು ವಿವಿಧ ದತ್ತಿ ಪುರಸ್ಕಾರಕ್ಕೆ ಪಾತ್ರರಾದರು. ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತಿಸಿದರು. ಕು. ಕ್ಷೀರಾ ಶಾನುಭೋಗ್ ಮತ್ತು ಕು. ಅದಿತಿ ಹೆಗ್ಡೆ ಪ್ರಾರ್ಥಿಸಿದರು. ಪ್ರಾಂಶುಪಾಲರಾದ ಡಾ. ಎಂ. ಪ್ರಭು ವಂದಿಸಿದರು. ವಿಶ್ರಾಂತ ಕುಲಪತಿಗಳಾದ ಡಾ. ಎಂ. ಮುನಿಯಮ್ಮ, ಪರೀಕ್ಷಾ ನಿಯಂತ್ರಣಾಧಿಕಾರಿಗಳಾದ ಡಾ. ಬಿ. ಪ್ರಭುಸ್ವಾಮಿ, ಉಪಸ್ಥಿತರಿದ್ದರು. ಡಾ. ಎನ್. ರಾಜೇಂದ್ರ ಪ್ರಸಾದ್‌ರವರು ಕಾರ್ಯಕ್ರಮ ನಿರೂಪಿಸಿದರು.

## ಯಶಸ್ವಿಯಾಗಲು ಸ್ಪಷ್ಟ ಗುರಿ ಹೊಂದುವುದು ಅತ್ಯಗತ್ಯ




ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ರಸಾಯನಶಾಸ್ತ್ರ ದಿನಾಚರಣೆಯಲ್ಲಿ ಡಾ. ಬಿ.ಎಸ್. ಪ್ರಿಯಾರವರು ಮಾತನಾಡುತ್ತಿರುವುದು. ಡಾ. ಡಿ.ಎಂ. ಲೋಕೇಶ್ವರಿ, ಡಾ. ರೇಚಣ್ಣ ಮತ್ತು ಡಾ. ಐ. ಮಲ್ಲಿಕಾರ್ಜುನರವರುಗಳಿದ್ದಾರೆ. (2 ಆಗಸ್ಟ್ 2025)

**ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ** ದಿನಾಂಕ 2.8.2025 ರಂದು ರಾಷ್ಟ್ರೀಯ ರಸಾಯನಶಾಸ್ತ್ರ ದಿನಾಚರಣೆ ನೆರವೇರಿತು. ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ಅಧ್ಯಯನ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಬಿ. ಎಸ್. ಪ್ರಿಯಾ ರವರು ಉದ್ಘಾಟಿಸಿ ಮಾತನಾಡಿ ಜೀವನದಲ್ಲಿ ಯಶಸ್ವಿಯಾಗಲು ಸ್ಪಷ್ಟ ಗುರಿಗಳನ್ನು ಹೊಂದಬೇಕು. ನಾವೆಲ್ಲರೂ ಉತ್ತಮ ಮಾನವರಾಗುವತ್ತ ಸಾಗಬೇಕು. ಮೂಲ ವಿಜ್ಞಾನಗಳು ವಿಜ್ಞಾನದ ಆಧಾರಸ್ತಂಭಗಳಾಗಿವೆ. ರಸಾಯನಶಾಸ್ತ್ರವು ದಿನನಿತ್ಯದ ಜೀವನದಲ್ಲಿ ಮಹತ್ವದ ಪಾತ್ರವಹಿಸುತ್ತದೆ. ನಾವು ಮಾಡುವ ಕ್ರಿಯಾ ಚಟುವಟಿಕೆಗಳಲ್ಲಿ ಹೆಚ್ಚಿನವು ರಸಾಯನಶಾಸ್ತ್ರವನ್ನು ಒಳಗೊಂಡಿರುತ್ತವೆ ಎಂದು ಹೇಳಿದರು.

ಉದ್ಘಾಟನೆಯ ನಂತರ ಮಹಾರಾಣಿ ವಿಜ್ಞಾನ ಕಾಲೇಜಿನ ರಸಾಯನಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಐ. ಮಲ್ಲಿಕಾರ್ಜುನರವರು ರಸಾಯನಶಾಸ್ತ್ರದಲ್ಲಿ ಪ್ರಯೋಗಾಲಯ ಅಭ್ಯಾಸಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಪ್ರಯೋಗಾಲಯ ಅಭ್ಯಾಸಗಳು ಸುರಕ್ಷಿತ, ನಿಖರ ಮತ್ತು ನೈತಿಕ ವೈಜ್ಞಾನಿಕ ಕೆಲಸದ ಅಡಿಪಾಯವಾಗಿದೆ. ನಾವು ಸುರಕ್ಷತೆಗೆ ಆದ್ಯತೆ ನೀಡುವುದು, ನಿಖರತೆಗಾಗಿ ಶ್ರಮಿಸುವುದು ಮತ್ತು ಸಮಗ್ರತೆಯನ್ನು ಎತ್ತಿ ಹಿಡಿಯುವುದು ನಿಜವಾದ ವಿಜ್ಞಾನಿಯ ಚೈತನ್ಯವನ್ನು ಸಾಕಾರಗೊಳಿಸುತ್ತದೆ ಎಂದು ಹೇಳಿದರು.

ಪ್ರಾಂಶುಪಾಲರಾದ ಡಾ. ರೇಚಣ್ಣ, ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಡಿ.ಎಂ. ಲೋಕೇಶ್ವರಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮಚಲ್ಲಿ ಭಾಗವಹಿಸಿದ್ದರು.

ಕು. ಎಂ.ಎಂ. ಭೂಮಿಕಾ ಪ್ರಾರ್ಥಿಸಿದರು. ಕು. ಎಸ್. ಅಪರಂಜಿ ಕಾರ್ಯಕ್ರಮ ನಿರೂಪಿಸಿದರು. ಕು. ಇಂಚರ ಸ್ವಾಗತಿಸಿದರು. ಕು. ಎನ್. ಸಂಗೀತ ವಂದಿಸಿದರು. □

## ವ್ಯಸನಮುಕ್ತ ಜಾಗೃತಿ ಜಾಥಾ




**ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ** ದಿನಾಂಕ 1.8.2025ರಂದು ಯುವ ರೆಡ್ ಕ್ರಾಸ್ ಘಟಕ ಹಾಗೂ ತಾಲ್ಲೂಕು ಕಛೇರಿ ಸಹಯೋಗದೊಂದಿಗೆ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಮತ್ತು ವ್ಯಸನಮುಕ್ತ ದಿನ ಆಚರಣೆ ಪ್ರಯುಕ್ತ ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ "ವ್ಯಸನಮುಕ್ತ ಜಾಗೃತಿ ಜಾಥಾ" ಹಮ್ಮಿಕೊಳ್ಳಲಾಗಿತ್ತು

ಪ್ರಾಂಶುಪಾಲರಾದ ಡಾ ಹೆಚ್.ಎಸ್. ಕೊಂಗಳಪ್ಪ ರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದರ ಕುರಿತು ಮಾತನಾಡಿದರು.

ತಹಶೀಲ್ದಾರರಾದ ಶ್ರೀ ಐ.ಈ. ಬಸವರಾಜುರವರು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿಯನ್ನು ಬೋಧಿಸಿ ಡಾ. ಮಹಾಂತ ಶಿವಯೋಗಿಗಳ ಹಿನ್ನೆಲೆ ಹಾಗೂ ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಅವರು ಶ್ರಮಿಸಿದ ಪರಿಯನ್ನು ಕುರಿತು ಮಾತನಾಡಿದರು. ಆಧುನಿಕ ಜನಗತ್ತಿನಲ್ಲಿ ಯುವಜನತೆ ವ್ಯಸನಕ್ಕೆ ಬಲಿಯಾಗುತ್ತಿರುವುದರಿಂದ ಎಲ್ಲಾ ಜನರಲ್ಲಿಯೂ ಅರಿವು ಮೂಡಿಸಿ ಉತ್ತಮ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

## ಸುತ್ತೂರು ಜೆಎಸ್‌ಎಸ್ ಎನ್‌ಸಿಸಿ ವಾಯುದಳಕ್ಕೆ ಸಮಗ್ರ ಪ್ರಶಸ್ತಿ




**ಸುತ್ತೂರು ಜೆಎಸ್‌ಎಸ್ ಪ್ರೌಢಶಾಲೆಯ** ಎನ್‌ಸಿಸಿ ವಾಯುದಳಕ್ಕೆ ಸಮಗ್ರ ಪ್ರಶಸ್ತಿ ಲಭಿಸಿದೆ.

ಮೈಸೂರು ಮುಕ್ತ ವಿಶ್ವವಿದ್ಯಾಲಯದಲ್ಲಿ 4ನೇ ಕರ್ನಾಟಕ ಏರ್‌ಸ್ಕ್ವಾಡ್ರನ್ ಎನ್‌ಸಿಸಿ ಘಟಕದ ವತಿಯಿಂದ ಆಯೋಜಿಸಿದ್ದ 10 ದಿನಗಳ ವಾರ್ಷಿಕ ಶಿಬಿರದಲ್ಲಿ ನಡೆದ ಬಾಲಕ ಮತ್ತು ಬಾಲಕಿಯರ ಕವಾಯತು ಸ್ಪರ್ಧೆಯಲ್ಲಿ ಪ್ರಥಮ, ಹಗ್ಗ ಜಗ್ಗಾಟ ಸ್ಪರ್ಧೆಯಲ್ಲಿ ಪ್ರಥಮ, 100 ಮೀ. ಓಟದಲ್ಲಿ ಪ್ರಥಮ, ಏಕವ್ಯಕ್ತಿ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಮತ್ತು ದ್ವಿತೀಯ, ಗುಂಪು ನೃತ್ಯ ದ್ವಿತೀಯ, ಪ್ರಬಂಧ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸುವ ಮೂಲಕ ಸಮಗ್ರ ಪ್ರಶಸ್ತಿಯನ್ನು ಸುತ್ತೂರು ತಂಡ ತನ್ನ ಮುಡಿಗೇರಿಸಿಕೊಂಡಿದೆ.

10 ದಿನಗಳ ಎನ್‌ಸಿಸಿ ವಾಯುದಳದ ಶಿಬಿರದಲ್ಲಿ ಸುತ್ತೂರು, ಗುಂಡ್ಲುಪೇಟೆ, ಮೈಸೂರು, ಮಂಡ್ಯ ಮೊದಲಾದ ಭಾಗಗಳಿಂದ ವಿವಿಧ ಶಾಲೆಗಳ 500ಕ್ಕೂ ಹೆಚ್ಚು ಕೆಡೆಟ್‌ಗಳು ಭಾಗವಹಿಸಿದ್ದರು. ಶಿಬಿರದಲ್ಲಿ ಬಂದೂಕು ಉಪಯೋಗಿಸುವ ತಾಲೀಮು, ಮಾದರಿ ಲಘು ವಿಮಾನಗಳ ತಯಾರಿಕೆ, ಹಾರಾಟವೂ ಸೇರಿದಂತೆ ವಿವಿಧ ತರಬೇತಿಗಳನ್ನು ನೀಡಲಾಯಿತು.

ಸ್ವಾತಂತ್ರ್ಯೋತ್ಸವದಂದು ನಡೆದ ಕವಾಯತು ಪ್ರದರ್ಶನದಲ್ಲಿಯೂ ಭಾಗವಹಿಸಿ, ಲೆಫ್ಟಿನೆಂಟ್ ಕರ್ನಲ್ ಅನಂತ ಕೇಶವ ಅವರಿಂದ ಉತ್ತಮ ಪ್ರಶಂಸೆಯನ್ನು ಪಡೆದು ಶಾಲೆಗೆ ಕೀರ್ತಿ ತಂದಿರುತ್ತಾರೆ.

ಸಮಗ್ರ ಪ್ರಶಸ್ತಿ ಗಳಿಸಿದ ಕೆಡೆಟ್‌ಗಳ ಸಾಧನೆಯನ್ನು ಸಂಸ್ಥೆಯ ಆಡಳಿತಾಧಿಕಾರಿಗಳು, ಸಂಯೋಜನಾಧಿಕಾರಿಗಳು, ಮುಖ್ಯಸ್ಥರು, ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ವಿಶ್ವ ತೆಂಗು ದಿನಾಚರಣೆ



**ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದಲ್ಲಿ** ಕೃಷಿ ತಂತ್ರಜ್ಞರ ಸಂಸ್ಥೆ ಮೈಸೂರು ಘಟಕ, ಬೆಂಗಳೂರಿನ ಐಸಿಎಆರ್–ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಬ್ಯೂರೋ ಹಾಗೂ ಕೆನ್ನಾಳು ಶೋಭಿತ ನಂಜೇಗೌಡ ಫಾರಂ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ತೆಂಗು ದಿನಾಚರಣೆಯನ್ನು 'ತೆಂಗಿನ ಶಕ್ತಿಯನ್ನು ವಿಶ್ವಕ್ಕೆ ಸಾರೋಣ' ಎಂಬ ಧ್ಯೇಯವಾಕ್ಯದೊಂದಿಗೆ ತೆಂಗು ಬೆಳೆಯ ಸುಧಾರಿತ ಬೇಸಾಯ ಕ್ರಮಗಳ ತರಬೇತಿ ಮತ್ತು ರೈತರು–ವಿಜ್ಞಾನಿಗಳ ಸಂವಾದ ಕಾರ್ಯಕ್ರಮವನ್ನು ದಿನಾಂಕ 2.9.2025 ರಂದು ಸುತ್ತೂರಿನಲ್ಲಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಜೆಎಸ್‌ಎಸ್ ಮಹಾವಿದ್ಯಾಪೀಠದ ತೋಟಗಾರಿಕೆ ನಿರ್ದೇಶಕರಾದ ಶ್ರೀ ಎನ್.ಎಂ. ಶಿವಶಂಕರಪ್ಪರವರು ತೆಂಗಿನ ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿದರು. ಕೃಷಿ ತಂತ್ರಜ್ಞರ ಸಂಸ್ಥೆ ಮೈಸೂರು ಘಟಕದ ಕಾರ್ಯದರ್ಶಿಗಳು ಮತ್ತು ನಿವೃತ್ತ ಸಹಾಯಕ ಕೃಷಿ ನಿರ್ದೇಶಕರಾದ ಡಾ. ಕೆ.ಆರ್. ರವೀಂದ್ರ ರವರು ವಿಶ್ವ ತೆಂಗು ದಿನಾಚರಣೆ ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದರು. ತೆಂಗಿನ ಬೆಳೆಗೆ ಇರುವ ಮಹತ್ವ ಮತ್ತು ತೆಂಗಿನ ಶಕ್ತಿಯನ್ನು ವಿಶ್ವಕ್ಕೆ ಸಾರೋಣ. ತೆಂಗು ಬೆಳೆಯನ್ನು ಏಕ ಬೆಳೆ ಪದ್ಧತಿಯಲ್ಲಿ ಬೆಳೆಯುವ ಬದಲು ಬಹು ಬೆಳೆ ಮತ್ತು ಸಮಗ್ರ ಕೃಷಿಯಲ್ಲಿ ಅಳವಡಿಸಿಕೊಂಡಲ್ಲಿ ಹೆಚ್ಚು ಉಪಯುಕ್ತವಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾದ ಬೆಂಗಳೂರಿನ ಎನ್‌ಬಿಎಐಆರ್‌ನ ಹಿರಿಯ ವಿಜ್ಞಾನಿಗಳಾದ ಡಾ. ಬಿ. ಗುಂಡಪ್ಪರವರು ಮಾತನಾಡಿ, ತೆಂಗಿನ ಬೆಳೆಯಲ್ಲಿ ಬರುವ ಪ್ರಮುಖ ಕೀಟಗಳಾದ ಸುರುಳಿಯಾಕಾರದ ಬಿಳಿ ನೊಣ, ಕಪ್ಪು ತಲೆ ಹುಳು ಇತ್ಯಾದಿ ಕೀಟಗಳ ಜೈವಿಕ ನಿರ್ವಹಣೆಗಾಗಿ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲ ಕೇಂದ್ರವು ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿದೆ. ಆಸಕ್ತಿಯುಳ್ಳ ರೈತರಿಗೆ ಪರಭಕ್ಷಕ ಮತ್ತು ಪರಾವಲಂಬಿ ಜೀವಿಗಳ ಉತ್ಪಾದನೆ ಕುರಿತು ತರಬೇತಿಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರಾದ ಡಾ. ಬಿ.ಎನ್. ಜ್ಞಾನೇಶ್‌ರವರು ಮಾತನಾಡಿ, ತೆಂಗು ಒಂದು ಕಲ್ಪವೃಕ್ಷ. ಇದರ ಪ್ರತಿ

ಭಾಗವು ಉಪಯುಕ್ತವಾಗಿದೆ. ಇತ್ತೀಚಿನ ದಿನಗಳಲ್ಲಿ ತೆಂಗಿನ ಬೆಳೆಯನ್ನು ಬೆಳೆಯುವ ರೈತರ ಸಂಖ್ಯೆ ಹೆಚ್ಚಾಗುತ್ತಿದೆ. ಆದರೆ ಉತ್ತಮ ಗುಣಮಟ್ಟದ ಸಸಿಗಳನ್ನು ಆಯ್ಕೆಮಾಡುವಲ್ಲಿ ರೈತರು ವಿಫಲರಾಗುತ್ತಿದ್ದಾರೆ. ಸಸಿಗಳ ಲಭ್ಯತೆ ಇಲ್ಲದಿರುವ ಸಮಸ್ಯೆ ತಲೆದೋರುತ್ತಿದೆ. ಈ ನಿಟ್ಟಿನಲ್ಲಿ ರೈತರು ಉತ್ತಮ ಸಸಿಗಳ ಆಯ್ಕೆ ಮಾಡಬೇಕು. ತೆಂಗಿನ ತೋಟದಲ್ಲಿಯೇ ಸಿಗುವ ಕೃಷಿ ತ್ಯಾಜ್ಯವನ್ನು ಉಪಯೋಗಿಸಿಕೊಂಡು ನಾವು ತೋಟವನ್ನು ಸಮಗ್ರವಾಗಿ ನಿರ್ವಹಿಸಬಹುದು ಎಂದು ಹೇಳಿದರು.

ಪ್ರಗತಿಪರ ರೈತರಾದ ಆಯರಹಳ್ಳಿಯ ಬಸವಣ್ಣರವರು ತಮ್ಮ ತೆಂಗಿನ ತೋಟದಲ್ಲಿ ಅಳವಡಿಸಿ ಕೊಂಡಿರುವ ನೀರಿನ ತಂತ್ರಜ್ಞಾನ ಹಾಗೂ ಇತರ ಹೊಸ ತಂತ್ರಜ್ಞಾನಗಳ ಬಗ್ಗೆ ಮಾಹಿತಿ ನೀಡಿದರು. ಪ್ರತಿಯೊಬ್ಬ ರೈತರು ವೈಜ್ಞಾನಿಕ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕೆಂದು ಹೇಳಿದರು. ಶೋಭಿತ ನಂಜೇಗೌಡ ಫಾರಂನ ಚಂದ್ರಶೇಖರ್ ರವರು ಮಾತನಾಡಿ, ತೆಂಗಿನ ನರ್ಸರಿ ಮಾಡುವುದರ ಮೂಲಕ ಉದ್ಯಮಶೀಲರಾಗಬಹುದೆಂದರು. ಸುತ್ತೂರಿನ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ತೋಟಗಾರಿಕಾ ವಿಜ್ಞಾನಿಗಳಾದ ಡಾ. ಜಿ.ಎಂ. ವಿನಯ್ ರವರು ತೆಂಗಿನ ತಳಿಗಳ ಸಸ್ಯೋತ್ಪಾದನೆ, ಸಮಗ್ರ ಪೋಷಕಾಂಶಗಳ ನಿರ್ವಹಣೆ, ಅಂತರ ಬೆಳೆ, ನೀರಿನ ನಿರ್ವಹಣೆ ಬಗ್ಗೆ ಮಾಹಿತಿ ನೀಡಿದರು. ಬೆಂಗಳೂರಿನ ಎನ್‌ಬಿಎಐಆರ್‌ನ ಹಿರಿಯ ವಿಜ್ಞಾನಿಗಳಾದ ಡಾ. ಕೆ. ಸೆಲ್ವರಾಜನ್‌ರವರು ತೆಂಗಿನ ಬೆಳೆಯಲ್ಲಿ ಬಿಳಿ ನೊಣಗಳ ನಿರ್ವಹಣೆಗಾಗಿ ಐಸೆರಿಯಾ ಫ್ಯುಮಸರೋಸಿಯಾದ ಸಿಂಪರಣೆಯ ಡ್ರೋನ್ ಪ್ರಾತ್ಯಕ್ಷಿಕೆಯನ್ನು ನಡೆಸಿಕೊಟ್ಟರು. ರೈತರೊಡನೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಡಾ. ರಾಮೇಗೌಡ ಮತ್ತು ಡಾ. ವೈ.ಪಿ. ಪ್ರಸಾದ್ ರವರು ತೆಂಗಿಗೆ ಬರುವ ರೈನೊಸಾರಸ್ ದುಂಬಿ, ಕೆಂಪು ಮೂತಿ ದುಂಬಿ, ನುಸಿ ಪೀಡೆ, ಬಿಳಿ ನೊಣ, ರಸಸೋರುವ ರೋಗ, ಅಣಬೆ ರೋಗ, ಸುಳಿ ಕೊಳೆ ರೋಗ ಹಾಗೂ ಇತರ ಕೀಟ ಮತ್ತು ರೋಗಗಳ ಲಕ್ಷಣಗಳ ಜೊತೆ ಸಮಗ್ರ ನಿರ್ವಹಣಾ ಕ್ರಮಗಳನ್ನು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಶ್ರೀಮತಿ ಹೆಚ್.ವಿ. ದಿವ್ಯಾ ಶಾಮರಾಜ್, ಸಿಬ್ಬಂದಿವರ್ಗದವರು, ಕೃಷಿ ತಂತ್ರಜ್ಞರ ಸಂಸ್ಥೆಯ ಸದಸ್ಯರುಗಳು, ರೈತ ಸಂಘದ ಪ್ರಗತಿಪರ ರೈತರನ್ನು ಒಳಗೊಂಡಂತೆ 150 ಕ್ಕೂ ಹೆಚ್ಚು ರೈತ ಹಾಗೂ ರೈತ ಮಹಿಳೆಯರು ಭಾಗವಹಿಸಿ ಮಾಹಿತಿ ಪಡೆದು ಕೊಂಡರು.



ಸುತ್ತೂರು ಶ್ರೀಕ್ಷೇತ್ರದ ಬಸವೇಶ್ವರ ವಿದ್ಯಾರ್ಥಿನಿಲಯದಲ್ಲಿ ಪ್ರತಿಷ್ಠಾಪಿಸಿದ್ದ ಗಣೇಶ ಮೂರ್ತಿಯನ್ನು ಸಹಸ್ರಾರು ವಿದ್ಯಾರ್ಥಿಗಳ ಸಮ್ಮುಖದಲ್ಲಿ ಕಪಿಲಾ ನದಿಯಲ್ಲಿ ವಿಸರ್ಜಿಸಲಾಯಿತು. ಸಂಸ್ಥೆಯ ಆಡಳಿತಾಧಿಕಾರಿಗಳಾದ ಶ್ರೀ ಎಸ್.ಪಿ. ಉದಯಶಂಕರ್, ಶ್ರೀ ಎಸ್. ಶಿವಸ್ವಾಮಿ ಮತ್ತು ನೌಕರವರ್ಗದವರಿದ್ದಾರೆ. (31 ಆಗಸ್ಟ್ 2025)

## ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ

### ಜೆಎಸ್‌ಎಸ್ ಪ್ರೌಢಶಾಲೆ, ಸಂತೇಮರಹಳ್ಳಿ



**ಸಂತೇಮರಳ್ಳಿಯ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ 79 ನೇ ಸ್ವಾತಂತ್ರ ದಿನಾಚರಣೆಯಲ್ಲಿ ಜೆಎಸ್‌ಎಸ್ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಶ್ರೀ ಎ.ಜಿ. ಮರಿಸ್ವಾಮಿ ರವರು ಧ್ವಜಾರೋಹಣ ನೆರವೇರಿಸಿದರು. ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟಗಾರರ ವೇಷ ಭೂಷಣಗಳನ್ನು ಧರಿಸಿ ಎಲ್ಲರ ಗಮನ ಸೆಳೆದರು. ಸ್ವಾತಂತ್ರ್ಯ ಹೋರಾಟಗಾರರ ಕುರಿತು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನರ್ಸರಿ ಮತ್ತು ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ಶ್ರೀ ವೈ.ಪಿ. ವಿಶ್ವರವರು ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಸವಿವರವಾಗಿ ವಿದ್ಯಾರ್ಥಿಗಳಿಗೆ ತಿಳಿಸಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶ್ರೀ ಜಿ.ಆರ್. ಶೇಖರ್ ರವರು ಸ್ವಾತಂತ್ರಕ್ಕಾಗಿ ಹೋರಾಟಗಾರರ ಬಲಿದಾನ ಮತ್ತು ದೇಶ ಭಕ್ತಿಯ ಮನೋಭಾವನೆಯ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಶ್ರೀಮತಿ ಎಲ್. ಯೋಗಾವತಿ ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ಕೆ.ಎಲ್. ಜ್ಯೋತಿ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಪೋಷಕರು ಮತ್ತು ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

### ಜೆಎಸ್‌ಎಸ್ ಜನಶಿಕ್ಷಣ ಸಂಸ್ಥೆ, ಬೆಂಗಳೂರು

**ಬೆಂಗಳೂರಿನ ಜಯನಗರದಲ್ಲಿರುವ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಮುಚ್ಚಯದಲ್ಲಿ** ನಡೆದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಭಾರತೀಯ ವಾಯುಸೇನೆಯ ನಿವೃತ್ತ ವಿಂಗ್‌ಕಮಾಂಡರ್ ಶ್ರೀ ಅಶೋಕ್ ಕುಮಾರ್ ರವರು ಧ್ವಜಾರೋಹಣ ನೆರವೇರಿಸಿದರು. ಜೆಎಸ್‌ಎಸ್ ಅಭಿವೃದ್ಧಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಕೆ.ಎಂ. ಲೋಕೇಶ್‌ರವರು ಅಧ್ಯಕ್ಷತೆ ವಹಿಸಿದ್ದರು. ಎಲ್ಲಾ ವಿಭಾಗದ ಮುಖ್ಯಸ್ಥರು ಹಾಜರಿದ್ದರು. ಜೆಎಸ್‌ಎಸ್ ಜನ ಶಿಕ್ಷಣ ಸಂಸ್ಥೆಯ ವತಿಯಿಂದ ಏರ್ಪಡಿಸಿದ್ದ ದೇಶಭಕ್ತರು ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಭಿತ್ತಿ ಚಿತ್ರಗಳು ಹಾಗೂ

ರಾಷ್ಟ್ರಧ್ವಜ ಹಿನ್ನೆಲೆಯ ಮಾಹಿತಿಯ ಪ್ರದರ್ಶನವನ್ನು ಗಣ್ಯರು ವೀಕ್ಷಿಸಿದರು. ಆಗಸ್ಟ್ 13 ರಿಂದ 15 ರವರೆಗೆ ಹರ್ ಘರ್ ತಿರಂಗ್ ಭಾಗವಾಗಿ ಮನೆ ಮನೆಯ ಮೇಲೆ ರಾಷ್ಟ್ರಧ್ವಜ ಹಾರಿಸಿ, ಧ್ವಜದೊಂದಿಗೆ ಸೆಲ್ಫಿ ಫೋಟೋ ಕಳುಹಿಸುವ ಅಭಿಯಾನದಲ್ಲಿ ವೃತ್ತಿ ಬೋಧಕರು, ಫಲಾನುಭವಿಗಳು ಪಾಲ್ಗೊಂಡು ಪ್ರಮಾಣ ಪತ್ರಗಳನ್ನು ಪಡೆದಿದ್ದಾರೆ.

ಕಾರ್ಯಕ್ರಮದ ಜೆಎಸ್‌ಎಸ್ ಜನ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಶ್ರೀಮತಿ. ಡಿ.ಎಂ. ಶಶಿಕಲಾ, ಸಿಬ್ಬಂದಿ, ವರ್ಗ ಕಲಿಕಾರ್ಥಿಗಳು, ಸಾರ್ವಜನಿಕರು ಹಾಗೂ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಜೆಎಸ್‌ಎಸ್ ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು, ನಂಜನಗೂಡು

**ನಂಜನಗೂಡಿನ ಜೆಎಸ್‌ಎಸ್ ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ದಿನಾಂಕ 15.8.2025ರಂದು 79ನೇ ಸ್ವಾತಂತ್ರ್ಯ ದಿನ ಆಚರಿಸಲಾಯಿತು. ಜೆಎಸ್‌ಎಸ್ ಮುಕ್ತ ಶಾಲೆಯ ವಿಷಯ ತಜ್ಞರಾದ ಶ್ರೀ ರಾಜಪ್ಪ ಅರಳಿಕಟ್ಟೆಯವರು ಮಾತನಾಡಿ, ಸಂಪನ್ಮೂಲಭರಿತ ಅಖಂಡ ಭಾರತ ದೇಶವು ಬ್ರಿಟೀಷರ ಆಳ್ವಿಕೆಯಲ್ಲಿ ಸ್ವತಂತ್ರವಿಲ್ಲದೆ ಅಧೀನತೆಯಿಂದ ಸುಮಾರು ವರ್ಷಗಳ ಕಾಲ ನಲುಗಿತು. ಆ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿಯವರ ನೇತೃತ್ವದಲ್ಲಿ ಅನೇಕ ಮಹನೀಯರು ಸ್ವಾತಂತ್ರ ಚಳುವಳಿಯಲ್ಲಿ ಧುಮುಕಿ ದೇಶದ ಜನತೆಯಲ್ಲಿ ಸ್ವಾಭಿಮಾನದ ಭಾವನೆಯನ್ನು ಬಿತ್ತಿದರು. ಜೀವನವನ್ನೇ ಮುಡುಪಾಗಿಟ್ಟು ತ್ಯಾಗ ಬಲಿದಾನಗಳ ಮುಖೇನ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ಪ್ರಸ್ತುತ ಯುಗದಲ್ಲಿ ನಾವು ಪಡೆದಿರುವ ಸ್ವಾತಂತ್ರ್ಯವನ್ನು ಸಮಾನತೆ ಹಾಗೂ ಸಾಮಾಜಿಕ ನ್ಯಾಯದೊಂದಿಗೆ ರಕ್ಷಿಸಬೇಕು ಎಂದು ಅಭಿಪ್ರಾಯಪಟ್ಟರು.

ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಕೆ.ಎನ್. ಶಿವಕುಮಾರ್ ಮಾತನಾಡಿ, ದೇಶ ಸ್ವಾತಂತ್ರ್ಯ ಪಡೆಯುವಲ್ಲಿ ಶ್ರಮಿಸಿ ತ್ಯಾಗ–ಬಲಿದಾನ ಮಾಡಿದ ಶ್ರೇಷ್ಠ ವ್ಯಕ್ತಿಗಳನ್ನು ಸ್ಮರಿಸಬೇಕು. ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮರನ್ನು ನೆನೆದು ಸಾಧನೆಯ ಹಾದಿಯಲ್ಲಿ ಸಾಗಬೇಕು. ವೈಜ್ಞಾನಿಕ ಜಗತ್ತಿನಲ್ಲಿ ಸರ್ವರೂ ಶಾಂತಿಯಿಂದ ಜೀವಿಸಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಸಿ.ಎಸ್. ಹೊನ್ನೇಗೌಡರವರು, ಭಾರತ ದೇಶ ಸಂಪದ್ಭರಿತ ನಾಡಾಗಿರುವುದಷ್ಟೇ ಅಲ್ಲದೆ ಸಂಸ್ಕೃತಿ ಹಾಗೂ ಪರಂಪರೆಯನ್ನು ಸಾರ್ವಕಾಲಿಕವಾಗಿ ಪಸರಿಸಿರುವ ದೇಶವಾಗಿದೆ. ಅನೇಕ ಮಹನೀಯರ ತ್ಯಾಗ ಬಲಿದಾನಗಳಿಂದ ಪಡೆದುಕೊಂಡಿರುವ ಸ್ವಾತಂತ್ರ್ಯಕ್ಕೆ ಪ್ರಸ್ತುತ ನ್ಯಾಯವನ್ನು ಒದಗಿಸಬೇಕಾದರೆ ಸೇವಾ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಜನಪ್ರತಿನಿಧಿಗಳು ಹಾಗೂ ಕಲಿಕಾ ನಿರತರಾಗಿರುವ ಕಲಿಕಾರ್ಥಿಗಳು ದೇಶದ ಸಾರ್ವಭೌಮತ್ವ ಹಾಗೂ ಸಂಪನ್ನತೆಯನ್ನು ಅರಿತುಕೊಳ್ಳಬೇಕು. ದೇಶ ರಕ್ಷಕರಾದ ಸೈನಿಕರನ್ನು ಗೌರವಿಸುವ ಮುಖೇನ ಪ್ರಜ್ಞಾಪೂರ್ವಕ ಪ್ರಜೆಗಳಾಗಿ ಸ್ವಾತಂತ್ರ್ಯವನ್ನು ಸದಾ ಕಾಲ ಸ್ಮರಿಸಿ ಪ್ರೀತಿಸಬೇಕೆಂದು ಹೇಳಿದರು.

ಕಚೇರಿ ಅಧೀಕ್ಷಕರಾದ ಶ್ರೀ ಕೆ.ವಿ. ಸುಂದರರಾಜು, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಶ್ರೀ ಹೆಚ್.ಆರ್. ಗುರು, ಎನ್‌ಸಿಸಿ ಅಧಿಕಾರಿ ಶ್ರೀ ಕೆ.ಜಿ. ಶಶಿಕುಮಾರ್, ಯುವ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಶ್ರೀ ಆರ್. ರವಿತೇಜ ಹಾಗೂ ರೇಂಜರ್ಸ್–ರೋವರ್ಸ್ ಘಟಕಗಳ ಸಂಚಾಲಕರಾದ ಶ್ರೀಮತಿ ಎಂ.ಎಸ್. ದೀಪಾಲಿ, ಶ್ರೀ ಹೆಚ್.ಎಸ್. ಪ್ರವೀಣ್ ಕುಮಾರ್, ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂ ಸೇವಕರು, ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಪಿ.ಎಂ. ವಿಕ್ರಂ ಸ್ವಾಗತಿಸಿದರು, ಕನ್ನಡ ಉಪನ್ಯಾಸಕರಾದ ಶ್ರೀ ಜಿ ಗೂಳಪ್ಪಸ್ವಾಮಿ ವಂದಿಸಿದರು ಹಾಗೂ ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಎಂ.ಎನ್. ಜಯಶೀಲ ನಿರೂಪಣೆ ಮಾಡಿದರು.

## ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು

**ಸುತ್ತೂರಿನ ಜೆಎಸ್‌ಎಸ್ ಸಂಸ್ಥೆಗಳ ಸಮುಚ್ಚಯದಲ್ಲಿ** 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಮೈಸೂರಿನ ನಿವೃತ್ತ ಪೊಲೀಸ್ ಅಧೀಕ್ಷಕರಾದ ಶ್ರೀ ಎಂ.ಪಿ. ಜಯುವಮಾರುತಿರವರು ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತಾ, ಎಲ್ಲಾ ಜಾತಿ ಮತ ಧರ್ಮದಿಂದ ಕೂಡಿದ ಭಾರತಕ್ಕೆ ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಶೌರ್ಯ, ತ್ಯಾಗ, ಬಲಿದಾನದ ಮೂಲಕ ಸ್ವಾತಂತ್ರ್ಯವನ್ನು ಗಳಿಸಿಕೊಟ್ಟಿದ್ದಾರೆ, ಸ್ವಾತಂತ್ರ್ಯವೆನ್ನುವುದು ಒಂದು ಮಾಣಿಕ್ಯದಂತೆ, ಅದನ್ನು ಜತನದಿಂದ ಕಾಪಾಡಿಕೊಳ್ಳಬೇಕು. ಭಾರತ ಜಗತ್ತಿನಾದ್ಯಂತ ಸರ್ವಶ್ರೇಷ್ಠ ಸಂಪನ್ನತೆ ಹಾಗೂ ಸರ್ವಧರ್ಮ ಸಾಮರಸ್ಯದಿಂದ ಕೂಡಿದ ದೇಶವಾಗಿದೆ. ಮಾಹಿತಿ ತಂತ್ರಜ್ಞಾನ ಇಂದು ಜಗತ್ತಿನಲ್ಲಿ ಪ್ರಭಾವ ಬೀರುತ್ತಿದ್ದು, ಸಾಮಾಜಿಕ ಮಾಧ್ಯಮಗಳ ದುಷ್ಪರಿಣಾಮಗಳನ್ನು ಅರಿತು ಜ್ಞಾನದ ಸದುಪಯೋಗ ಪಡೆದುಕೊಳ್ಳಬೇಕು. ಮಕ್ಕಳೇ ದೇಶದ ಭವಿಷ್ಯ, ನಮ್ಮ ರಾಷ್ಟ್ರದ ಬೆಳವಣಿಗೆಗೆ ಮತ್ತು ಉನ್ನತಿಗೆ ಮಕ್ಕಳ ಪಾತ್ರ ಬಹುಮುಖ್ಯವಾದುದು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಲಿಂಗರಾಜ ಗಾಂಧಿಯವರು ಮಾತನಾಡಿ, ಈ ಶಾಲೆಯಲ್ಲಿ ಪೂರ್ವೋತ್ತರ ಈಶಾನ್ಯ ರಾಜ್ಯದ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ದೇಶದ ರಾಷ್ಟ್ರೀಯ ಭಾವೈಕ್ಯತೆಯ ಸಂಕೇತ. ಜಗತ್ತು ನಿದ್ರಿಸುತ್ತಿರುವಾಗ ಸ್ವಾತಂತ್ರ್ಯ ಪಡೆದ ನಾವು ಬ್ರಿಟೀಷರ ಎರಡು ನೂರು ವರ್ಷಗಳ ದಾಸ್ಯದ ಸಂಕೋಲೆಯಿಂದ ಬಿಡುಗಡೆ ಪಡೆದು ಇಂದಿಗೆ 79 ವರ್ಷಗಳಾಗಿವೆ. ಈ ಕಾಲಮಾನದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಭಾರತ ಪ್ರಗತಿ ಸಾಧಿಸಿರುವುದು ಹೆಮ್ಮೆಯ ವಿಷಯ. ಶಿಕ್ಷಣದ ಕ್ರಾಂತಿಯಾಗದಿದ್ದರೆ ಆರ್ಥಿಕ, ಸಾಮಾಜಿಕ ಪ್ರಗತಿ ಸಾಧ್ಯವಿಲ್ಲ ಎಂಬುದನ್ನು ಅರಿತು ಸ್ವಯಂಸೇವಾ ಸಂಸ್ಥೆಗಳು ಸರ್ಕಾರದ ಜೊತೆಗೆ ಒಗ್ಗೂಡಿ ಸೇವೆ ಸಲ್ಲಿಸುತ್ತಿವೆ. ಯುವಶಕ್ತಿ ಭಾರತದ ದೊಡ್ಡ ಶಕ್ತಿ. ಈ ಶಕ್ತಿಗೆ ಕೌಶಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಸದೃಢ ಭಾರತ ನಿರ್ಮಾಣ ಮಾಡುವ ಕೆಲಸ ಆಗಬೇಕಿದೆ ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಜೆಎಸ್‌ಎಸ್ ಸಂಸ್ಥೆಗಳ ಆಡಳಿತಾಧಿಕಾರಿಗಳಾದ ಶ್ರೀ ಎಸ್.ಪಿ. ಉದಯಶಂಕರ್‌ರವರು ವಹಿಸಿದ್ದರು, ಸಂಸ್ಥೆಯ ಮುಖ್ಯಸ್ಥರುಗಳಾದ ಶ್ರೀ ಜಿ. ಎಲ್. ತ್ರಿಪುರಾಂತಕ, ಶ್ರೀ ವೀರಭದ್ರಯ್ಯ, ಡಾ. ಹೆಚ್.ಎಂ. ಮಹೇಶ್, ಶ್ರೀ ಎಂ. ರಾಜಶೇಖರಮೂರ್ತಿ, ಶ್ರೀ ಜಿ. ಶಿವಮಲ್ಲು, ಶ್ರೀ ಎಂ.ಜಿ. ಬಸವಣ್ಣ, ಶ್ರೀ ಜಿ.ಎಂ. ಷಡಕ್ಷರಿ, ಶ್ರೀ ಜಿ. ಶಿವಸ್ವಾಮಿ, ಶ್ರೀ ಮಹದೇವಪ್ರಸಾದ್, ಶ್ರೀಮತಿ ಸುಶೀಲಾ ಹಾಗೂ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಮಹತ್ವದ ಬಗ್ಗೆ ಕನ್ನಡ, ಇಂಗ್ಲಿಷ್, ಹಿಂದಿ ಭಾಷೆಗಳಲ್ಲಿ ವಿದ್ಯಾರ್ಥಿಗಳು ಭಾಷಣ ಮಾಡಿದರು. ಶಾಲೆಯ ಎನ್‌ಸಿಸಿ ವಾಯುದಳ, ಭೂದಳ, ಸ್ಕೌಟ್ ಮತ್ತು ಗೈಡ್ಸ್, ಬ್ಯಾಂಡ್ ತಂಡಗಳು ಆಕರ್ಷಕ ಪಥ ಸಂಚಲನ ನಡೆಸಿ ಅತಿಥಿಗಳಿಗೆ ಗೌರವ ವಂದನೆ ಸಲ್ಲಿಸಿದರು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಮೈನವಿರೇಳಿಸುವ ಮಲ್ಲಕಂಬ ಪ್ರದರ್ಶನ ನಡೆಯಿತು. ಶಾಲಾ ವಿದ್ಯಾರ್ಥಿಗಳು ಪ್ರಾರ್ಥಿಸಿದರು, ಪ್ರೌಢಶಾಲಾ ಮುಖ್ಯೋಪಾಧ್ಯಾಯರಾದ ಮ.ಗು. ಬಸವಣ್ಣ ಸ್ವಾಗತಿಸಿದರು. ಶ್ರೀಮತಿ ಎಸ್. ಪಲ್ಲವಿ ವಂದಿಸಿದರು, ಶ್ರೀಮತಿ ಕೆ.ಎಂ. ಬಿಂದು ನಿರೂಪಿಸಿದರು.

## ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ, ಗಿರಿಯಾಬೋವಿಪಾಳ್ಯ, ಮೈಸೂರು

**ಮೈಸೂರಿನ ಗಿರಿಯಾಬೋವಿಪಾಳ್ಯದಲ್ಲಿರುವ ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ** 79ನೇ ಸ್ವಾತ್ರಂತ್ಯ ದಿನಾಚರಣೆಯನ್ನು ನೆರವೇರಿಸಲಾಯಿತು. ಮುಖ್ಯ ಶಿಕ್ಷಕರರಾದ ಶ್ರೀ ಶಿವಕುಮಾರಸ್ವಾಮಿ ಧ್ವಜಾರೋಹಣ ನೆರವೇರಿಸಿದರು.

ವಿಷಯ ನಿರ್ವಾಹಕರಾದ ಶ್ರೀ ಜಿ. ವಿನಯ್‌ರವರು ದೇಶಭಕ್ತಿ ಮತ್ತು ರಾಷ್ಟ್ರೀಯ ಪ್ರಜ್ಞೆ ಕುರಿತು ಮಾತನಾಡಿದರು.

ಹಿರಿಯ ಶಿಕ್ಷಕರಾದ ಶ್ರೀ ಎಂ. ಬಸವಣ್ಣ, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶ್ರೀಮತಿ ವಿ. ಗೌರಮ್ಮ ಮತ್ತು ಸಹ-ಶಿಕ್ಷಕರಾದ ಶ್ರೀ ಶಿವಕುಮಾರರವರು ಮಾತನಾಡಿದರು.

ಪ್ರಾಥಮಿಕ ಮತ್ತು ಪ್ರೌಢಶಾಲೆಯ ಹಲವು ವಿದ್ಯಾರ್ಥಿಗಳು 79 ನೇ ಸ್ವಾತ್ರಂತ್ಯ ದಿನಾಚರಣೆಯ ಬಗ್ಗೆ ಮಾತನಾಡಿದರು. 6ನೇ ತರಗತಿಯ ಕು. ವರಲಕ್ಷ್ಮಿ ಪ್ರಾರ್ಥನೆ ಮಾಡಿದರು. ಕಾರ್ಯಕ್ರಮದಲ್ಲಿ ನರ್ಸರಿ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ವಿದ್ಯಾರ್ಥಿಗಳು, ಹಿರಿಯ ವಿದ್ಯಾರ್ಥಿಗಳು, ಪೋಷಕರು, ಬೋಧಕ ಮತ್ತು ಬೋಧಕೇತರ ನೌಕರ ವರ್ಗದವರು ಭಾಗವಹಿಸಿದ್ದರು.

## ಸ್ವಾತಂತ್ರ್ಯ ಚಳವಳಿ ಜನತಾ ಚಳವಳಿ – ಡಾ. ವಿ.ಎಮ್. ರಮೇಶ್

'ಸ್ವತಂತ್ರ ಮತ್ತು ಪ್ರಗತಿಪಥದ ಭಾರತ ಇಂದು ಮತ್ತು ಅಂದು ಸ್ವಾಭಾವಿಕವಾಗಿ, ಸಾಂಸ್ಕೃತಿಕವಾಗಿ ಶ್ರೀಮಂತ ದೇಶ. ಜಗತ್ತಿಗೆ ಜ್ಞಾನವನ್ನು ಧಾರೆಯೆರೆದ ದೇಶ ಎಂಬ ಹೆಮ್ಮೆ ನಮ್ಮದು. ಬ್ರಿಟಿಷ್ ಮುಕ್ತ ಭಾರತವನ್ನು ಮಾಡುವಲ್ಲಿ ಜನಸಾಮಾನ್ಯರ ಪಾತ್ರವು ಇದೆ. ಭಾರತದ ಸ್ವಾತಂತ್ರ್ಯವೆಂದರೆ ಅದು ಜನಸಾಮಾನ್ಯರ ಚಳವಳಿ' ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಇತಿಹಾಸ ಮತ್ತು ಸಂಶೋಧನಾ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ವಿ.ಎಮ್. ರಮೇಶ್ ಅವರು ಹೇಳಿದರು.

**ಮೈಸೂರಿನ ಊಟಿ ರಸ್ತೆಯ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ನಡೆದ 79ನೇ ಸ್ವಾತಂತ್ರ್ಯ ದಿನಾಚರಣೆಯ ಮುಖ್ಯ ಅತಿಥಿಗಳಾಗಿ ಆಗಮಿಸಿ ಅವರು ಮಾತನಾಡಿದರು. 'ಸ್ವಾತಂತ್ರ್ಯ ಪಡೆಯಲು ಶ್ರಮಿಸಿದವರ ಬಗ್ಗೆ ನಾವೆಲ್ಲರೂ ಅರಿಯಬೇಕು ಮತ್ತು ಸ್ಮರಿಸಬೇಕು. ಜನಸಾಮಾನ್ಯರು, ಸಾಧುಸಂತರು, ವೀರರು, ಮಹಿಳೆಯರು ಹೀಗೆ ಎಲ್ಲಾ ವರ್ಗದ ಜನರು ಭಾರತೀಯ ಸ್ವಾತಂತ್ರ್ಯ ಚಳವಳಿಯಲ್ಲಿ ಭಾಗಿಯಾಗಿದ್ದಾರೆ. ಇಲ್ಲಿ ಒಂದೊಂದು ಹೋರಾಟದ ಕಥೆಗಳು ಅವಿಸ್ಮರಣೀಯ. ಕೇವಲ ಅಹಿಂಸಾ ಚಳವಳಿಯ ಜೊತೆಗೆ ಕ್ರಾಂತಿಕಾರರ ಹೋರಾಟಗಳು ಸ್ವತಂತ್ರ್ಯ ಚಳವಳಿಯಲ್ಲಿ ಪ್ರಮುಖ ಪಾತ್ರವಹಿಸಿದೆ' ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ. ವಿ. ಸಾಂಬಶಿವಯ್ಯ ಅವರು ವಹಿಸಿ, ಧ್ವಜಾರೋಹಣವನ್ನು ನೆರವೇರಿಸಿದರು.

ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ. ಪ್ರಭು ಅವರು ಸ್ವಾಗತಿಸಿದರು. ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್. ನಂಜುಂಡಸ್ವಾಮಿ ಅವರು ವಂದಿಸಿದರು. ಕು. ಅದಿತಿ ಹೆಗ್ಡೆ ಮತ್ತು ಕ್ಷೀರ ಶಾನುಭೋಗ್ ಪ್ರಾರ್ಥಿಸಿದರು. ರಾಷ್ಟ್ರೀಯ ಹಬ್ಬಗಳ ಸಮಿತಿಯ ಸಂಚಾಲಕರಾದ ಲೆ. ಡಾ. ಎಲ್. ವಿನಯ್‌ಕುಮಾರ್ ಕಾರ್ಯಕ್ರಮವನ್ನು ನಿರೂಪಿಸಿದರು.

## ಜೆಎಸ್‌ಎಸ್ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ

**ಕೊಳ್ಳೇಗಾಲದ ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನಲ್ಲಿ** ನಡೆದ ಸ್ವಾತಂತ್ರ್ಯೋತ್ಸವದಲ್ಲಿ ಎಪಿಎಸ್ ಮಾಲೀಕರಾದ ಶ್ರೀ ಎ.ಡಿ. ಶಿವಕುಮಾರ್‌ರವರು ಧ್ವಜಾರೋಹಣ ನೇರವೇರಿಸಿ ಮಾತನಾಡಿದರು. ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ ಮಹಾವ್ಯಕ್ತಿಗಳನ್ನು ನೆನೆಯಬೇಕು. ಸರ್ವ ಧರ್ಮ ಸಮಭಾವ ಭಾರತದ ಜಾತ್ಯತೀತತೆಗೆ ಆಧಾರವಾಗಿದೆ. ವಿದ್ಯಾರ್ಥಿ ಜೀವನದಲ್ಲಿ ಚೆನ್ನಾಗಿ ಓದಿಕೊಳ್ಳುವ ಜೊತೆಗೆ ಪ್ರಪಂಚ ಜ್ಞಾನ, ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಹೆಚ್.ಎಸ್. ಕೊಂಗಳಪ್ಪರವರು ಮಾತನಾಡಿ 1947 ಆಗಸ್ಟ್ 15ರಂದು ಭಾರತ ಸ್ವಾತಂತ್ರ್ಯಗೊಂಡಿತ್ತು. ಆ ದಿನಕ್ಕೆ ಶ್ರಮಿಸಿದ ಮಹಾತ್ಮರನ್ನು ನೆನಪಿಸಿಕೊಳ್ಳಬೇಕು. ಪ್ರಸ್ತುತ ಭಾರತವು ಆರ್ಥಿಕ, ಸಾಮಾಜಿಕ ಹಾಗೂ ತಾಂತ್ರಿಕ ಕ್ಷೇತ್ರಗಳಲ್ಲಿ ಬಹಳಷ್ಟು ಪ್ರಗತಿಯನ್ನು ಸಾಧಿಸಿದೆ. ನಮ್ಮ ದೇಶವನ್ನು ಪ್ರೀತಿಸಬೇಕು. ದೇಶದ ಪ್ರಗತಿಗೆ ನಾವು ಶ್ರಮಿಸಿದರೆ ಮಾತ್ರ ಬಲಿಷ್ಠ ಮತ್ತು ಸಮೃದ್ಧ ರಾಷ್ಟ್ರವನ್ನಾಗಿಸಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎನ್. ಮಹದೇವಸ್ವಾಮಿ, ಸ್ಕೂಲ್ ಆಫ್ ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀ ಹೇಮೇಶ್‌ಮೂರ್ತಿ ಹಾಗೂ ರಾಷ್ಟ್ರೀಯ ಹಬ್ಬಗಳ ಸಂಚಾಲಕರಾದ ಶ್ರೀ ಕೆ.ಆರ್. ಗುರುಪ್ರಸಾದ್‌ರವರು ಉಪಸ್ಥಿತರಿದ್ದರು.

## ಭ್ರಷ್ಟಾಚಾರ ನಿರ್ಮೂಲನೆಯೇ ನಿಜವಾದ ಸ್ವಾತಂತ್ರ್ಯ – ಶ್ರೀ ಭಾಮಿ ವಿ. ಶೆಣೈ

ದೇಶದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಮತ್ತು ಸ್ವಚ್ಛತೆ ಕಾಪಾಡುವ ಬಗ್ಗೆ ಜಾಗೃತಿ ಮೂಡಿಸುವುದೇ ನಿಜವಾದ ಸ್ವಾತಂತ್ರ್ಯ ಎಂದು ಮೈಸೂರು ಗ್ರಾಹಕ ಪರಿಷತ್ತಿನ ಸ್ಥಾಪಕ ಕಾರ್ಯಾಧ್ಯಕ್ಷರಾದ ಶ್ರೀ ಭಾಮಿ ವಿ. ಶೆಣೈರವರು ಹೇಳಿದರು.

**ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಶ್ರೀ ಸುತ್ತೂರು ಮಠದಲ್ಲಿ** ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಆಶೀರ್ವಾದಗಳೊಂದಿಗೆ ಜರುಗಿದ 79ನೇ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮದಲ್ಲಿ ಧ್ವಜಾರೋಹಣವನ್ನು ನೆರವೇರಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯ ದಿನಾಚರಣೆ ಇಂದು ಕೇವಲ ಆಚರಣೆಗಷ್ಟೇ ಸೀಮಿತವಾಗಿದೆ. ಏಕೆ ಸ್ವಾತಂತ್ರ್ಯ ದಿನಾಚರಣೆ ಮಾಡುತ್ತೇವೆ ಎಂಬ ಬಗ್ಗೆ ಆಲೋಚಿಸಬೇಕು. ದೇಶಕ್ಕೆ ಸ್ವಾತಂತ್ರ್ಯ ಸಿಗಲು ಅಸಂಖ್ಯಾತರು ತ್ಯಾಗ–ಬಲಿದಾನ ಮಾಡಿದ್ದಾರೆ. ಅವರುಗಳನ್ನು ನೆನೆಯುತ್ತಿಲ್ಲ. ಬ್ರಿಟಿಷರಿಂದ ದೇಶಕ್ಕೆ ಒಳ್ಳೆಯದಕ್ಕಿಂತ ಕೆಟ್ಟದ್ದು ಆದುದೇ ಹೆಚ್ಚು. ಪರಕೀಯರ ಆಳ್ವಿಕೆಗೂ ಮೊದಲು ಭಾರತ ಸಂಪದ್ಭರಿತವಾಗಿತ್ತು. ಬ್ರಿಟಿಷರು ದೇಶ ಬಿಟ್ಟು ಹೋಗುವ ವೇಳೆಗಾಗಲೇ 47 ಟ್ರಿಲಿಯನ್ ಡಾಲರ್‌ನಷ್ಟು ಸಂಪತ್ತನ್ನು ದರೋಡೆ ಮಾಡಿಕೊಂಡು ಹೋಗಿದ್ದರು ಎಂದು ಅಂದಾಜಿಸಲಾಗಿದೆ ಎಂದರು.

ಯಾವುದೇ ಸರ್ಕಾರಿ ಕಚೇರಿಗಳಿಗೆ ಹೋದರೂ ಬಹುತೇಕ ಕಡೆ ಭ್ರಷ್ಟಾಚಾರ ತಾಂಡವವಾಡುತ್ತಿದೆ. ನಮ್ಮ ಕೆಲಸ ಮಾಡಿಸಿಕೊಳ್ಳಲು ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನಾವೇ ಲಂಚ ಕೊಡುತ್ತೇವೆ. ಯಾವುದೇ ಕಾರಣಕ್ಕು ಲಂಚ ಕೊಡಬಾರದು. ಹಾಗೆ ಮಾಡಿದರೆ ದೇಶದಲ್ಲಿ ಹಂತಹಂತವಾಗಿ ಭ್ರಷ್ಟಾಚಾರ ನಿರ್ಮೂಲನೆ ಆಗುತ್ತದೆ. ಇದು ಆಂದೋಲನದ ರೀತಿಯಲ್ಲಿ ಆಗಬೇಕು. ಕಸದ ಸಮಸ್ಯೆಯೂ ಭ್ರಷ್ಟಾಚಾರದಂತೆ ಮತ್ತೊಂದು ಗಂಭೀರ ಸಮಸ್ಯೆಯಾಗಿದೆ. ರಸ್ತೆಗಳಲ್ಲಿ ಯಾರಾದರು ಕಸವನ್ನು ಸುರಿದರೆ ಪ್ರಶ್ನೆ ಮಾಡುವ ಮನೋಧರ್ಮವನ್ನು ರೂಢಿಸಿಕೊಳ್ಳಬೇಕು, ಅದನ್ನು ನಾವು ಮಾಡುತ್ತಿಲ್ಲ. ದೇಶದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಸ್ವಚ್ಛತೆ

ಬಗ್ಗೆ ಜನರಲ್ಲಿ ಎಂದು ಅರಿವು ಮೂಡುತ್ತದೆಯೋ ಅಂದು ನಿಜವಾಗಿ ಸ್ವಾತಂತ್ರ್ಯ ಲಭಿಸಿದಂತಾಗುತ್ತದೆ ಎಂದು ಹೇಳಿದರು.

ಇಂದು ಜಗತ್ತಿನಲ್ಲಿ ದೇಶದೇಶಗಳ ನಡುವೆ ಯುದ್ಧಗಳು ನಡೆಯುತ್ತಿವೆ. ಅವು ಮನುಕುಲಕ್ಕೆ ಒಳ್ಳೆಯದಲ್ಲ. ಯುದ್ಧಗಳ ಅಗತ್ಯ ಇದೆಯೇ ಎಂದು ಆಲೋಚಿಸುವ ಅನಿವಾರ್ಯತೆ ಇದೆ. ಪರಿಸರ ಸಂರಕ್ಷಣೆಗಾಗಿ ಸ್ವೀಡನ್ ದೇಶದ ಗ್ರೇಟಾ ಥನ್ಬರ್ಗ್ ಎಂಬ ಬಾಲಕಿ ಕ್ರಾಂತಿ ಮಾಡಿದಳು. ಪ್ರತಿ ಶುಕ್ರವಾರ ಸ್ವೀಡನ್ ಸಂಸತ್ ಮುಂದೆ ಅವಳು ಮಾಡುತ್ತಿದ್ದ ಪ್ರತಿಭಟನೆ ಪರಿಸರ ಸಂರಕ್ಷಣೆ ಹೋರಾಟಕ್ಕೆ ಹೊಸ ದಿಕ್ಕು ತೋರಿಸಿತು. ಅವಳ ನಡೆಯಿಂದ ಇಂದು ಭಾರತದಲ್ಲಿಯೂ ಮಕ್ಕಳು ಪರಿಸರ ಸಂರಕ್ಷಣೆಗಾಗಿ ಜಾಗೃತಗೊಂಡಿದ್ದಾರೆ ಎಂದು ತಿಳಿಸಿದರು.

ಧ್ವಜಾರೋಹಣ ಮತ್ತು ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮವು ಆರಂಭವಾಯಿತು. ಜೆಎಸ್‌ಎಸ್ ಲಲಿತಾಕಲಾ ತಂಡದ ಶ್ರೀಮತಿ ರೂಪಾ ಮತ್ತು ಶ್ರೀಮತಿ ವಿನುತಾರವರುಗಳು ಪ್ರಾರ್ಥನೆ ಸಲ್ಲಿಸಿದರು. ಶ್ರೀ ಎಸ್. ನಂದೀಶ್‌ರವರು ಸ್ವಾಗತಿಸಿದರು. ಗುರುಕುಲದ ಶ್ರೀ ನಂದೀಶ್‌ದೇವರು ವಂದನಾರ್ಪಣೆ ಮಾಡಿದರು. ಶ್ರೀಮತಿ ಸುಮನ್ ವಿ. ಶೆಣೈರವರು, ಶ್ರೀಮಠದ ಗುರುಕುಲ ಸಾಧಕರು, ಸಿಬ್ಬಂದಿವರ್ಗ ಹಾಗೂ ಆರಕ್ಷಕ ಸಿಬ್ಬಂದಿ ಉಪಸ್ಥಿತರಿದ್ದರು.

## ಜೆಎಸ್‌ಎಸ್ ಜನಶಿಕ್ಷಣ ಸಂಸ್ಥೆ, ಮೈಸೂರು

**ಮೈಸೂರಿನ ಜೆಎಸ್‌ಎಸ್ ಜನ ಶಿಕ್ಷಣ ಸಂಸ್ಥೆಯಲ್ಲಿ ಜೆಎಸ್‌ಎಸ್ ಪದವಿ ಪೂರ್ವ ಕಾಲೇಜು ಮತ್ತು ಜೆಎಸ್‌ಎಸ್ ಶಿಶುನಾಳ ಶರೀಫ ಪ್ರೌಢಶಾಲೆ** ಸಹಯೋಗದೊಂದಿಗೆ ಸ್ವಾತಂತ್ರ್ಯ ದಿನಾಚರಣೆ ಆಚರಿಸಲಾಯಿತು.

ಜೆಎಸ್‌ಎಸ್ ಜನ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಶ್ರೀ ಸಿ. ರಮೇಶ ರವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಭಾರತ ದೇಶವು ಒಂದು ಸಂಪದ್ಭರಿತ ದೇಶವಾಗಿದ್ದು, ಪ್ರಾಚೀನ ಕಾಲದಿಂದಲೂ ವೇದ ಉಪನಿಷತ್ ಬೋಧನೆಗಳ ಮೂಲಕ ಜ್ಞಾನವನ್ನು ಪಸರಿಸಲಾಗುತ್ತಿತ್ತು, ನಮ್ಮ ದೇಶವನ್ನು ಯುರೋಪಿಯನ್ನರುಗಳಾದ ಪೋರ್ಚುಗಿಸರು, ಡಚ್ಚರು, ಫ್ರೆಂಚರು ಹಾಗೂ ಬ್ರಿಟೀಷರು ಆಕ್ರಮಣ ಮಾಡಿದ್ದಾರೆ. ಮೊದಲು ಭಾರತಕ್ಕೆ ಬಂದವರು ಪೋರ್ಚುಗೀಸರು. ವಾಸ್ಕೋಡಿಗಾಮ ಕ್ರಿ.ಶ. 1498ರಲ್ಲಿ ಕೇರಳದ ಕ್ಯಾಲಿಕಟ್‌ಗೆ ವ್ಯಾಪಾರಕ್ಕಾಗಿ ಬಂದು ಸಾಮ್ರಾಜ್ಯ ಸ್ಥಾಪಿಸಿದನು. ಬ್ರಿಟೀಷರು ಭಾರತಕ್ಕೆ ವ್ಯಾಪಾರಕ್ಕೆ ಬಂದು ಕ್ರಿ.ಶ. 1600ರಲ್ಲಿ ಈಸ್ಟ್ ಇಂಡಿಯಾ ಕಂಪನಿಯನ್ನು ಸ್ಥಾಪಿಸಿದರು. ಇದರ ಮೂಲಕ ಭಾರತೀಯರಿಗೆ ಉದ್ಯೋಗವನ್ನು ನೀಡುತ್ತಿದ್ದರು. ಅಂತೆಯೇ ವ್ಯವಸಾಯ ಮಾಡುವವರಿಗೆ ಸುಂಕದ ರೂಪದಲ್ಲಿ ತೆರಿಗೆ ವಸೂಲಿ ಮಾಡುತ್ತಿದ್ದರು. ಕಾಲ ಕ್ರಮೇಣ ಭಾರತೀಯರು ಶಿಕ್ಷಣವನ್ನು ಪಡೆದು ಬ್ರೀಟಿಷರ ವಿರುದ್ಧ ತಿರುಗಿದರು. 1857ರಲ್ಲಿ ಪ್ರಥಮ ಸ್ವಾತಂತ್ರ್ಯ ಸಂಗ್ರಾಮ ಆರಂಭವಾಯಿತು. ದೇಶೀಯ ನಾಯಕರಾದ ಮಂಗಲ್ ಪಾಂಡೆ, ತಾತ್ಯಾಟೋಪಿ, ಝಾನ್ಸಿರಾಣಿ ಲಕ್ಷ್ಮೀಬಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಹೀಗೆ ಸಾವಿರಾರು ವ್ಯಕ್ತಿಗಳು ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ್ದಾರೆ. 1920ರ ಅಸಹಕಾರ ಚಳುವಳಿ, 1942 ರ ಕ್ವಿಟ್ ಇಂಡಿಯಾ ಚಳುವಳಿಗಳ ಮೂಲಕ, ಹಲವಾರು ಮಹಾನ್ ವ್ಯಕ್ತಿಗಳ ಹೋರಾಟ ಮತ್ತು ಬಲಿದಾನದಿಂದ ನಮಗೆ 1947 ರಲ್ಲಿ ಸ್ವಾತಂತ್ರ್ಯ ದೊರಕಿತು ಎಂದರು.

ನಮ್ಮ ದೇಶದ ಸುರಕ್ಷತೆಗೆ ದೇಶದ ಗಡಿ ಭಾಗವನ್ನು ಕಾಯುತ್ತಿರುವ ಸೈನಿಕರ ಕೊಡುಗೆ ಗಣನೀಯವಾದುದು. ನಮ್ಮ ದೇಶದ ಸಂವಿಧಾನ ಪ್ರಪಂಚದಲ್ಲೇ ದೊಡ್ಡ ಸಂವಿಧಾನವಾಗಿದೆ. ಸಂವಿಧಾನವು ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ಎಂಬ ಮೂರು ಅಂಗಗಳಿಂದ ಕೂಡಿದೆ. ಕಾನೂನು ಎಂಬ ಚೌಕಟ್ಟನ್ನು ಪ್ರತಿಯೊಬ್ಬ ನಾಗರಿಕರು ಪಾಲಿಸಬೇಕು. ದೇಶದ ಯಾವುದೇ ಪ್ರಜೆಯಾಗಲಿ, ಅಧಿಕಾರಿಗಳಾಗಲಿ ಅಥವಾ ರಾಜಕೀಯ ನಾಯಕರಾಗಲಿ ಕಾನೂನಿಗೆ ತಲೆಬಾಗಬೇಕು.

ಭಾರತ ದೇಶವು ಸರ್ವಧರ್ಮಗಳ ರಾಷ್ಟ್ರವಾಗಿದ್ದು, ನಾವೆಲ್ಲರೂ ಒಂದೆ ಎಂಬ ಭಾವನೆಯಿಂದ ಬದುಕಬೇಕು ಎಂದರು.

ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಜ್ಞಾನಮೂರ್ತಿರವರು ಮಾತನಾಡುತ್ತಾ, ನಮ್ಮ ಭಾರತ ದೇಶವು ಅಪಾರ ಸಂಪತ್ತಿನಿಂದ ಕೂಡಿದ ದೇಶವಾಗಿತ್ತು. ಪ್ರಪಂಚದ ಬೇರೆ ಬೇರೆ ದೇಶಗಳಿಂದ ವಿದ್ಯಾಭ್ಯಾಸಕ್ಕಾಗಿ ನಮ್ಮ ದೇಶಕ್ಕೆ ಬರುತ್ತಿದ್ದರು. ಅಷ್ಟೇ ಅಲ್ಲದೆ ಪ್ರಪಂಚದಲ್ಲಿ ಮೊದಲ ವಿಶ್ವವಿದ್ಯಾಲಯವನ್ನು ಸ್ಥಾಪಿಸಿದ ಕೀರ್ತಿ ನಮ್ಮ ಭಾರತ ದೇಶಕ್ಕೆ ಸಲ್ಲುತ್ತದೆ. ಹೀಗಿದ್ದ ಭಾರತ ದೇಶಕ್ಕೆ ಪೋರ್ಚುಗಿಸರು, ಡಚ್ಚರು, ಬ್ರೀಟಿಷರು ಹಾಗೂ ಫ್ರೆಂಚರು ಆಕ್ರಮಣ ಮಾಡಿದರು. ಮೊದಲು ವ್ಯಾಪಾರಕ್ಕೆ ಬಂದವರು, ಇಲ್ಲಿನ ರಾಜರುಗಳ ಕಚ್ಚಾಟದಿಂದ ಒಂದೊಂದು ಪ್ರಾಂತ್ಯಗಳನ್ನು ಕಬಳಿಸುತ್ತಾ ಇಡೀ ದೇಶವನ್ನೇ ಆಕ್ರಮಿಸಿದರು. ಹೀಗೆ ಸುಮಾರು 400 ವರ್ಷಗಳ ಕಾಲ ಆಳ್ವಿಕೆ ಮಾಡಿ, ದೇಶದ ಸಂಪತ್ತನ್ನು ತಮ್ಮ ದೇಶಕ್ಕೆ ಕೊಂಡೊಯ್ದರು. ಹೀಗಿದ್ದ ಪರಕೀಯ ಮನಸ್ಥಿತಿಯ ಹಿಡಿತದಿಂದ ಸ್ವಾತಂತ್ರ್ಯ ಪಡೆಯಲು ಲಕ್ಷಾಂತರ ಮಹಾನ್ ವ್ಯಕ್ತಿಗಳ ಪ್ರಯತ್ನ ಹಾಗೂ ಹೋರಾಟ ಕಾರಣವಾಗಿದೆ ಎಂದು ತಿಳಿಸಿದರು.

ಜೆಎಸ್‌ಎಸ್ ಶಿಶುನಾಳ ಶರೀಫ್ ಪ್ರೌಢಶಾಲೆಯ ಮುಖ್ಯಶಿಕ್ಷಕರಾದ ಶ್ರೀ ಪಿ. ಪ್ರಕಾಶ್ ರವರು ಮಾತನಾಡುತ್ತಾ, ನಮ್ಮ ಭಾರತ ದೇಶಕ್ಕೆ 1600 ರಲ್ಲಿ ವ್ಯಾಪಾರಕ್ಕೆ ಬಂದ ಬ್ರಿಟೀಷರು ಸುಮಾರು 347 ವರ್ಷಗಳ ಕಾಲ, ತಮ್ಮ ವಹಿವಾಟು ಮತ್ತು ವ್ಯವಹಾರಗಳನ್ನು ನಡೆಸಿದರು. ಎಲ್ಲ ಸಂಪತ್ತುಗಳನ್ನು ಹೊಂದಿರುವ ನಮ್ಮ ಭಾರತ ದೇಶವು ಎಲ್ಲ ದೇಶಗಳಿಗಿಂತ ಸಮೃದ್ಧಿ ಹೊಂದಿರುವ ದೇಶವಾಗಿದೆ. ಸ್ವಾತಂತ್ರ್ಯ ಹೋರಾಟದಲ್ಲಿ ಪ್ರಮುಖ ಘಟನೆಯೆಂದರೆ 1857 ರ ಸಿಪಾಯಿ ದಂಗೆಯಾಗಿದೆ. ಈ ದಂಗೆ ಯಶಸ್ವಿಯಾಗಲು ಸಾಧ್ಯವಾಗುವುದಿಲ್ಲ. ಇದಕ್ಕೆ ಕಾರಣವೆಂದರೆ ಭಾರತೀಯ ಸೈನಿಕರಿಗೂ ಹಾಗೂ ಬ್ರಿಟೀಷ್ ಸೈನಿಕರಿಗೂ ಇದ್ದ ತಾರತಮ್ಯಗಳು. ಬ್ರಿಟೀಷರು ಹೆಚ್ಚಿನ ಸೌಕರ್ಯಗಳನ್ನು ಬ್ರಿಟೀಷ್ ಸೈನಿಕರಿಗೆ ನೀಡುತ್ತಿದ್ದರು. ಹಾಗಾಗಿ ಪ್ರತಿಯೊಂದು ದಂಗೆಯಲ್ಲಿ ಬ್ರೀಟಿಷರು ವಿಜಯವನ್ನು ಸಾಧಿಸುತ್ತಿದ್ದರು. ಭಾರತೀಯ ಸೈನಿಕರ ಬಂದೂಕುಗಳಿಗೆ ಬ್ರಿಟೀಷರು ಹಂದಿ ಮತ್ತು ಹಸುವಿನ ಕೊಬ್ಬನ್ನು ಸವರಿದರು. ಇದರಿಂದ ಭಾರತೀಯ ಸೈನಿಕರು ಬ್ರಿಟೀಷರು ಕೊಟ್ಟ ತೋಟಗಳನ್ನು ಬಳಸಲು ನಿರಾಕರಿಸುತ್ತಾರೆ. ಬ್ರಿಟೀಷರು ಭಾರತೀಯ ಸೈನಿಕರನ್ನು ಪೆರೇಡ್ ಮಾಡಲು ಒತ್ತಾಯಿಸುತ್ತಾರೆ. ಇದನ್ನು ಕಂಡ ಮಂಗಲಪಾಂಡೆ ಸಿಡಿದೆದ್ದು, ಬ್ರಿಟೀಷರ ವಿರುದ್ಧ ಹೋರಾಡಿ ಕೊನೆಗೆ ಗುಂಡಿನ ದಾಳಿಯಿಂದ ತನ್ನ ಪ್ರಾಣವನ್ನು ಕಳೆದುಕೊಂಡನು. ಹೀಗೆ ಸಾವಿರಾರು ಲಕ್ಷಾಂತರ ಜನರು ದೇಶಕ್ಕಾಗಿ ವೀರ ಮರಣ ಹೊಂದಿ ಸ್ವಾತಂತ್ರ್ಯ ತಂದು ಕೊಟ್ಟಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ಸ್ವಾತಂತ್ರ್ಯ ಹೋರಾಟ ಕುರಿತು ಭಾಷಣ, "ಆಪರೇಷನ್ ಸಿಂಧೂರ" ಕುರಿತ ಅಭಿನಯ ನೃತ್ಯ, ದೇಶಭಕ್ತಿ ಗೀತೆ ಹಾಗೂ ನೃತ್ಯಗಳನ್ನು ಏರ್ಪಡಿಸಲಾಗಿತ್ತು. ಎಲ್ಲ ಸಂಸ್ಥೆಗಳ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳಿಂದ ಪಥ ಸಂಚಲನದ ಮೂಲಕ ಜಾಥಾ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಜನ ಶಿಕ್ಷಣ ಸಂಸ್ಥೆ, ಜೆಎಸ್‌ಎಸ್ ಪದವಿಪೂರ್ವ ಕಾಲೇಜು ಹಾಗೂ ಜೆಎಸ್‌ಎಸ್ ಶಿಶುನಾಳ ಶರೀಫ್ ಪ್ರೌಢಶಾಲೆಯ ಸಿಬ್ಬಂದಿ ವರ್ಗದವರು ಸಹಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಮರವಿದ್ದು ಫಲವೇನು ನೆಳಲಿಲ್ಲದನ್ನಕ್ಕ
ಧನವಿದ್ದು ಫಲವೇನು ದಯವಿಲ್ಲದನ್ನಕ್ಕ
ಹಸುವಿದ್ದು ಫಲವೇನು ಹಯನಿಲ್ಲದನ್ನಕ್ಕ
ರೂಪಿದ್ದು ಫಲವೇನು ಗುಣವಿಲ್ಲದನ್ನಕ್ಕ
ಅಗಲಿದ್ದು ಫಲವೇನು ಬಾನವಿಲ್ಲದನ್ನಕ್ಕ
ನಾನಿದ್ದು ಫಲವೇನು ನಿಮ್ಮ ಜ್ಞಾನವಿಲ್ಲದನ್ನಕ್ಕ
ಚೆನ್ನಮಲ್ಲಿಕಾರ್ಜುನಾ

ಅಕ್ಕಮಹಾದೇವಿ

## ಜೆಎಸ್‌ಎಸ್ ಆರೋಗ್ಯ ವಿಜ್ಞಾನ ಸಂಸ್ಥೆಗಳು, ಮೈಸೂರು

**ಜೆಎಸ್‌ಎಸ್ ಆರೋಗ್ಯ ವಿಜ್ಞಾನ ಸಂಸ್ಥೆಗಳ** ವತಿಯಿಂದ ದಿನಾಂಕ 15.8.2025 ರಂದು 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮದ್ರಾಸ್ ರೆಜಿಮೆಂಟ್‌ನ ನಿವೃತ್ತ ಗೌರವ ಕ್ಯಾಪ್ಟನ್ ಶ್ರೀ ಎನ್. ಎಸ್. ವಿವೇಕಾನಂದರವರು ಮತ್ತು ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕರಾದ ಶ್ರೀ ಆರ್. ಮಹೇಶ್‌ರವರು ಧ್ವಜಾರೋಹಣವನ್ನು ನೆರವೇರಿಸಿದರು.

ಶ್ರೀ ಎನ್.ಎಸ್. ವಿವೇಕಾನಂದರವರು ಮಾತನಾಡುತ್ತಾ, ಸ್ವಾತಂತ್ರ್ಯ ದಿನಾಚರಣೆಯು ದೇಶದ ಪ್ರತಿಯೊಬ್ಬ ನಾಗರಿಕನ ಸ್ವಾತಂತ್ರ್ಯದ ಸಂಕೇತವಾಗಿದೆ. ಇಡೀ ದೇಶವು ಕತ್ತಲಿನಿಂದ ಬೆಳಕಿನೆಡೆಗೆ ಸಾಗುವ ಹೊಸ ಸೂರ್ಯೋದಯವನ್ನು ಕಂಡ ದಿನವಾಗಿದೆ. ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಮಹನೀಯರನ್ನು ಶ್ರದ್ಧೆ ಮತ್ತು ಕೃತಜ್ಞತೆಯಿಂದ ನೆನೆಯಬೇಕು. ಇಂದು ನಾವು ಮಾಡುವ ಧ್ವಜಾರೋಹಣವು ದೇಶದ ಸ್ವಾತಂತ್ರ್ಯ ಹೋರಾಟವನ್ನು ನೆನಪಿಸುತ್ತದೆ. ಅತೀ ಚಿಕ್ಕ ವಯಸ್ಸಿನಲ್ಲೇ ಸೇನೆಗೆ ಸೇರಿ ಸೇವೆ ಸಲ್ಲಿಸಿದ ಖುಷಿ ನನಗಿದೆ. ಪ್ರಸ್ತುತ ವಿದ್ಯಮಾನದ ಪ್ರಕಾರ ಯುವ ಜನತೆಯಲ್ಲಿ ಆರೋಗ್ಯ ಕುಂಠಿತಗೊಳ್ಳುತ್ತಿರುವುದರಿಂದ ಮುಂದಿನ ಭವಿಷ್ಯದಲ್ಲಿ ಸೇನೆಗೆ ಸೇರ್ಪಡೆಯಾಗುವ ಯುವ ಜನತೆಯಿಂದ ನಾವು ಹೆಚ್ಚಾಗಿ ಉತ್ತಮ ಸೇವೆಯನ್ನು ನಿರೀಕ್ಷಿಸಲ್ಪಡಲು ಸಾಧ್ಯವಾಗದು. ಆದ ಕಾರಣ ಹೆಚ್ಚಾಗಿ ನಾವು ಪೌಷ್ಟಿಕಾಂಶವಾದ ಆಹಾರ ಸೇವನೆ ಹಾಗು ಕ್ರಮಬದ್ಧವಾದ ಜೀವನ ಶೈಲಿಯನ್ನು ಅನುಸರಿಸುವುದರಿಂದ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕರಾದ ಶ್ರೀ ಆರ್. ಮಹೇಶ್‌ರವರು ಮಾತನಾಡುತ್ತಾ, ಭಾರತವು ವೈವಿಧ್ಯಮಯ ದೇಶವಾಗಿದ್ದು, ವಿವಿಧ ಜನರು ತಮ್ಮದೆ ಆದ ವಿಶಿಷ್ಟ ಸಂಸ್ಕೃತಿಗಳು ಮತ್ತು ಪದ್ಧತಿಗಳೊಂದಿಗೆ ವಾಸಿಸುತ್ತಿದ್ದಾರೆ. ಭಾರತೀಯರು ಎಲ್ಲಾ ಹಬ್ಬಗಳನ್ನು ಒಟ್ಟಾಗಿ ಆಚರಿಸುವ ಹಾಗೆ ಇಂದಿನ ಸ್ವಾತಂತ್ರ್ಯ ದಿನಾಚರಣೆಯನ್ನು ಒಟ್ಟಾಗಿ ಆಚರಿಸುವುದು ಹೆಮ್ಮೆಯ ವಿಷಯವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಮಡಿದ ಸ್ವಾತಂತ್ರ ಹೋರಾಟಗಾರರನ್ನು ಈ ಸಂದರ್ಭದಲ್ಲಿ ಸ್ಮರಿಸಬೇಕು. ಯುವ ಪೀಳಿಗೆಯು ಒಳ್ಳೆಯ ಜೀವನ ಶೈಲಿಯನ್ನು ಅಳವಡಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾಗಿದ್ದ ಅಂಗಸಂಸ್ಥೆಗಳ ಪಥಚಲನ ಸ್ಪರ್ಧೆಯಲ್ಲಿ ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್‌ನ ವಿದ್ಯಾರ್ಥಿಗಳು ರೋಲಿಂಗ್ ಟ್ರೋಫಿಯನ್ನು ಪಡೆದುಕೊಂಡರು. ಈ ಕಾರ್ಯಕ್ರಮದ ಅಂಗವಾಗಿ ಅಂಗಸಂಸ್ಥೆಯ ವಿದ್ಯಾರ್ಥಿಗಳು ಎಲ್ಲಾ ರಾಜ್ಯಗಳ ವಿವಿಧ ವೇಷಭೂಷಣಗಳನ್ನು ಧರಿಸಿ ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಡಿ. ಎನ್. ರೇಣುಕಾದೇವಿ, ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆಯ ಪ್ರಾಂಶುಪಾಲರಾದ ಡಾ. ಆರ್. ಸುಮ ಜೆಎಸ್‌ಎಸ್ ಕಾಲೇಜ್ ಆಫ್ ನರ್ಸಿಂಗ್‌ನ ಪ್ರಾಂಶುಪಾಲರಾದ ಶ್ರೀಮತಿ ಎಂ.ಕೆ. ಅಶ್ವಿತಿದೇವಿ ಮತ್ತು ಎಲ್ಲಾ ಸಂಸ್ಥೆಗಳ ಬೋಧಕ, ಬೋಧಕೇತರ ವೃಂದದವರು ಹಾಗು ವಿದ್ಯಾರ್ಥಿಗಳು ಹಾಜರಿದ್ದರು. ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್‌ನ ಬೋಧಕರಾದ ಶ್ರೀಮತಿ ಕೆ.ವಿ. ಮಂಜುಳ ಸ್ವಾಗತಿಸಿದರು, ವಾಕ್ ಮತ್ತು ಶ್ರವಣ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕರಾದ ಕು. ಸ್ಫೂರ್ತಿ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮವನ್ನು ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್‌ನ ಬೋಧಕರಾದ ಶ್ರೀಮತಿ ಎಸ್. ನೀತಾಡಳ್ವಿ ನಿರೂಪಿಸಿದರು.

☐

## ಜೆಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆ, ಮೇಟಗಳ್ಳಿ




**ಮೇಟಗಳ್ಳಿಯ ಜೆಎಸ್‌ಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ** ನಡೆದ 79 ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾರತೀಯ ಸೇನೆಯ ನಿವೃತ್ತ ಸುಬೇದಾರ್ ಮೇಜರ್ ಶ್ರೀ ಪಿ. ಶ್ರೀಧರ್‌ರವರು ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತಾ, ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರರ ಬಗ್ಗೆ ಅಭಿಮಾನ, ಗೌರವ ಹೊಂದಿರಬೇಕು. ಜೀವನದಲ್ಲಿ ಶಿಸ್ತು ಬಹಳ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ಬೆಳಗ್ಗೆ ಎದ್ದ ತಕ್ಷಣ ಭೂಮಿ ತಾಯಿಗೆ ನಮಿಸಿ, ತಂದೆ ತಾಯಿಗಳ ಕಾಲಿಗೆ ನಮಸ್ಕರಿಸಿ ಆಶೀರ್ವಾದ ಪಡೆಯಬೇಕು. ಶೈಕ್ಷಣಿಕ ಅಭ್ಯಾಸವಲ್ಲದೆ ಬೇರೆ ಯಾವುದೇ ಕೆಟ್ಟ ಅಭ್ಯಾಸಗಳಲ್ಲಿ ತೊಡಗಿಸಿಕೊಳ್ಳದೆ ಸನ್ಮಾರ್ಗದಲ್ಲಿ ನಡಯಬೇಕು ಎಂದರು.

ಶಾಲಾ ಮುಖ್ಯೋಪಾಧ್ಯಾಯರಾದ ಶ್ರೀ ಎನ್.ಪಿ ಸತೀಶ್‌ರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಪ್ರಪಂಚದಲ್ಲಿ ಭಾರತ ತುಂಬಾ ಸುಸಂಸ್ಕೃತವಾದ ದೇಶ. ನಮ್ಮ ದೇಶದಲ್ಲಿರುವಂತಹ ಸಂಸ್ಕೃತಿ ಪ್ರಪಂಚದ ಬೇರೆ ಯಾವುದೇ ದೇಶದಲ್ಲಿಯೂ ಇಲ್ಲ. ದೇಶಾಭಿಮಾನ ಎಲ್ಲದ್ದಕ್ಕಿಂತ ಶ್ರೇಷ್ಠವಾದುದು. ಮೈಸೂರಿನ ಹಾರ್ಡ್ವಿಕ್ ಶಾಲೆಯ ವಿದ್ಯಾರ್ಥಿ ಶ್ರೀ ರಾಮಸ್ವಾಮಿ ಎಂಬುವವರು ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗವಹಿಸಿ ಹುತಾತ್ಮರಾದ ನೆನಪಿಗಾಗಿ ರಾಮಸ್ವಾಮಿ ವೃತ್ತ ನಮ್ಮ ಕಣ್ಣು ಮುಂದೆ ಇದೆ ಎಂದರು. ಶಾಲೆಯ ವಿವಿಧ ತರಗತಿ ವಿದ್ಯಾರ್ಥಿಗಳು ಸ್ವಾತಂತ್ರ್ಯ ದಿನಾಚರಣೆ ಬಗ್ಗೆ ಮಾತನಾಡಿದರು. ಮಕ್ಕಳು ಸ್ವಾತಂತ್ರ್ಯ ದಿನಾಚರಣೆ ಕುರಿತಾದ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು

ವಿತರಿಸಲಾಯಿತು. ವಿದ್ಯಾರ್ಥಿಗಳು ಪ್ರಾರ್ಥನೆ ನೆರವೇರಿಸಿದರು. ವಿದ್ಯಾರ್ಥಿನಿಯರಾದ ಕು. ಜಿ.ಬಿ. ಧನುಶ್ರೀ ಸ್ವಾಗತಿಸಿದರು. ಕು. ಬಿ.ಆರ್. ಪ್ರಣತಿ ಪಟೇಲ್ ಕಾರ್ಯಕ್ರಮವನ್ನು ನಿರೂಪಿಸಿದರು. ಕು. ಟಿ. ಪೂರ್ವಿ ವಂದಿಸಿದರು. ವಿದ್ಯಾರ್ಥಿಗಳು ದೇಶಭಕ್ತಿಗೆ ಸಂಬಂಧಿಸಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು, ಗುಂಡ್ಲುಪೇಟೆ

**ಗುಂಡ್ಲುಪೇಟೆಯ ಜೆಎಸ್‌ಎಸ್ ಮಹಿಳಾ ಪದವಿ ಪೂರ್ವ ಕಾಲೇಜಿನ ಸಮುಚ್ಚಯದಲ್ಲಿ** 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು.

ಪದವಿಪೂರ್ವ ವಿಭಾಗದ ರಾಜ್ಯಶಾಸ್ತ್ರ ಉಪನ್ಯಾಸಕರಾದ ಶ್ರೀ ಜಿ.ವಿ. ಸುದರ್ಶನ್ ರವರು ಧ್ವಜಾರೋಹಣ ನೆರವೇರಿಸಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಪ್ರತಿಯೊಬ್ಬರನ್ನು ಸ್ಮರಣೆ ಮಾಡುವುದು ನಮ್ಮ ಆದ್ಯ ಕರ್ತವ್ಯವೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪಿ. ಮಹದೇವಮ್ಮ ರವರು ವಹಿಸಿದ್ದರು. ಪದವಿಪೂರ್ವ ವಿಭಾಗದ ಪ್ರಾಂಶುಪಾಲರಾದ ಶ್ರೀ ಮಲ್ಲಪ್ಪ ರವರು ಮತ್ತು ಪ್ರೌಢಶಾಲೆ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್.ಪಿ. ಪಶುಪತಿಯವರು ಉಪಸ್ಥಿತರಿದ್ದರು. ಕು. ಅಮೂಲ್ಯ ಪ್ರಾರ್ಥಿಸಿದರು. ಸಮುಚ್ಚಯದ ವಿವಿಧ ವಿಭಾಗಗಳ ಮುಖ್ಯಸ್ಥರುಗಳು, ಅಧ್ಯಾಪಕ, ಅಧ್ಯಾಪಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿವೃಂದದವರು ಹಾಜರಿದ್ದರು.

## ಜೆಎಸ್‌ಎಸ್ ಪ್ರೌಢಶಾಲೆ, ತೆರಕಣಾಂಬಿ

**ತೆರಕಣಾಂಬಿಯ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ 79ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ತೆರಕಣಾಂಬಿಯ ಹಾಲು ಉತ್ಪಾದಕರ ಒಕ್ಕೂಟ ಸಂಘದ ಕಾರ್ಯದರ್ಶಿಗಳಾದ ಶ್ರೀ ಮಾದಪ್ಪ ರವರು ಧ್ವಜಾರೋಹಣ ನೆರವೇರಿಸಿದರು. ಕು. ಕಾರ್ತಿಕ ಕನ್ನಡದಲ್ಲಿ, ಕು. ಅಮೃತ ಇಂಗ್ಲಿಷ್‌ನಲ್ಲಿ, ಕು. ದೀಪಾ ಹಿಂದಿಯಲ್ಲಿ ಮತ್ತು ಕು. ಮಹಾಲಕ್ಷ್ಮಿ ಸಂಸ್ಕೃತದಲ್ಲಿ ಸ್ವಾತಂತ್ರ್ಯ ದಿನಾಚರಣೆಯ ಮಹತ್ವ ಕುರಿತು ಭಾಷಣ ಮಾಡಿದರು. ವಿದ್ಯಾರ್ಥಿನಿಯರು ದೇಶಭಕ್ತಿ ಗೀತೆಯನ್ನು ಹಾಡಿದರು.

ಶಾಲೆಯ ಸಹಶಿಕ್ಷಕರಾದ ಶ್ರೀ ಕೆ.ಪಿ. ನಾಗಪ್ಪ ರವರು ಮಾತನಾಡುತ್ತಾ, ಈಸ್ಟ್ ಇಂಡಿಯಾ ಕಂಪನಿ ಹೆಸರಲ್ಲಿ ವ್ಯಾಪಾರಕ್ಕಾಗಿ ಬಂದ ಯುರೋಪಿಯನ್ನರಲ್ಲಿ ಪೋರ್ಚುಗೀಸರು, ಡಚ್ಚರು ಮತ್ತು ಫ್ರೆಂಚರನ್ನು ಮೂಲೆಗುಂಪು ಮಾಡಿದ ಬ್ರಿಟೀಷರು ನಮ್ಮ ದೇಶವನ್ನು ಸುದೀರ್ಘ ವರ್ಷಗಳ ಕಾಲ ಆಳಿದರು. ಇವರ ಆಳ್ವಿಕೆಯ ವಿರುದ್ಧ ಹೋರಾಡಿದ ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್, ಬಾಲಗಂಗಾಧರನಾಥ್ ತಿಲಕ್ ನಮಗೆ ಪ್ರಾತ ಸ್ಮರಣೀಯರು ಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ವರ್ಗದವರು, ಎಲ್ಲಾ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ವಿದ್ಯಾರ್ಥಿನಿ ಕು. ಶೃತಿ ನಿರೂಪಿಸಿದರು. ಕು. ಚಿತ್ರ ಸ್ವಾಗತಿಸಿದರು. ಕು. ಸಿಂಧೂ ವಂದನಾರ್ಪಣೆ ಮಾಡಿದರು.

□

## ಜೆಎಸ್‌ಎಸ್ ಪ್ರೌಢಶಾಲೆ, ಗೌಡಹಳ್ಳಿ

**ಗೌಡಹಳ್ಳಿಯ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಗೌಡಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀ ಶಾಂತಮಲ್ಲುರವರು ನೆರವೇರಿಸಿದರು. ಶಾಲೆಯ ಸಮಾಜ ವಿಜ್ಞಾನ ಶಿಕ್ಷಕರಾದ ಶ್ರೀ ಶಂಭುಲಿಂಗಪ್ಪನವರು ಸ್ವಾತಂತ್ರ್ಯ ದಿನಾಚರಣೆಯ ಮಹತ್ವವನ್ನು ತಿಳಿಸಿಕೊಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕರಾದ ಶ್ರೀ ಸುಬ್ಬಣ್ಣ ರವರು ರಾಷ್ಟ್ರನಾಯಕರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ದೇಶದ ಏಕತೆಗೆ ಪ್ರಯತ್ನಿಸಬೇಕು ಎಂದು ಹೇಳಿದರು ನಂತರ ಮಕ್ಕಳು ದೇಶಭಕ್ತಿ ಗೀತೆಗಳನ್ನು ಹಾಡಿದರು.

□

## ಜೆಎಸ್‌ಎಸ್ ಪ್ರೌಢಶಾಲೆ, ಜಯನಗರ, ಬೆಂಗಳೂರು

**ಬೆಂಗಳೂರಿನ ಜಯನಗರದಲ್ಲಿರುವ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು.

ಭಾರತೀಯ ವಾಯುಸೇನೆಯ ನಿವೃತ್ತ ವಿಂಗ್ ಕಮಾಂಡರ್ ಶ್ರೀ ಅಶೋಕ್ ಕುಮಾರ್‌ರವರು ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿ, ಎಲ್ಲಕ್ಕಿಂತ ದೇಶ ಮೊದಲು, ದೇಶ ಪ್ರೇಮವು ಬಹಳ ಮುಖ್ಯ, ದೇಶವನ್ನು ಗೌರವಿಸುವಂತೆ, ತಂದೆ ತಾಯಿ ಹಾಗೂ ಗುರು ಹಿರಿಯರನ್ನು ಸಹ ಎಲ್ಲರೂ ಗೌರವಿಸಬೇಕು ಎಂದು ಹೇಳಿದರು.

ಬೆಂಗಳೂರು ಜೆಎಸ್‌ಎಸ್ ಅಭಿವೃದ್ಧಿ ಸಮಿತಿ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಕೆ.ಎಂ. ಲೋಕೇಶ್ ಅಧ್ಯಕ್ಷತೆ ವಹಿಸಿದ್ದರು.

ಜೆಎಸ್‌ಎಸ್ ಪ್ರೌಢಶಾಲೆ, ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಾದ ಕು. ಭಾನುಪ್ರಿಯ, ಕು. ತೇಜಶ್ವಿನಿ ಹಾಗೂ ಕು.ಅಸ್ಪಿಯಾಬಾನು ರವರು ಕ್ರಮವಾಗಿ ಕನ್ನಡ, ಇಂಗ್ಲಿಷ್ ಹಾಗೂ ಹಿಂದಿ ಭಾಷೆಗಳಲ್ಲಿ ಸ್ವಾತಂತ್ರ್ಯೋತ್ಸವದ ಬಗ್ಗೆ ಭಾಷಣ ಮಾಡಿದರು.

ಜನಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಶ್ರೀಮತಿ ಶಶಿಕಲಾ. ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಪ್ರಸನ್ನಕುಮಾರ್, ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ಹೆಚ್.ಎಸ್. ಭಾಸ್ಕರ ಹಾಗೂ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಮತಿ ಲತಾ ಮತ್ತು ಸಹನಾ ಸಮನ್ವಯ ಶಾಲಾ ಮುಖ್ಯಸ್ಥರಾದ ದೊಡ್ಡಗುಡ್ಡಯ್ಯ ರವರು ಉಪಸ್ಥಿತರಿದ್ದರು.

ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕರಾದ ಶ್ರೀಮತಿ ಆರತಿ ದೇಶಪಾಂಡೆಯವರು ಪ್ರಾರ್ಥಿಸಿದರು, ಪ್ರೌಢಶಾಲೆ ಶಿಕ್ಷಕರಾದ ಶ್ರೀಮತಿ ಎಸ್.ಜಿ ರೇವತಿಯವರು ಸ್ವಾಗತಿಸಿದರು. ಜನಶಿಕ್ಷಣ ಸಂಸ್ಥೆಯ ಶ್ರೀ ಅಶೋಕ್‌ರವರು ವಂದಿಸಿದರು. ಪ್ರೌಢಶಾಲೆಯ ಸಂಸ್ಕೃತ ಭಾಷಾ ಶಿಕ್ಷಕರಾದ ಶ್ರೀ ಟಿ.ಆರ್. ರಾಘವೇಂದ್ರ ಕಾರ್ಯಕ್ರಮವನ್ನು ನಿರೂಪಿಸಿದರು.

## ಜೆಎಸ್‌ಎಸ್ ಪ್ರೌಢಶಾಲೆ, ಹಳ್ಳಿಕೆರೆಹುಂಡಿ

**ಹಳ್ಳಿಕೆರೆ ಹುಂಡಿಯ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ 79ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮುಖ್ಯೋಪಾಧ್ಯಾಯರಾದ ಶ್ರೀ ಎಂ. ಶಿವಕುಮಾಸ್ವಾಮಿ ರವರು ಧ್ವಜಾರೋಹಣವನ್ನು ನೆರವೇರಿಸಿದರು. ನವಿಲೂರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸದಸ್ಯರುಗಳು ಹಾಜರಿದ್ದರು. ಹಳ್ಳಿಕೆರೆಹುಂಡಿ ಗ್ರಾಮದ ಬೀದಿಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಜಾಥಾವನ್ನು ಹಮ್ಮಿಕೊಳ್ಳಲಾಯಿತು.



ಹಳ್ಳಿಕೆರೆಹುಂಡಿ ಗ್ರಾಮದ ರೈತ ಮುಖಂಡರಾದ ಬಸವಣ್ಣರವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು ಮುಖ್ಯ ಶಿಕ್ಷಕರಾದ ಶ್ರೀ ಎಂ. ಶಿವಕುಮಾರಸ್ವಾಮಿರವರು ಅಧ್ಯಕ್ಷತೆ ವಹಿಸಿದ್ದರು.

ಕು. ಪುಷ್ಪ ಮತ್ತು ತಂಡದವರು ಪ್ರಾರ್ಥಿಸಿದರು. ಕು. ಆರ್. ಅಂಕಿತ ಸ್ವಾಗತಿಸಿದರು. ಕು. ಬೃಂದ ನಿರೂಪಿಸಿದರು. ಕು. ಎಸ್. ಅನನ್ಯ ವಂದಿಸಿದರು.

## ಜೆಎಸ್‌ಎಸ್ ಪ್ರೌಢಶಾಲೆ, ದೇವಲಾಪುರ

**ದೇವಲಾಪುರದ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ ಸ್ವಾತಂತ್ರ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿದ ಮುಖ್ಯಶಿಕ್ಷಕರಾದ ಶ್ರೀ ಜಗದೀಶ್‌ರವರು ಮಾತನಾಡಿ, ಭಾರತದ ಪ್ರಜೆಯಾಗಿ ನಾವೇನು ಮಾಡಬೇಕು ಎಂಬುದನ್ನು ಅರಿತುಕೊಳ್ಳಬೇಕು. ಹಿರಿಯರು ತಂದುಕೊಟ್ಟ ಸ್ವಾತಂತ್ರ ವನ್ನು ಉಳಿಸಿಕೊಳ್ಳಲು ಪ್ರಯತ್ನಿಸಬೇಕು ಹಾಗೆಯೇ ವಿದ್ಯಾರ್ಥಿಯಾಗಿ ನಮ್ಮ ಕರ್ತವ್ಯವೇನು? ಎಂಬುದನ್ನು ಅರಿತು ಚೆನ್ನಾಗಿ ಓದಿ ದೇಶಕ್ಕೆ ಉತ್ತಮ ಪ್ರಜೆಗಳಾಗಿ ಎಂದು ಕರೆಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಶಿವಾನಂದರವರು ಮಾತನಾಡುತ್ತಾ ವಿದ್ಯಾವಂತರಿಂದ ಅವಿದ್ಯಾವಂತರವರೆಗೆ ದೇಶಕ್ಕಾಗಿ ಹೋರಾಡಿದ ವೀರಮಹಿಳೆಯರ, ಹೋರಾಟಗಾರರ ಸಾಧನೆ ಸ್ಮರಿಸೋಣ. ಪರಿಶ್ರಮ ಮತ್ತು ಪ್ರಯತ್ನದಿಂದ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಗಳೆಲ್ಲರೂ ಪಥಸಂಚಲನದ ಮೂಲಕ ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಸಿದರಲ್ಲದೇ INDIA ಎನ್ನುವ ಮಾದರಿ ಪ್ರದರ್ಶಿಸಿ ಎಲ್ಲರ ಗಮನ ಸೆಳೆದರು ಹಾಗೂ ದೇಶದ ಏಕತೆ ಮತ್ತು ಸಂಸ್ಕೃತಿ ಬಿಂಬಿಸುವ ವೇಷಭೂಷಣ ಮತ್ತು ನೃತ್ಯವನ್ನು ಪ್ರದರ್ಶಿಸಿ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

ಕಾರ್ಯಕ್ರಮವನ್ನು ಕು. ಧನುಷಾ ನಿರೂಪಿಸಿದರು. ಕು. ವಂದನಾ ಸ್ವಾಗತಿಸಿದರು. ಕು. ಯಮುನಾ ವಂದಿಸಿದರು.

□

## ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಕೋಣನಕುಂಟೆ, ಬೆಂಗಳೂರು

**ಬೆಂಗಳೂರಿನ ಕೋಣನಕುಂಟೆಯಲ್ಲಿರುವ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ** ನಡೆದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ರಾಥಮಿಕ ಶಾಲಾ ಮುಖ್ಯಸ್ಥರಾದ ಶ್ರೀ ಕುಮಾರಸ್ವಾಮಿ ರವರು ಸ್ವಾತಂತ್ರ್ಯ ಚಳುವಳಿ ಮತ್ತು ಅದರ ಮಹತ್ವವನ್ನು ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರೌಢಶಾಲಾ ಮುಖ್ಯಸ್ಥರಾದ ಶ್ರೀ ಡಿ. ನಾಗರಾಜಪ್ಪ ರವರು ಧ್ವಜಾರೋಹಣ ನೆರವೇರಿಸಿದರು. ಎರಡು ಶಾಲಾ ವಿಭಾಗಗಳ ವಿದ್ಯಾರ್ಥಿಗಳು ಕನ್ನಡ, ಆಂಗ್ಲ ಮತ್ತು ಹಿಂದಿ ಭಾಷೆಗಳಲ್ಲಿ ಭಾಷಣ ಮಾಡಿದರು. ಕಳೆದ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶ್ರೇಯಾಂಕ ಪಡೆದ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀ ಎಸ್.ಸಿ. ನಾರಾಯಣ ಶೆಟ್ಟಿ ಮತ್ತು ಶ್ರೀ ಎಸ್. ಬಾಲರಾಜು ರವರು ಲೆಝಿಮ್ ಹಾಗೂ ಪಿರಮಿಡ್ ಪ್ರದರ್ಶನಗಳನ್ನು ಏರ್ಪಡಿಸಿದ್ದರು. ಸಹ ಶಿಕ್ಷಕರುಗಳಾದ ಶ್ರೀ ಭೀಮಪ್ಪ ಬಾಳೋಬಾಳ್ ಸ್ವಾಗತಿಸಿದರು. ಶ್ರೀ ಎಂ. ಸಂತೋಷ್ ನಿರೂಪಿಸಿದರು. ಶ್ರೀ ನಾರಾಯಣ ಸ್ವಾಮಿ ವಂದಿಸಿದರು.

## ಜೆಎಸ್‌ಎಸ್ ಪ್ರೌಢಶಾಲೆ, ಶಕ್ತಿನಗರ, ಮೈಸೂರು

**ಮೈಸೂರಿನ ಶಕ್ತಿನಗರದಲ್ಲಿರುವ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ ಸ್ವಾತಂತ್ರ್ಯೋತ್ಸವದಲ್ಲಿ ಮುಖ್ಯಶಿಕ್ಷಕರಾದ ಶ್ರೀ ರಾಜಶೇಖರಶೆಟ್ಟಿ ರವರು ಧ್ವಜಾರೋಹಣ ಮಾಡಿದರು. ವಿದ್ಯಾರ್ಥಿನಿ ಕು. ಆಫ್ರೀನ್ ತಾಜ್ ಕಾರ್ಯಕ್ರಮ ನಿರೂಪಿದರು. ಕು. ಹೀನಾ ಕೌಸರ್ ಸ್ವಾಗತಿಸಿದಳು. ಶ್ರೀಮತಿ ರೂಪಶ್ರೀ ಸ್ವಾತಂತ್ರ್ಯ ದಿನಾಚರಣೆಯ ಮಹತ್ವವನ್ನು ಕುರಿತು ಮಾತನಾಡಿದರು. ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ವಿದ್ಯಾರ್ಥಿಗಳಿಗೆ ಹಲವು ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು, ಅದರಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ಮುಖ್ಯಶಿಕ್ಷಕರು ಹಾಗೂ ಸಹಶಿಕ್ಷಕರು ವಿತರಿಸಿದರು. ಕು. ಶಿಫಾ ವಂದಿಸಿದರು.

## ಜೆಎಸ್‌ಎಸ್ ಶಿಕ್ಷಣ ಸಮುಚ್ಚಯ, ಹುಲ್ಲಹಳ್ಳಿ

**ಹುಲ್ಲಹಳ್ಳಿಯ ಜೆಎಸ್‌ಎಸ್ ಶಿಕ್ಷಣ ಸಮುಚ್ಚಯದಲ್ಲಿ** ನಡೆದ ಸ್ವಾತಂತ್ರ್ಯದಿನಾಚರಣೆಯಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ರೇವಣ್ಣರವರು ಧ್ವಜಾರೋಹಣ ನೆರವೇರಿಸಿ, ವಿದ್ಯಾರ್ಥಿಗಳು ತಮ್ಮನ್ನು ತಾವು ಉತ್ತಮ ಕೆಲಸಗಳಲ್ಲಿ ತೊಡಗಿಸಿಕೊಳ್ಳಬೇಕು. ರಾಷ್ಟ್ರದ ಭವಿಷ್ಯ ಇಂದಿನ ತರಗತಿ ಕೋಣೆಯಲ್ಲಿ ತಯಾರಾಗುತ್ತಿದೆ. ಆದ್ದರಿಂದ ನೀವುಗಳು ಉತ್ತಮ ಚಾರಿತ್ರ್ಯವಂತರಾಗಬೇಕು ಎಂದು ಹೇಳಿದರು.

ಕನ್ನಡ ಮಾಧ್ಯಮ, ಆಂಗ್ಲ ಮಾಧ್ಯಮ ಶಾಲೆಗಳ ಮತ್ತು ಸಂಸ್ಕೃತ ವಿಭಾಗದ ಮುಖ್ಯಸ್ಥರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕನ್ನಡ ಭಾಷಾ ಶಿಕ್ಷಕರಾದ ಶ್ರೀ ವೇಣುಗೋಪಾಲರವರು ಸ್ವಾತಂತ್ರ್ಯ ಚಳುವಳಿಗಾರರ ತ್ಯಾಗ, ಬಲಿದಾನಗಳ ಬಗ್ಗೆ ಮಕ್ಕಳಿಗೆ ತಿಳಿಸಿದರು.


**ಮಾಸಿಕ ಸಾಮೂಹಿಕ ವಿವಾಹ 2025**

**ಸುತ್ತೂರು ಶ್ರೀಕ್ಷೇತ್ರ**

**ನವೆಂಬರ್ 23 ಭಾನುವಾರ**

ವಿವರಗಳಿಗೆ ಸಂಪರ್ಕಿಸಿ

ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು

ಸುತ್ತೂರು

ದೂರವಾಣಿ : 08221–232223, 232224

## ಜೆಎಸ್‌ಎಸ್ ಪಬ್ಲಿಕ್ ಶಾಲೆ, ಕೆಲಗೇರಿ, ಧಾರವಾಡ




**ಧಾರವಾಡದ ಕೆಲಗೇರಿಯ ಜೆಎಸ್‌ಎಸ್ ಪಬ್ಲಿಕ್ ಶಾಲೆಯಲ್ಲಿ** ನಡೆದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಧಾರವಾಡ ವಿಭಾಗದ ಆಡಳಿತಾಧಿಕಾರಿಗಳಾದ ಶ್ರೀ ಎಸ್.ಜಿ. ಬಿರಾದಾರ್‌ರವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಯುವ ಜನತೆಯು ಸ್ವಾತಂತ್ರ್ಯವನ್ನು ದುರುಪಯೋಗ ಪಡಿಸಿಕೊಳ್ಳಬಾರದು. ಇದು ದೇಶದ ಪ್ರಗತಿಗೆ ಮಾರಕ. ನಮ್ಮನ್ನು ನಾವು ಈ ದೇಶಕ್ಕಾಗಿ ಸ್ವಲ್ಪವಾದರೂ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆಯ ಪ್ರಾಂಶುಪಾಲರಾದ ಡಾ. ಪಿ.ಎಮ್. ಜಿಜು, ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಡಿ.ಜಿ. ರಾಜಶೇಖರಪ್ಪಗೌಡ, ಜೆಎಸ್‌ಎಸ್ ಹಾಲಭಾವಿ ಸ್ಕೂಲ ಆಪ್ ಆರ್ಟ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಶ್ರೀ ಬಿ.ಎಮ್. ಪಾಟೀಲ ಹಾಗೂ ಜೆಎಸ್‌ಎಸ್ ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ಶ್ರೀ ನಾಗೇಂದ್ರ ಪ್ರಸಾದ್ ಅವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಕು. ಜಿ. ಸನ್ನಿಧಿ, ನಮ್ಮ ದೇಶಕ್ಕೆ ಅನೇಕ ಹೋರಾಟಗಾರರ ತ್ಯಾಗ ಬಲಿದಾನಗಳಿಂದ ಸ್ವಾತಂತ್ರ್ಯ ಸಿಕ್ಕಿತು ಹಾಗೂ ಸ್ವಾತಂತ್ರ್ಯ ಪಡೆಯಲು ಅನೇಕರು ತಮ್ಮ ಪ್ರಾಣವನ್ನು ಅರ್ಪಿಸಿದ್ದಾರೆ. ಹೀಗೆ ಸಿಕ್ಕ ಸ್ವಾತಂತ್ರ್ಯವನ್ನು ನಾವು ಉಳಿಸಿಕೊಂಡು ಸಮರ್ಥವಾಗಿ ಬಳೆಸಿಕೊಂಡು ಹೋಗೋಣ ಎಂದು ಹೇಳಿದರು.

ಈ ಸಮಾರಂಭದಲ್ಲಿ ಜೆಎಸ್‌ಎಸ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿ ಕು. ಗಾನವಿ ಅವರು ಸರದಾರ ವಲ್ಲಭಭಾಯಿ ಪಟೇಲ, ಮಹಾತ್ಮ ಗಾಂಧೀಜಿ, ಚಂದ್ರಶೇಖರ ಆಜಾದ್ ಮುಂತಾದವರು ದೇಶಕ್ಕಾಗಿ ಮಾಡಿದ ಹೋರಾಟ ಸದಾ ಸ್ಮರಣೀಯವಾದುದು. ಉಸಿರಿರುವವರೆಗೂ ನಾವು ಭಾರತೀಯರೆಂದು ಹೆಮ್ಮೆ ಪಡಬೇಕು ಎಂದು ಹೇಳಿದರು.

ಜೆಎಸ್‌ಎಸ್ ಪಬ್ಲಿಕ್ ಶಾಲೆಯ ಎನ್‌ಸಿಸಿ ಕೆಡೆಟ್‌ಗಳು ಭಾಗವಹಿಸಿದ್ದರು. ವಿದ್ಯಾರ್ಥಿ ಕು. ಮಾನ್ಯತಾ ಮಳಗೇರ ಸ್ವಾಗತಿಸಿದರು. ಕು. ಸನಿಹಾ ಶೆಟ್ಟಿ ವಂದನಾರ್ಪಣೆ ಮಾಡಿದರು. ಕು. ಕುನಾಲ್ ಕುಲಕರ್ಣಿ, ಕು. ಧೃತಿ ರಾಮನಗೌಡರ ಕಾರ್ಯಕ್ರಮವನ್ನು ನಿರೂಪಿಸಿದರು. ಜೆಎಸ್‌ಎಸ್ ಪಬ್ಲಿಕ್ ಶಾಲೆಯ 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳನ್ನು ಹಾಡಿದರು.

## ಜೆಎಸ್‌ಎಸ್ ಸಂಯುಕ್ತ ಪದವಿಪೂರ್ವ ಕಾಲೇಜು, ವೀರರಾಜಪುರ

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ವೀರರಾಜಪುರದಲ್ಲಿರುವ **ಜೆಎಸ್‌ಎಸ್ ಸಂಯುಕ್ತ ಪದವಿಪೂರ್ವ ಕಾಲೇಜು ಹಾಗೂ ಜೆಎಸ್‌ಎಸ್ ಪ್ರೌಢಶಾಲೆ** ವತಿಯಿಂದ ನಡೆದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಶಾಲೆಯ ಮುಖ್ಯ ಶಿಕ್ಷಕರಾದ ಡಾ. ಬಿ. ರಾಜೇಂದ್ರರವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಈಸ್ಟ್ ಇಂಡಿಯಾ ಕಂಪನಿ ಹೆಸರಲ್ಲಿ ವ್ಯಾಪಾರಕ್ಕಾಗಿ ಬಂದ ಯುರೋಪಿಯನ್ನರಲ್ಲಿ ಪೋರ್ಚುಗೀಸರು, ಡಚ್ಚರು, ಮತ್ತು ಫ್ರೆಂಚರನ್ನು ಮೂಲೆಗುಂಪು ಮಾಡಿದ ಬ್ರಿಟೀಷರು ನಮ್ಮ ದೇಶವನ್ನು 1947 ಆಗಸ್ಟ್ 15 ರವರೆಗೆ ಆಳಿದರು. ಇವರ ಆಳ್ವಿಕೆಯ ವಿರುದ್ಧ 1857 ರ ಭಾರತದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮ, ಕ್ವಿಟ್ ಇಂಡಿಯಾ ಚಳವಳಿ, ದಂಡಿ ಸತ್ಯಾಗ್ರಹ, ಅಸಹಕಾರ ಚಳುವಳಿ, ಸತ್ಯಾಗ್ರಹ, ಅಹಿಂಸೆ ಮುಂತಾದವುಗಳ ಮೂಲಕ ಸ್ವಾತಂತ್ರ್ಯ ಲಭಿಸಿದೆ. ಸ್ವತಂತ್ರ ಭಾರತ ಎಲ್ಲಾ ಕ್ಷೇತ್ರಗಳಲ್ಲೂ ಪ್ರಗತಿ ಹೊಂದಲು ನಾವೆಲ್ಲರೂ ಶ್ರಮಿಸೋಣ ಎಂದು ಕರೆಕೊಟ್ಟರು.

ಕು. ಪಲ್ಲವಿ, ಕು. ಹೆಚ್.ಎನ್, ಶ್ರೇಯಸ್ ಕು. ಬಿಂದುಶ್ರೀ ಕನ್ನಡದಲ್ಲಿ, ಕು. ಸ್ಫೂರ್ತಿ ಇಂಗ್ಲೀಷ್ ನಲ್ಲಿ ಹಾಗೂ ಕು. ಧನುಶ್ರೀ ಹಿಂದಿಯಲ್ಲಿ ಸ್ವಾತಂತ್ರ್ಯೋತ್ಸವ ಕುರಿತು ಭಾಷಣ ಮಾಡಿದರು.

ಆಂಗ್ಲಭಾಷಾ ಶಿಕ್ಷಕರಾದ ಶ್ರೀ ಎಸ್.ಎಲ್. ಮಹದೇವಸ್ವಾಮಿ ರವರು ಮಾತನಾಡುತ್ತಾ, ಸ್ವಾತಂತ್ರ್ಯವು ದೇಶಕ್ಕೆ ಉಚಿತವಾಗಿ ಸಿಕ್ಕಿದ್ದಲ್ಲ, ಇದಕ್ಕಾಗಿ ದೇಶದ ಸಾವಿರಾರು ಜನರ ತ್ಯಾಗ ಮತ್ತು ಬಲಿದಾನ ನಡೆದಿದೆ. ಆದ್ದರಿಂದ ಸ್ವಾತಂತ್ರ್ಯಕ್ಕಾಗಿ ಜೀವತ್ಯಾಗ ಮಾಡಿದ ಮಹನೀಯರನ್ನು ಈ ಸಂದರ್ಭದಲ್ಲಿ ಸ್ಮರಣೆ ಮಾಡುವುದು ನಮ್ಮೆಲ್ಲರ ಕರ್ತವ್ಯ. ಬ್ರಿಟೀಷರ ದಾಸ್ಯದ ಸಂಕೋಲೆಯಿಂದ ಭಾರತವನ್ನು ಮುಕ್ತಗೊಳಿಸಲು ತಮ್ಮ ಸರ್ವಸ್ವವನ್ನು ತ್ಯಾಗ ಮಾಡಿದ ಸ್ವಾತಂತ್ರ್ಯ ಹೋರಾಟಗಾರರನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಆದರ್ಶವಾಗಿಟ್ಟುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಸಿ. ಮಮತ ಉಪಸ್ಥಿತರಿದ್ದರು. ಶಾಲಾ–ಕಾಲೇಜಿನ ಅಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಕು. ವಿಜಯಲಕ್ಷ್ಮಿ ಕಾರ್ಯಕ್ರಮವನ್ನು ನಿರೂಪಿಸಿದರು. ಕು. ಬಿಂದುಶ್ರೀ ಮತ್ತು ತಂಡದವರು ಭಾರತಾಂಬೆಯ ಕುರಿತು ಪ್ರಾರ್ಥನಾ ಗೀತೆ ಹಾಡಿದರು. ಕು. ಎಂ. ಶ್ರೇಯ ಸ್ವಾಗತಿಸಿದರು. ಕು. ಪೂರ್ಣಿಮ ವಂದನಾರ್ಪಣೆ ಮಾಡಿದರು.

□

## ಶ್ರೀ ಮದ್ದಾನೇಶ್ವರ ಜೆಎಸ್‌ಎಸ್ ಪ್ರೌಢಶಾಲೆ, ಪಡುಗೂರು

**ಪಡಗೂರಿನ ಶ್ರೀ ಮದ್ದಾನೇಶ್ವರ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ಶಾಲೆಯ ಮುಖ್ಯಶಿಕ್ಷಕರಾದ ಶ್ರೀ ಎಂ ಭವಾನಿಶಂಕರ್‌ರವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾತಂತ್ರ್ಯ ಗಳಿಸಲು ಹೋರಾಡಿದ ಮಹನೀಯರನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಅವರ ಹೋರಾಟದ ಫಲವಾಗಿ ನಾವೆಲ್ಲ ನೆಮ್ಮದಿಯಿಂದ ಇದ್ದೇವೆ. ವಿದ್ಯಾರ್ಥಿಗಳು ಹೆಚ್ಚು ಶ್ರಮ ವಹಿಸಿ ವಿದ್ಯಾವಂತರಾಗಿ, ದೇಶದ ಉತ್ತಮ ಪ್ರಜೆಗಳಾಗಬೇಕು ಎಂದು ಕರೆ ನೀಡಿದರು.

ಸಮಾಜ ವಿಜ್ಞಾನ ಶಿಕ್ಷಕರಾದ ಶ್ರೀ ಸಿದ್ದರಾಜಪ್ಪರವರು ಮಾತನಾಡಿ, ಸ್ವಾತಂತ್ರ್ಯ ಪೂರ್ವದಲ್ಲಿ ಹೋರಾಡಿದ ನಾಯಕರುಗಳ ಶ್ರಮವನ್ನು ಗೌರವಿಸಿ, ಅವರ ದಾರಿಯಲ್ಲಿ ಸಾಗಬೇಕು. ಸ್ವಾತಂತ್ರ್ಯ ನಂತರ ಅನೇಕ ಬೆಳವಣಿಗೆಗಳಾಗಿವೆ. ವಿದ್ಯಾರ್ಥಿಗಳು ಅವುಗಳನ್ನು ಅರಿತು

ಮುನ್ನಡೆಯಬೇಕು ಎಂದು ತಿಳಿಸಿದರು.

ಕು. ಅರ್ಚನಾ, ಕು. ಮಹಾಲಕ್ಷ್ಮಿ, ಕು. ನಂದಿತ ಕನ್ನಡದಲ್ಲಿ ಭಾಷಣ ಮಾಡಿದರು. ಕು. ಸಂತೋಷ ಹಾಗೂ ಕು. ಪೃಥ್ವಿ ಹಿಂದಿಯಲ್ಲಿ ಭಾಷಣ ಮಾಡಿದರು. ವಿವಿಧ ಛದ್ಮವೇಷಧಾರಿಗಳು ತಮ್ಮ ಪಾತ್ರಗಳ ಮೂಲಕ ಗಮನ ಸೆಳೆದರು. ಕು. ಅಶೋಕ್ ಕುಮಾರ್ ಹಾಗೂ ಕು. ಸಂತೋಷ ದೇಶಭಕ್ತಿ ಗೀತೆ ಹಾಡಿದರು. ವಿದ್ಯಾರ್ಥಿನಿಯರು ಸಮೂಹ ನೃತ್ಯ ಮಾಡಿದರು.

ಕಾರ್ಯಕ್ರಮದಲ್ಲಿ ಕು. ಅರ್ಚನಾ ಸ್ವಾಗತಿಸಿದರು. ಕು. ರೋಜಾ ನಿರೂಪಿಸಿದರು. ಕು. ಸಿದ್ದೇಶ ವಂದಿಸಿದರು.

## ಜಗದ್ಗುರು ಶ್ರೀ ಶಿವರಾತ್ರೀಶ್ವರ ಪ್ರೌಢಶಾಲೆ, ಉಮ್ಮತ್ತೂರು

**ಉಮ್ಮತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ ಸ್ವಾತಂತ್ರ್ಯೋತ್ಸವದಲ್ಲಿ ಮುಖ್ಯಶಿಕ್ಷಕರು ಧ್ವಜಾರೋಹಣವನ್ನು ನೇರವೇರಿಸಿ ನಮ್ಮ ದೇಶಕ್ಕೆ ಬಂದ ಯುರೋಪಿಯನ್ ರಾಷ್ಟ್ರಗಳು ವ್ಯಾಪಾರ ಮಾಡುವುದಲ್ಲದೆ ಒಡೆದು ಆಳುವ ನೀತಿಯಿಂದ ರಾಷ್ಟ್ರವನ್ನು ಕಬಳಿಸಿದರು. ಅನೇಕ ರಾಷ್ಟ್ರ ನಾಯಕರು ಸ್ವಾತಂತ್ರ್ಯಕ್ಕಾಗಿ ತಮ್ಮ ತನು ಮನ ಧನವನ್ನು ತ್ಯಾಗ ಮಾಡಿ ಸ್ವಾತಂತ್ರ್ಯ ತಂದುಕೊಟ್ಟರು. ಈಗ ರಾಷ್ಟ್ರರಕ್ಷಣೆ ನಮ್ಮ ಜವಾಬ್ದಾರಿಯಾಗಿದೆ. ಹಾಗೆಯೇ ರಾಜಕೀಯ, ಆರ್ಥಿಕ, ಸಾಮಾಜಿಕವಾಗಿ ಸಮಾನತೆ ಸಾಧಿಸಬೇಕಾಗಿದೆ. ಎಲ್ಲ ರಂಗಗಳಲ್ಲಿ ಇವತ್ತು ಭಾರತ ತೀವ್ರ ಪ್ರಗತಿ ಸಾಧಿಸುತ್ತಿದೆ. ಇದಕ್ಕೆ ನಮ್ಮೆಲ್ಲರ ಸಹಕಾರ ಮುಖ್ಯವಾಗಿದೆ ಎಂದು ತಿಳಿಸಿದರು.

ಕು. ಮೋಹಕ, ಕು. ಕಾವ್ಯ, ಕು. ರೋಹಿತ್, ಕು. ನಂದಿಕಾ ಮತ್ತು ಕು. ನಂದಿತ ಮಾತನಾಡಿದರು. ವಿದ್ಯಾರ್ಥಿಗಳು ಸ್ವಾತಂತ್ರ್ಯ ಹೋರಾಟಗಾರರ ವೇಷ ಭೂಷಣ ಧರಿಸಿ ಮತ್ತು ವಿವಿಧ ಚಟುವಟಿಗಳೊಂದಿಗೆ ಉಮ್ಮತ್ತೂರಿನ ಪ್ರಮುಖ ಬೀದಿಗಳಲ್ಲಿ ಜಾಥಾ ನಡೆಸಿದರು. ಕಾರ್ಯಕ್ರಮವನ್ನು ವಿದ್ಯಾರ್ಥಿನಿ ಕು. ಮೋಹಕ ನಿರೂಪಿಸಿದರು, ಕು. ಪದ್ಮ ಮತ್ತು ತಂಡದವರು ಪ್ರಾರ್ಥಿಸಿದರು. ಕು. ಪದ್ಮ ಸ್ವಾಗತಿಸಿದರು ಮತ್ತು ಕು. ನಂದಿಕಾ ವಂದಿಸಿದರು.

## ಜೆಎಸ್‌ಎಸ್ ಪ್ರೌಢಶಾಲೆ, ಲಕ್ಷ್ಮೀಪುರಂ

**ಲಕ್ಷ್ಮೀಪುರಂನಲ್ಲಿರುವ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ** ನಡೆದ 79 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮೈಸೂರು ರೇಷ್ಮೆ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀಮತಿ ಬಿ.ಆರ್. ಪ್ರತಿಭಾರವರು ಆಗಮಿಸಿ, ಧ್ವಜಾರೋಹಣ ನೆರವೇರಿಸಿ ಸ್ವಾತಂತ್ರ್ಯ ಗಳಿಸಲು ಹೋರಾಡಿದ ಮಹನೀಯರ ತ್ಯಾಗ, ಬಲಿದಾನಗಳನ್ನು ವಿದ್ಯಾರ್ಥಿಗಳು ಮನನ ಮಾಡಬೇಕು. ಉತ್ತಮ ಪ್ರಜೆಗಳಾಗಿ ಭವ್ಯ ಭಾರತವನ್ನು ನಿರ್ಮಾಣ ಮಾಡುವಲ್ಲಿ ವಿದ್ಯಾರ್ಥಿಗಳ ಪಾತ್ರ ಮುಖ್ಯವಾದದ್ದು ಎಂದರು. ಈ ಸಂದರ್ಭದಲ್ಲಿ 70 ಅಡಿ ಅಗಲದ ಭಾರತದ ರಾಷ್ಟ್ರಧ್ವಜ ಅನಾವರಣ ಮಾಡಲಾಯಿತು.

ಶಾಲೆಯ ವಿದ್ಯಾರ್ಥಿಗಳಾದ ಕು. ಸಿಂಚನ ಮತ್ತು ಕು. ಪುಣ್ಯಶ್ರೀ ಸ್ವಾತಂತ್ರ್ಯೋತ್ಸವದ ಬಗ್ಗೆ ಮಾತನಾಡಿದರು. ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನೇರವೇರಿದವು.

ಕಾರ್ಯಕ್ರಮವನ್ನು ಶಿಕ್ಷಕರಾದ ಶ್ರೀ ಕೆ.ಎಂ. ಬಸವಣ್ಣ ರವರು ನಿರೂಪಿಸಿದರು, ಶ್ರೀ ಎನ್.ಜಿ. ಮಂಜುರವರು ಸ್ವಾಗತಿಸಿದರು. ಶ್ರೀಮತಿ ಹೆಚ್. ರಮಾಮಣಿ ರವರು ವಂದಿಸಿದರು.

## ಜೆಎಸ್‌ಎಸ್ ಪ್ರೌಢಶಾಲೆ, ಸರಗೂರು

**ಸರಗೂರಿನಲ್ಲಿರುವ ಜೆಎಸ್‌ಎಸ್ ಪದವಿಪೂರ್ವ ಕಾಲೇಜು, ಜೆಎಸ್‌ಎಸ್ ಪ್ರೌಢಶಾಲೆ ಮತ್ತು ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆ** ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ 79ನೆಯ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಶ್ರೀಮತಿ ಸುಧಾ ಮೃತುಂಜಯ್ಯಪ್ಪನವರು ಧ್ವಜಾರೋಹಣ ನೆರವೇರಿಸಿ, ಜೈ ಜವಾನ್, ಜೈ ಕಿಸಾನ್ ಎಂಬ ಘೋಷಣೆಯ ಜೊತೆಗೆ ಜೈ ವಿಜ್ಞಾನ್ ಎಂಬುದು ಮುಖ್ಯವಾದುದು ಎಂದರು.

ಸಮಾಜ ವಿಜ್ಞಾನ ಶಿಕ್ಷಕರಾದ ಶ್ರೀ ಬಿ. ಸಿದ್ಧಲಿಂಗಸ್ವಾಮಿಯವರು ಮಾತನಾಡಿ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಯುವಜನತೆ ಹಾಗೂ ಮಹಿಳೆಯರ ಪಾತ್ರ ಗಣನೀಯವಾದುದು. ದೇಶದ ಬೆಳವಣಿಗೆ ಮತ್ತು ಉದ್ಧಾರ ಶಾಲಾ ಮಕ್ಕಳಿಂದ ಆರಂಭವಾಗುತ್ತದೆ ಎಂದರು.

ಜೆಎಸ್‌ಎಸ್ ಪ್ರೌಢಶಾಲೆ ವಿಭಾಗದ ಸಹಶಿಕ್ಷಕರಾದ ಶ್ರೀಮತಿ ಸುಮಲತಾ ಕಾರ್ಯಕ್ರಮವನ್ನು ನಿರೂಪಿಸಿದರು, ಕು. ಅಮೃತ ಮತ್ತು ತಂಡದವರು ಪ್ರಾರ್ಥಿಸಿದರು. ಪ್ರೌಢಶಾಲೆ ವಿಭಾಗದ ಶ್ರೀ ವೆಂಕಟೇಶ್ ವಂದನಾರ್ಪಣೆ ಮಾಡಿದರು.

## ಜೆಎಸ್‌ಎಸ್ ಮಹಿಳಾ ಪದವಿಪೂರ್ವ ಕಾಲೇಜು, ಯಳಂದೂರು



**ಯಳಂದೂರಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಸಮುಚ್ಚಯದಲ್ಲಿ** 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು. ಪ್ರೌಢಶಾಲೆಯ ಮುಖ್ಯಶಿಕ್ಷಕರಾದ ಶ್ರೀಮತಿ ವಿ. ಚಂದ್ರಕಲಾರವರು ಧ್ವಜಾರೋಹಣ ನೆರವೇರಿಸಿದರು.

ಕನ್ನಡ ಉಪನ್ಯಾಸಕರಾದ ಶ್ರೀ ಆರ್. ಉಮೇಶ್ ಅವರು ಸ್ವಾತಂತ್ರ್ಯ ದಿನಾಚರಣೆಯ ಕುರಿತು ಮಾತನಾಡುತ್ತಾ ಅನೇಕ ರಾಷ್ಟ್ರ ಪ್ರೇಮಿಗಳು ತಮ್ಮ ತನುಮನ ಧನವನ್ನು ಅರ್ಪಿಸಿ ಸ್ವಾತಂತ್ರ್ಯವನ್ನು ತಂದು ಕೊಟ್ಟರು. ಅದನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮದಾಗಿದೆ. ನಾವೆಲ್ಲರೂ ಸಮಾನತೆ ಸಾಧಿಸಬೇಕಾಗಿದೆ. ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರು, ಎಲ್ಲಾ ಉಪನ್ಯಾಸಕರು, ಪ್ರೌಢಶಾಲಾ ಶಿಕ್ಷಕರು, ಬೋಧಕೇತರ ವರ್ಗದವರು ಹಾಗೂ ವಿದ್ಯಾರ್ಥಿನಿಯರು ಹಾಜರಿದ್ದರು.

ಗಣಿತಶಾಸ್ತ್ರ ಉಪನ್ಯಾಸಕರಾದ ಶ್ರೀಮತಿ ಆರ್.ಜಿ. ಶೀಲಾರವರು ವಂದಿಸಿದರು.

## ಶಿಕ್ಷಕರಿಗಾಗಿ ಅಭಿಪ್ರೇರಣೆ ಹಾಗೂ ಕೌಶಲ್ಯಾಭಿವೃದ್ಧಿ ಕಾರ್ಯಾಗಾರ

**ಮೈಸೂರಿನ ಜೆ.ಪಿ. ನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆಯು** ಅತಿಥೇಯ ಶಾಲೆಯಾಗಿ ಸಿಬಿಎಸ್‌ಸಿ ಶಾಲಾ ಶಿಕ್ಷಕರಿಗೆ " ಅಭಿಪ್ರೇರಣೆ ಹಾಗೂ 21ನೆಯ ಶತಮಾನದ ಕೌಶಲ್ಯಗಳ ತರಬೇತಿ ಕಾರ್ಯಾಗಾರ"ವನ್ನು ದಿನಾಂಕ 9.8.2025 ರಂದು ಜೆಎಸ್‌ಎಸ್ ಆಸ್ಪತ್ರೆಯ "ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣ"ದಲ್ಲಿ ಆಯೋಜಿಸಲಾಗಿತ್ತು. ಕಾರ್ಯಾಗಾರದಲ್ಲಿ ಮೈಸೂರು ನಗರದಲ್ಲಿರುವ 4 ಜೆಎಸ್‌ಎಸ್ ಪಬ್ಲಿಕ್ ಶಾಲೆಗಳು, ಮಂಡ್ಯ ಮತ್ತು ಚಾಮರಾಜನಗರದಲ್ಲಿರುವ ಜೆಎಸ್‌ಎಸ್ ಪಬ್ಲಿಕ್ ಶಾಲೆಯ ಶಿಕ್ಷಕರು ಪಾಲ್ಗೊಂಡಿದ್ದರು. ಕಾರ್ಯಾಗಾರವನ್ನು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿಗಳಾದ ಶ್ರೀ ಎಸ್.ಪಿ. ಮಂಜುನಾಥ್‌ರವರು ಉದ್ಘಾಟನೆ ಮಾಡಿ, ಮಾತನಾಡುತ್ತಾ "ಹಿಂದಿನ ಗುರುಕುಲ ಪದ್ಧತಿಯಿಂದ ಹಿಡಿದು ಇಂದಿನ 21ನೆಯ ಶತಮಾನದ ಆಧುನಿಕ ಶಿಕ್ಷಣದವರೆಗೂ ಗುರುವಿನ ಸ್ಥಾನ ಮಹತ್ವದ್ದಾಗಿದೆ. ಸಂತ ಕಬೀರರು, ಪುರಂದರದಾಸರು ಮೊದಲಾದ ಶ್ರೇಷ್ಠರು ಗುರುವಿನ ಮಹಿಮೆಯನ್ನು ಸಾರಿದ್ದಾರೆ. ಶಿಕ್ಷಕರು ತಮ್ಮ ಕರ್ತವ್ಯವನ್ನು ಜವಾಬ್ದಾರಿಯುತವಾಗಿ ನಿರ್ವಹಿಸುವುದರಿಂದ ವಿದ್ಯಾರ್ಥಿಗಳಲ್ಲಿ ಗುರುತರವಾದ ಬದಲಾವಣೆಯನ್ನುಂಟುಮಾಡಿ ಉತ್ತಮ ಪ್ರಜೆಗಳಾಗಿ ರೂಪಿಸಲು ಸಾಧ್ಯವಾಗುತ್ತದೆ" ಎಂದು ಹೇಳಿದರು.

ವೇದಿಕೆಯಲ್ಲಿ ಪಬ್ಲಿಕ್ ಶಾಲಾ ವಿಭಾಗದ ಉಪ ನಿರ್ದೇಶಕರಾದ ಶ್ರೀ ಅಶೋಕ್ ಪಾಳ್ಯ, ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ರಾಜಶೇಖರ ಗುಮ್ಮರಾಜು ಉಪಸ್ಥಿತರಿದ್ದರು. ಸಮಾರಂಭದಲ್ಲಿ ಆರು ಪಬ್ಲಿಕ್ ಶಾಲೆಗಳ ಪ್ರಾಂಶುಪಾಲರು ಹಾಗೂ ಉಪಪ್ರಾಂಶಪಾಲರು ಹಾಜರಿದ್ದರು. ಶ್ರೀಮತಿ ಸಂತೋಷಿಮಾ ಪ್ರಾರ್ಥನೆ ಸಲ್ಲಿಸಿದರು. ಜೆ.ಪಿ. ನಗರದ ಜೆಎಸ್‌ಎಸ್ ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಎಸ್.ಎನ್. ಅರ್ಚನಾ ಸ್ವಾಗತ ಕೋರಿದರು. ಶಿಕ್ಷಕಿ ಶ್ರೀಮತಿ ಕೆ.ಎ. ಸುನೀತಾರವರು ವಂದಿಸಿದರು. ಶ್ರೀಮತಿ ಕೆ.ಸಿ. ಮಮತಾ ಕಾರ್ಯಕ್ರಮ ನಿರೂಪಿಸಿದರು.

ಉದ್ಘಾಟನಾ ಕಾರ್ಯಕ್ರಮದ ನಂತರ ನಡೆದ ಮೊದಲ ಅಧಿವೇಶನದಲ್ಲಿ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ರಾಜಶೇಖರ ಗುಮ್ಮರಾಜುರವರು ಶಿಕ್ಷಕರು ತರಗತಿಗಳಲ್ಲಿ ಎದುರಿಸುವಂತಹ ಸಮಸ್ಯೆಗಳಿಗೆ ಹಲವಾರು ಚಟುವಟಿಕೆಗಳ ಮುಖಾಂತರ ಪರಿಹಾರೋಪಾಯಗಳನ್ನು ತಿಳಿಸಿದರು. ಕಾರ್ಯ ಚಟುವಟಿಕೆಗಳ ಮುಖಾಂತರ ವಿದ್ಯಾರ್ಥಿಗಳಲ್ಲಿ ಏಕಾಗ್ರತೆ ವೃದ್ಧಿಸುವುದು. ವಿದ್ಯಾರ್ಥಿಗಳು ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸುವ ಬಗೆ, ಯಶಸ್ಸಿನ ಹಿಂದಿರುವ ಪರಿಣಾಮಕಾರಿ ಹಂತಗಳು, ಆತ್ಮವಿಶ್ವಾಸ ವೃದ್ಧಿಸುವುದರ ಬಗ್ಗೆ ವಿಚಾರಗಳನ್ನು ತಿಳಿಸಿದರು. ಮಧ್ಯಾಹ್ನದ ನಂತರ ಎರಡನೆಯ ಮತ್ತು ಮೂರನೆಯ ಅಧಿವೇಶನದಲ್ಲಿ 21ನೆಯ ಶತಮಾನದ ಬೋಧನಾ ಕೌಶಲಗಳ ಬಗ್ಗೆ ತಿಳಿಸಲಾಯಿತು.

□

## ಸಾಂಸ್ಕೃತಿಕ ತಿಳುವಳಿಕೆ ಮತ್ತು ಕ್ರೀಡಾ ಮನೋಭಾವ ಸಮಾಜಕ್ಕೆ ಅವಶ್ಯಕ
### ಪ್ರೊ. ಮೈಸೂರು ಕೃಷ್ಣಮೂರ್ತಿ

**ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ** ದಿನಾಂಕ 7.8.2025 ರಂದು ಸಾಂಸ್ಕೃತಿಕ, ಸಾಹಿತ್ಯಕ ಮತ್ತು ಕ್ರೀಡಾ ವೇದಿಕೆಗಳನ್ನು ಉದ್ಘಾಟಿಸಲಾಯಿತು. ಕೆ.ಆರ್. ನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಪ್ರಾಧ್ಯಾಪಕರಾದ ಪ್ರೊ. ಮೈಸೂರು ಕೃಷ್ಣಮೂರ್ತಿ ಅವರು ವೇದಿಕೆಗಳನ್ನು ಉದ್ಘಾಟಿಸಿ ಮಾತನಾಡುತ್ತಾ, ಇಂದಿನ ಸಮಾಜಕ್ಕೆ ಸಾಂಸ್ಕೃತಿಕ ತಿಳುವಳಿಕೆಯು ಅವಶ್ಯಕತೆಯಿದೆ. ವಿದ್ಯಾರ್ಥಿಗಳು ಹೆಚ್ಚಿನ ಸಾಧನೆಗಳನ್ನು ಮಾಡಲು ವಿನಯತೆಯನ್ನು ರೂಢಿಸಿಕೊಳ್ಳಿ. ಕಲೆ ಹಾಗೂ



ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ನಡೆದ ಸಾಂಸ್ಕೃತಿಕ, ಸಾಹಿತ್ಯಕ ಮತ್ತು ಕ್ರೀಡಾ ವೇದಿಕೆಗಳನ್ನು ಪ್ರೊ. ಮೈಸೂರು ಕೃಷ್ಣಮೂರ್ತಿಯವರು ಉದ್ಘಾಟಿಸುತ್ತಿರುವುದು. (7 ಆಗಸ್ಟ್ 2025)

ಕಲಾವಿದರಿಗೆ ಸಮಾಜದಲ್ಲಿ ಶ್ರೇಷ್ಠ ಸ್ಥಾನವಿದೆ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕರಾದ ಡಾ. ಸಿ. ವೆಂಕಟೇಶ್‌ರವರು ಮಾತನಾಡುತ್ತಾ, ಮನುಷ್ಯನು ಆರೋಗ್ಯವಂತನಾಗಿರಲು ಕ್ರೀಡೆಯು ಅತ್ಯವಶ್ಯಕ, ಕ್ರೀಡೆಗೆ ಮಾನದಂಡ ಆಸಕ್ತಿಯೆ ಹೊರತು ವಯಸ್ಸಲ್ಲ. ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವವನ್ನು ಹೊಂದಿರಬೇಕು ಎಂದರು.

ಯುವ ಉದ್ಯಮಿ ಹಾಗೂ ಕಾಲೇಜಿನ ಹಿರಿಯ ವಿದ್ಯಾರ್ಥಿನಿ ಶ್ರೀಮತಿ ಯಶಸ್ವಿನಿಯವರು ಮಾತನಾಡುತ್ತಾ, ತಮ್ಮೆಲ್ಲರಲ್ಲೂ ಪ್ರತಿಭೆ ಇರುತ್ತದೆ. ಸಾಹಿತ್ಯ ಮತ್ತು ಕ್ರೀಡಾ ಚಟುವಟಿಕೆಯಲ್ಲಿ ಶ್ರದ್ಧೆಯಿಂದ ಭಾಗವಹಿಸಿದಾಗ ಯಶಸ್ಸು ದೊರೆಯುತ್ತದೆ. ಉತ್ತಮ ಸಾಧನೆಗೆ ತಾಳ್ಮೆ ಬಹಳ ಮುಖ್ಯ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕರಾದ ಶ್ರೀ ಬಿ. ನಿರಂಜನಮೂರ್ತಿಯವರು ಮಾತನಾಡುತ್ತಾ, ವಿದ್ಯಾರ್ಥಿ ಜೀವನದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು ಬಹುಮುಖ್ಯವಾದ ಪಾತ್ರವನ್ನು ವಹಿಸುತ್ತವೆ. ನಿಜವಾದ ಕಲಿಕೆ ಎಂದರೆ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಯನ್ನು ರೂಪಿಸುವುದು ಎಂದು ಅಭಿಪ್ರಾಯಪಟ್ಟರು.

ವೇದಿಕೆಯಲ್ಲಿ ಪ್ರಾಂಶುಪಾಲರಾದ ಡಾ. ರೇಚಣ್ಣ, ಸಾಂಸ್ಕೃತಿಕ, ಸಾಹಿತ್ಯಕ ವೇದಿಕೆಯ ಸಂಚಾಲಕರಾದ ಶ್ರೀ ಹೊನ್ನಶೆಟ್ಟಿ ಹಾಗೂ ಕ್ರೀಡಾ ವೇದಿಕೆಯ ಸಂಚಾಲಕರಾದ ಶ್ರೀಮತಿ ಎ. ರಶ್ಮಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕು. ಎಸ್. ರೇಣುಕಾ ಸ್ವಾಗತ ನೃತ್ಯ ಪ್ರದರ್ಶಿಸಿದರು. ಕು. ಧಾತ್ರಿ ಮತ್ತು ವೃಂದದವರು ಪ್ರಾರ್ಥಿಸಿದರು. ಕು. ಎಸ್. ಅಪರಂಜಿ ಸ್ವಾಗತಿಸಿದರು. ಕು. ಚಂದನ ವಂದಿಸಿದರು. ಕು. ಬಿ.ಎಸ್. ವಿನುತ ಕಾರ್ಯಕ್ರಮ ನಿರೂಪಿಸಿದರು.

## ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರ, ಸುತ್ತೂರು

**ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದಲ್ಲಿ** ದಿನಾಂಕ 8.8.2025 ರಂದು ಭಾರತದ ತೋಟಗಾರಿಕಾ ಪಿತಾಮಹರಾದ ಡಾ. ಎಂ ಹೆಚ್ ಮರಿಗೌಡರ ಜನುಮದಿನದ ಅಂಗವಾಗಿ ರಾಷ್ಟ್ರೀಯ ತೋಟಗಾರಿಕಾ ದಿನಾಚರಣೆ ಹಾಗೂ ಜೇನು ಕೃಷಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಡಾ. ಜಿ.ಎಂ. ವಿನಯ್ ರವರು ತೋಟಗಾರಿಕೆ ದಿನಾಚರಣೆಯ ಉದ್ದೇಶ, ತೋಟಗಾರಿಕೆ ಕ್ಷೇತ್ರಕ್ಕೆ ಡಾ. ಎಂ.ಹೆಚ್. ಮರಿಗೌಡರ ಕೊಡುಗೆ, ಅವರ ಸಾಧನೆಯ ಹಿನ್ನೆಲೆ ತೋಟಗಾರಿಕೆ ದಿನಾಚರಣೆ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ನಿವೃತ್ತ ಕೆಎಎಸ್ ಅಧಿಕಾರಿಗಳಾದ ಮೈಸೂರಿನ ಡಾ. ಬೋರೇಗೌಡ ರವರು, ಮರಿಗೌಡರು ತೋಟಗಾರಿಕೆಯನ್ನೇ ತಮ್ಮ ಜೀವನವಾಗಿ ಮಾಡಿಕೊಂಡಿದ್ದರು. ಅವರು ಮಾಡಿರುವ ಕೆಲಸದಿಂದ ಇಂದು ತೋಟಗಾರಿಕೆ ಬೆಳೆಗಳಿಂದ ರೈತರು ಹೆಚ್ಚಿನ ಆದಾಯವನ್ನು ಪಡೆಯುವಂತಾಗಿದೆ ಹಾಗೂ ಕರ್ನಾಟಕ ರಾಜ್ಯವು ತೋಟಗಾರಿಕೆ ರಾಜ್ಯ ಎಂದು ಕರೆಯಲ್ಪಟ್ಟಿದೆ. ರೈತರು ತೋಟಗಾರಿಕಾ ಬೆಳೆಗಳ ಮೌಲ್ಯವರ್ಧನೆ ಬಗ್ಗೆ ತಿಳಿದುಕೊಳ್ಳಬೇಕು. ಜೇನು ಕೃಷಿ ಮಾಡುವುದರಿಂದ ರೈತರು ತಮ್ಮ ಇಳುವರಿಯನ್ನು ನೈಸರ್ಗಿಕವಾಗಿ ಹೆಚ್ಚು ಮಾಡಬಹುದು ಎಂದು ತಿಳಿಸಿದರು. ಹಾಗೂ ಸ್ವತಹ ಅವರೇ ಬೆಳೆಯುತ್ತಿರುವ ಮಾವು, ಲಕ್ಷ್ಮಣಫಲ, ಲಿಚ್ಚಿ ಹಾಗೂ ಇನ್ನಿತರ ನೂತನ ಕೃಷಿಯ ಬಗ್ಗೆ ತಮ್ಮ ಅನುಭವವನ್ನು ರೈತರೊಂದಿಗೆ ಹಂಚಿಕೊಂಡು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ. ಬಿ.ಎನ್. ಜ್ಞಾನೇಶ್‌ರವರು ಮಾತನಾಡಿ ತೋಟಗಾರಿಕೆ ದಿನಾಚರಣೆಯನ್ನು ಪ್ರತಿ ವರ್ಷ ನಮ್ಮ ಕೃಷಿ ವಿಜ್ಞಾನ ಕೇಂದ್ರದಲ್ಲಿ ತೋಟಗಾರಿಕೆ ವಿಷಯ ಕುರಿತು ತರಬೇತಿ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಆಚರಿಸಲಾಗುತ್ತಿದೆ. ರೈತರು ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಕೃಷಿಯಲ್ಲಿ ಹೆಚ್ಚಾಗಿ ರಾಸಾಯನಿಕಗಳನ್ನು ಬಳಸುವುದರಿಂದ ನೈಸರ್ಗಿಕವಾಗಿ ಜೇನು ಹುಳುಗಳ ಸಂಖ್ಯೆ ಕಡಿಮೆಯಾಗಿದೆ. ಆದುದರಿಂದ ರೈತರು ಜೇನು ಕೃಷಿ ಮಾಡಬೇಕು. ಉತ್ತಮ ಇಳುವರಿಯನ್ನು ಪಡೆಯಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ನ್ಯಾಷನಲ್ ಫರ್ಟಿಲೈಜರ್ ಲಿಮಿಟೆಡ್‌ನ ಜಿಲ್ಲಾ ವ್ಯವಸ್ಥಾಪಕರಾದ ಶ್ರೀ ಕಾಶಪ್ಪನವರು ಅತಿಥಿಗಳಾಗಿ ಭಾಗವಹಿಸಿದ್ದರು. ಸಸ್ಯ ಸಂರಕ್ಷಣೆ ವಿಷಯ ತಜ್ಞರಾದ ಡಾ. ವೈ.ಪಿ. ಪ್ರಸಾದ್‌ರವರು ಮಾತನಾಡಿ, ಕೃಷಿಯಲ್ಲಿ ಜೇನು ಸಾಕಣೆಯು ಕೂಡ ಒಂದು ಭಾಗ. ಜೇನು ಸಾಕಣೆಯಿಂದ ಬೆಳೆಗಳಲ್ಲಿ ಪರಾಗಸ್ಪರ್ಶ ಹೆಚ್ಚಾಗಿ ಬೆಳೆಗಳ ಇಳುವರಿ ಹೆಚ್ಚಾಗುತ್ತದೆ ಹಾಗೂ ಇದನ್ನು ಒಂದು ಉದ್ಯಮವಾಗಿ ಅಥವಾ ಉಪಕಸುಬನ್ನಾಗಿ ಅಳವಡಿಸಿಕೊಂಡರೆ ಹೆಚ್ಚು ಲಾಭ ಪಡೆಯಬಹುದು ಎಂದು ತಿಳಿಸಿದರು. ಜೇನು ಕೃಷಿ ತರಬೇತಿಯ ಸಂಪನ್ಮೂಲ ವ್ಯಕ್ತಿಯಾದ ಪ್ರಗತಿಪರ ಜೇನು ಕೃಷಿಕರಾದ ರವಿರವರು, ಜೇನಿನ ಇತಿಹಾಸ, ಜೇನು ಕೃಷಿ ಆರಂಭವಾದ ರೀತಿ, ಹೆಜ್ಜೇನು, ಕೋಲುಜೇನು, ನುಸುರಿ ಜೇನು, ತುಡುವೆ ಜೇನು ಹಾಗೂ ಇತರೆ ಜೇನಿನ ತಳಿಗಳ ಕುರಿತು ಮಾಹಿತಿ ನೀಡಿದರು. ನಂತರ ಕೃಷಿ ವಿಜ್ಞಾನ ಕೇಂದ್ರದ ಜೇನು ಕೃಷಿ ತಾಕಿನಲ್ಲಿ ಜೇನು ಸಾಕುವ ಹಾಗೂ ಜೇನು ತುಪ್ಪ ತೆಗೆಯುವ ಕುರಿತು ಪ್ರಾಯೋಗಿಕವಾಗಿ ರೈತರಿಗೆ ಮಾಹಿತಿ ನೀಡಿದರು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಷಯ ತಜ್ಞರಾದ ಹೆಚ್.ವಿ. ದಿವ್ಯಾ, ಶ್ರೀ ಶಾಮರಾಜ್, ಡಾ. ದೀಪಕ ಹಾಗೂ ಸಿಬ್ಬಂದಿ ವರ್ಗದವರು ಹಾಗೂ 70 ಕ್ಕೂ ಹೆಚ್ಚು ರೈತರು ಭಾಗವಹಿಸಿದ್ದರು.

## ಜೆಎಸ್‌ಎಸ್ ಪ್ರೌಢಶಾಲೆ, ಕಲ್ಕುಣಿಕೆ, ಹುಣಸೂರು



ಹುಣಸೂರಿನ ಕಲ್ಕುಣಿಕೆಯ ಜೆಎಸ್‌ಎಸ್ ಪ್ರೌಢಶಾಲೆಯ ವಿದ್ಯಾರ್ಥಿಗಳು ಹುಣಸೂರಿನಲ್ಲಿ ನಡೆದ 2025–26ನೇ ಸಾಲಿನ ಉತ್ತರ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಸಮಗ್ರ ಪ್ರಶಸ್ತಿಯನ್ನು ಪಡೆದು ಶಾಲೆಗೆ ಕೀರ್ತಿಯನ್ನು ತಂದಿದ್ದಾರೆ. ಪ್ರಶಸ್ತಿವಿಜೇತ ಕ್ರೀಡಾಪಟುಗಳೊಂದಿಗೆ ಮುಖ್ಯೋಪಾಧ್ಯಾಯರು, ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ಸಹಶಿಕ್ಷಕರಿದ್ದಾರೆ.

---

## ಜೆಎಸ್‌ಎಸ್ ಬಾಲಿಕಾ ಪ್ರೌಢಶಾಲೆ, ಯಳಂದೂರು



ಯಳಂದೂರಿನ ಜೆಎಸ್‌ಎಸ್ ಬಾಲಿಕಾ ಪ್ರೌಢಶಾಲೆಯ ವಿದ್ಯಾರ್ಥಿನಿಯರು 2025–26ನೇ ಸಾಲಿನ ತಾಲ್ಲೂಕು ಮಟ್ಟದ ಕ್ರೀಡಾಕೂಟದ ವಿವಿಧ ಆಟೋಟಗಳಲ್ಲಿ ಭಾಗವಹಿಸಿ ವಿಜೇತರಾಗಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತಂದಿರುತ್ತಾರೆ. ಸಾಧಕ ಕ್ರೀಡಾಪಟುಗಳೊಂದಿಗೆ ಮುಖ್ಯೋಪಾಧ್ಯಾಯರು, ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ಸಹಶಿಕ್ಷಕರಿದ್ದಾರೆ.

## ಅಂತಶ್ಶಕ್ತಿಯೇ ಅನುಭಾವ ಸಾಹಿತ್ಯದ ಮೂಲದ್ರವ್ಯ



ಚಾಮರಾಜನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ನಡೆದ 'ಅನುಭಾವ ಪರಂಪರೆ – ತಾತ್ವಿಕ ಜಿಜ್ಞಾಸೆ' ಎಂಬ ವಿಷಯವನ್ನು ಕುರಿತ ವಿಚಾರ ಸಂಕಿರಣವನ್ನು ಪ್ರೊ. ಮೊರಬದ ಮಲ್ಲಿಕಾರ್ಜುನರವರು ಉದ್ಘಾಟಿಸುತ್ತಿರುವುದು. (24 ಜುಲೈ 2025)

ಅಂತ:ಶಕ್ತಿಯಿಂದಲೇ ಅರ್ಥಪೂರ್ಣ ಬದುಕನ್ನು ಕಟ್ಟಿಕೊಳ್ಳುವ ಶಕ್ತಿ ಅನುಭಾವ ಸಾಹಿತ್ಯದ್ದಾಗಿದೆ. ಶರಣರ ವಚನಗಳು, ದಾಸರ ಕೀರ್ತನೆಗಳು ಸಾಂಸ್ಕೃತಿಕ ನಾಯಕರಾದ ಮಲೆ ಮಹದೇಶ್ವರ ಮಂಟೇಸ್ವಾಮಿ ಕಾವ್ಯಗಳು ಅನುಭವಾತ್ಮಕ ನೆಲೆಯಲ್ಲಿ ರಚಿತವಾಗಿವೆ ಎಂದು ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ಮತ್ತು ಪ್ರಕಟಣಾ ವಿಭಾಗದ ನಿರ್ದೇಶಕರಾದ ಪ್ರೊ. ಮೊರಬದ ಮಲ್ಲಿಕಾರ್ಜುನರವರು ಅಭಿಪ್ರಾಯ ಪಟ್ಟರು.

**ಚಾಮರಾಜನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ** ಬೆಂಗಳೂರಿನ ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ ಮತ್ತು ರಂಗವಾಹಿನಿ ಇವರ ಸಹಯೋಗದಲ್ಲಿ ದಿನಾಂಕ 24.7.2025 ರಂದು ನಡೆದ 'ಅನುಭಾವ ಪರಂಪರೆ – ತಾತ್ವಿಕ ಜಿಜ್ಞಾಸೆ' ಎಂಬ ವಿಷಯವನ್ನು ಕುರಿತ ಒಂದು ದಿನದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು. 12ನೆ ಶತಮಾನದ ರಾಜಪ್ರಭುತ್ವದಿಂದ ಮತ್ತು 15ನೆ ಶತಮಾನದ ಪುರೋಹಿತಶಾಹಿ ವರ್ಗದ ಕಾರಣದಿಂದಾಗಿ ಸಾಮಾನ್ಯ ಜನರ ಭಾವನೆ ಮತ್ತು ಬದುಕಿನ ವಿಸ್ತಾರಕ್ಕೆ ಅವಕಾಶ ನೀಡದಿರುವ ಸಮಾಜ ವ್ಯವಸ್ಥೆಯಲ್ಲಿ ತಮ್ಮ ನೋವಿನ ಸಂಗತಿಗಳನ್ನು ನಮ್ಮೊಳಗಿರುವ ಅಂತ:ಶಕ್ತಿಯನ್ನು ಅಡಗಿಸದೆ ಅರಳಿಸಿಕೊಳ್ಳುವ ಸೇತುವೆಯಾಗಿ ದೇವರು ಮತ್ತು ಮನುಷ್ಯನ ನಡುವೆ ಸಂಬಂಧವನ್ನು ಅನುಭಾವ ಪರಂಪರೆ ಕಲ್ಪಿಸಿತು. 12ನೆ ಶತಮಾನದಲ್ಲಿ ಉತ್ತರದಲ್ಲಿ ನಡೆದ ಧಾರ್ಮಿಕ ಆಂದೋಲನವನ್ನು ದಕ್ಷಿಣ ಕರ್ನಾಟಕದ ಸಾಮಾನ್ಯ ಜನರಿಗೂ ತಲುಪಿಸಿದ್ದು ಚಾಮರಾಜನಗರದ ನೆಲ. ಇದಕ್ಕೆ ಕಾರಣ ಮಲೆ ಮಹದೇಶ್ವರ ಮತ್ತು ಮಂಟೇಸ್ವಾಮಿ ಜನಪದ ಮಹಾ ಕಾವ್ಯ ಪರಂಪರೆ. 12ನೇ ಶತಮಾನದ ಶರಣರ ಪ್ರಯತ್ನ ಎಷ್ಟೇ ವ್ಯಾಪಕವಾದ ಆಯಾಮಗಳನ್ನು ಪಡೆದಿದ್ದರೂ ಜನಸಾಮಾನ್ಯರ ಹೃದಯವನ್ನು ಪ್ರವೇಶಿಸಿ ಜನರನ್ನು ಒಪ್ಪುವ ಹಾಗೆ ನಂಬುವ ಹಾಗೆ ಮಾಡಿದ್ದು ಜನಪದ ಮಹಾಕಾವ್ಯಗಳು. ಆಧ್ಯಾತ್ಮ ಪರಂಪರೆಯ ಸಮೃದ್ಧವಾದ ನೆಲೆ ಚಾಮರಾಜನಗರ ಎಂದು ಹೇಳಿದರು.

ಬೆಂಗಳೂರಿನ ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷರಾದ ಶ್ರೀ ಕಾ ತ ಚಿಕ್ಕಣ್ಣ ಅವರು ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ನುಡಿಗಳನ್ನಾಡುತ್ತಾ, ಕೀರ್ತನ ಸಾಹಿತ್ಯ, ತತ್ವಪದ ಸಾಹಿತ್ಯ, ಅನುಭಾವ ಸಾಹಿತ್ಯಗಳ ತೌಲನಿಕ ಅಧ್ಯಯನ, ವಿಚಾರ ವಿನಿಮಯ ಪ್ರಕಟಣೆ ಮುಂತಾದ ವಿಷಯಗಳನ್ನು ವಿವಿಧ ಹಂತಗಳಲ್ಲಿ ನಮ್ಮ ಅಧ್ಯಯನ ಕೇಂದ್ರ ಮಾಡುತ್ತಾ ಬಂದಿದೆ. ಅನುಭಾವ ಸಾಹಿತ್ಯ ಬದುಕಿನ ದರ್ಶನ ನೀಡುವ ಸಾಹಿತ್ಯ. ಈ ಸಾಹಿತ್ಯ ಮನೋವಿಕಾಸಕ್ಕೆ ಎಡೆ ಮಾಡಿಕೊಡುವ ವ್ಯಕ್ತಿತ್ವ ವಿಕಸನಗೊಳಿಸುವ ಒಂದು ಜ್ಞಾನ ಸ್ಥಿತಿಯ ಮನೋಧರ್ಮ. ಅಂತಹ ಜ್ಞಾನ ಸ್ಥಿತಿಯ ಬಗ್ಗೆ ಸಮಾಜೋದ್ಧಾರಕ್ಕಾಗಿ ಶ್ರಮಿಸಿದ ಸಾಧುಸಂತರ ಈ ಸಾಹಿತ್ಯವನ್ನು ಎಲ್ಲರಿಗೆ ತಲುಪಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿತವಾಗಿದೆ. ವಚನ ಸಾಹಿತ್ಯದ ನಂತರ ಬದುಕಿಗೆ ಹತ್ತಿರವಾದದ್ದು, ಸಮಾಜದ ಚಿಂತನೆಯನ್ನು ಒಳಗೊಂಡಿರುವುದು ತತ್ವಪದ ಸಾಹಿತ್ಯ. ಇಂದು ಮನುಷ್ಯರಾಗಿ ಬದುಕಲು ಹಸನಾದ ಸಮಾಜವನ್ನು ರೂಪಿಸಲು ಅವರು ಕಟ್ಟಿ ಬೆಳೆಸಿದ ಸಂಸ್ಕೃತಿಯನ್ನು ವಿಸ್ತಾರಗೊಳಿಸುವ ಜವಾಬ್ದಾರಿಯನ್ನು ಯುವ ಸಮುದಾಯಕ್ಕೆ ಮುಟ್ಟಿಸುವ ಸಲುವಾಗಿ ಇಂತಹ ಕಾರ್ಯಕ್ರಮಗಳ ಅವಶ್ಯಕತೆ ಇದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಚಾಮರಾಜನಗರದ ದೀನ ಬಂಧು ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಪ್ರೊ. ಜಿ.ಎಸ್. ಜಯದೇವರವರು ಮಾತನಾಡುತ್ತಾ, ಅನುಭವ ಮತ್ತು ಅನುಭಾವಕ್ಕೂ ಬಹಳ ವ್ಯತ್ಯಾಸವಿದೆ. ವ್ಯಕ್ತಿ ತಾನು ಅನುಭವಿಸುವ ವಸ್ತುವಿನ ಸ್ಥಿತಿ ಅಳಿದು ವಸ್ತುವಿಗೂ ತನಗೂ ಇರುವ ಭೇದ ಅಳಿದು ಅದೇ ತಾನಾಗುವುದೇ ಅನುಭಾವ. ಅನುಭಾವ ಎಂಬ ಪದವನ್ನು ಟಂಕಿಸಿದವರು ಶಿವಶರಣರು. ಆಧ್ಯಾತ್ಮಕ್ಕೆ ಸಂವಾದಿಯಾದ ಪದ ಅನುಭಾವ. ಎಲ್ಲರಲ್ಲೂ ಅನುಭಾವದ ಗುಣಗಳಿರುತ್ತವೆ. ಆದರೆ ಅದನ್ನು ಮೊಟಕುಗೊಳಿಸುವುದು ಪಶು ಪ್ರವೃತ್ತಿಗಳ ಪ್ರಲೋಭನೆಗಳು. ಎಲ್ಲಿಯವರೆಗೆ ಮನಸ್ಸು ಪಶು ಪ್ರವೃತ್ತಿಗಳ ಪ್ರಲೋಭನೆಗೆ ಒಳಗಾಗುತ್ತದೆಯೋ ಅಲ್ಲಿಯವರೆಗೆ ಮನಸ್ಸು ಅನುಭಾವದ ಸಾಧ್ಯತೆಗಳನ್ನು ಕಾಣುವುದಕ್ಕೆ ಸಾಧ್ಯವಾಗುವುದಿಲ್ಲ. ಜಗತ್ತಿನ ಎಲ್ಲ ಧರ್ಮಗಳು ಅನುಭಾವಿಗಳಿಂದಲೇ ಅಲ್ಲದೆ ಬೇರೆಯವರಿಂದ ಸ್ಥಾಪಿತವಾಗಿಲ್ಲ. ಮನುಷ್ಯ ಈ ಸೃಷ್ಟಿಯ ಜೊತೆ ಒಂದು ಎಂದು ಹೇಳುವುದೇ ಅನುಭಾವ ಸಾಹಿತ್ಯ. ಅನುಭಾವದ ನೆಲೆಯಿಂದ ಮನುಷ್ಯ ಸಂಬಂಧಗಳ ನೆಲೆಗೆ ಇಳಿದಾಗ ಉಂಟಾಗುವುದೇ ಅನುಕಂಪ. ಹಾಗಾಗಿ ಎಲ್ಲಾ ಧರ್ಮಗಳ ಮೂಲ ದಯೆ ಎಂದು ಹೇಳಿದರು. ಶ್ರೀ ದೊಡ್ಡಗವಿ ಬಸಪ್ಪ ಮತ್ತು ತಂಡದವರು ಪ್ರಾರ್ಥಿಸಿದರು. ರಂಗವಾಹಿನಿಯ ಅಧ್ಯಕ್ಷರಾದ ಶ್ರೀ ಸಿ.ಎಂ. ನರಸಿಂಹಮೂರ್ತಿ ಸ್ವಾಗತಿಸಿದರು, ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಉಮೇಶ್ ವಂದಿಸಿದರು. ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ರೂಪಶ್ರೀ ಕಾರ್ಯಕ್ರಮವನ್ನು ನಿರೂಪಿಸಿದರು. ವೇದಿಕೆಯಲ್ಲಿ ಚಾಮರಾಜನಗರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಆರ್ ನಂಜುಂಡಯ್ಯ, ಪ್ರಾಂಶುಪಾಲರಾದ ಡಾ. ಎನ್. ಮಹದೇವಸ್ವಾಮಿ ಅವರು ಉಪಸ್ಥಿತರಿದ್ದರು.

ವಿಚಾರ ಸಂಕಿರಣದ ತಾಂತ್ರಿಕ ಗೋಷ್ಠಿಯಲ್ಲಿ 'ಮಧ್ಯಕಾಲೀನ ಕರ್ನಾಟಕದ ಅನುಭಾವ ಪರಂಪರೆ' ಎಂಬ ವಿಷಯವನ್ನು ಕುರಿತು ಪ್ರೊ. ಮೊರಬದ ಮಲ್ಲಿಕಾರ್ಜುನರವರು, 'ಬಸವಣ್ಣ ಕನಕದಾಸ ಮತ್ತು ಮಲೆ ಮಹದೇಶ್ವರ ಅವೈದಿಕ ಚಿಂತನೆ' ಎಂಬ ವಿಷಯವನ್ನು ಕುರಿತು ಶ್ರೀಮತಿ ಜಿ. ಉಷಾರಾಣಿಯವರು, 'ಬಸವಣ್ಣ, ಕನಕದಾಸ, ಮಲೆ ಮಹದೇಶ್ವರ ಮತ್ತು ಮಂಟೇಸ್ವಾಮಿ– ಸಾಮಾಜಿಕ ಸಂಘರ್ಷ' ಎಂಬ ವಿಷಯವನ್ನು ಕುರಿತು ಡಾ. ರಾಜಪ್ಪ ದಳವಾಯಿಯವರು, 'ಕನಕದಾಸ ಮಲೆ ಮಹದೇಶ್ವರ ಮತ್ತು ಮಂಟೇಸ್ವಾಮಿ ಅನುಭಾವ ಚಿಂತನೆ' ಎಂಬ ವಿಷಯವನ್ನು ಕುರಿತು ಡಾ. ಕೆ.ಎನ್. ಗಿರೀಶ್‌ರವರು, 'ಮಲೆ ಮಹದೇಶ್ವರ ಮತ್ತು ಮಂಟೇಸ್ವಾಮಿ ಸಾಂಸ್ಕೃತಿಕ ನಾಯಕರು' ಎಂಬ ವಿಷಯವನ್ನು ಕುರಿತು ಶ್ರೀ ಮಹದೇವ ಶಂಕನಪುರರವರು ವಿಚಾರಗೋಷ್ಠಿಗಳನ್ನು ನಡೆಸಿಕೊಟ್ಟರು.

## ಜೆಎಸ್‌ಎಸ್ ಆಸ್ಪತ್ರೆಯ ಡಾ. ಎಸ್.ಸಿ. ನೇಮಿಚಂದ್ರ ರವರಿಗೆ "ಸುಶ್ರುತ ಪ್ರಶಸ್ತಿ"




ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಮೈಸೂರಿನ ಭ್ರಮರ ಟ್ರಸ್ಟ್ ಸಂಯುಕ್ತವಾಗಿ ನೀಡುವ ಸುಶ್ರುತ ಪ್ರಶಸ್ತಿ ಪ್ರದಾನ ಸಮಾರಂಭವು ದಿನಾಂಕ 14.8.2025 ರಂದು ನೆರವೇರಿತು.

ಜೆಎಸ್‌ಎಸ್ ಆಸ್ಪತ್ರೆಯ ವೈದ್ಯರಾದ ಡಾ. ಎಸ್.ಸಿ. ನೇಮಿಚಂದ್ರ ಅವರಿಗೆ 2025ನೇ ಸಾಲಿನ ಸುಶ್ರುತ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಭಾರತ ಸರ್ಕಾರದ ಮಾಜಿ ಪ್ರಧಾನ ವೈಜ್ಞಾನಿಕ ಸಲಹೆಗಾರರಾದ ಪ್ರೊ. ಕೆ. ವಿಜಯರಾಘವನ್‌ರವರು ನರವಿಜ್ಞಾನ ವಿಭಾಗದ ವೈದ್ಯರಿಗೆ ಪ್ರಶಸ್ತಿ ನೀಡುತ್ತಿರುವುದು ತುಂಬಾ ಸಂತೋಷದ ವಿಷಯ. ಏಕೆಂದರೆ ನಾನು ಕೂಡ ನ್ಯೂರೋಭಯಾಲಜಿ ಕ್ಷೇತ್ರದಲ್ಲಿ ಅಧ್ಯಯನ ಮಾಡಿದ್ದೇನೆ. ಮಾನವ ನರಮಂಡಲವು ಒಂದು ಸಂಕೀರ್ಣ ಜಾಲವಾಗಿದ್ದು ಅದು ಸ್ವಯಂಪ್ರೇರಿತ ಕ್ರಿಯೆಗಳನ್ನು ಸಂಘಟಿಸುತ್ತದೆ ಮತ್ತು ದೇಹದಾದ್ಯಂತ ಸಂಕೇತಗಳನ್ನು ರವಾನಿಸುತ್ತದೆ. ಇದನ್ನು ಮೆದುಳು ನಿಯಂತ್ರಿಸಿ ನರಮಂಡಲವು ನಮಗೆ ಯೋಚಿಸಲು, ಚಲಿಸಲು, ಅನುಭವಿಸಲು ಮತ್ತು ದೈಹಿಕ ಕಾರ್ಯಗಳನ್ನು ನಿರ್ವಹಿಸಲು ಅನುವು ಮಾಡಿಕೊಡುತ್ತದೆ. ಈ ಕ್ಷೇತ್ರದ ಅಧ್ಯಯನ ಬಹಳ ಕುತೂಹಲಕಾರಿ ಎಂದರು.

ಗೌರವ ಅತಿಥಿಗಳಾಗಿ ಆಗಮಿಸಿದ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕ್ಯಾಡೆಮಿಯ ಕುಲಪತಿಗಳಾದ ಡಾ. ಹೆಚ್. ಬಸವನಗೌಡಪ್ಪರವರು ಮಾತನಾಡಿ ಭ್ರಮರ ಟ್ರಸ್ಟ್‌ವತಿಯಿಂದ ವೈದ್ಯರು ರೋಗಿಗಳಿಗೆ ನೀಡುವ ಮಾನವೀಯ ಸೇವೆಯನ್ನು ಗುರುತಿಸಿ ರೋಗಿಗಳಿಂದ ಅಭಿಪ್ರಾಯ ಸಂಗ್ರಹಿಸಿ ಸುಶ್ರುತ ಪ್ರಶಸ್ತಿಯನ್ನು ನೀಡುತ್ತಿರುವುದು ಸಂತೋಷದ ವಿಷಯ. ಭ್ರಮರ ಟ್ರಸ್ಟ್ ಹಲವಾರು ಸಮಾಜಮುಖಿ ಸೇವೆಗಳನ್ನು ಮಾಡುತ್ತಿದೆ ಎಂದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕರಾದ ಶ್ರೀ ಆರ್. ಮಹೇಶ್ ರವರು ಮಾತನಾಡಿ, ಭ್ರಮರ ಟ್ರಸ್ಟ್ ದತ್ತಿಯಿಂದ ಮೊತ್ತಮೊದಲ ಬಾರಿಗೆ 2025ನೇ ಸಾಲಿನ ಸುಶ್ರುತ ಪ್ರಶಸ್ತಿಯನ್ನು ವೈದ್ಯಕೀಯ ಕ್ಷೇತ್ರದ ಸೇವೆಯನ್ನು ಗುರುತಿಸಿ ಡಾ. ನೇಮಿಚಂದ್ರರವರಿಗೆ ನೀಡುತ್ತಿರುವುದು ಸಂತಸದ ವಿಷಯ. ಭ್ರಮರ ಟ್ರಸ್ಟ್ ಸಮಾಜಮುಖಿ ಸೇವೆಗಳಿಗೆ ಹೆಸರುವಾಸಿಯಾಗಿದ್ದು 2004 ರಲ್ಲಿ ಸುನಾಮಿಯಿಂದ ಮನೆ ಮಠ ಕಳೆದುಕೊಂಡ ನಿರಾಶ್ರಿತರಿಗೆ ತಮಿಳುನಾಡಿನಲ್ಲಿ ಮನೆಯನ್ನು ನಿರ್ಮಿಸಲು ಆರ್ಥಿಕ ಸಹಾಯ ನೀಡಿದ್ದಾರೆ.

ಉತ್ತರ ಕರ್ನಾಟಕದ ಪ್ರವಾಹ ಸಂದರ್ಭದಲ್ಲಿ ಅಲ್ಲಿನ ನಿರಾಶ್ರಿತರಿಗೆ ಮನೆ ನಿರ್ಮಿಸಲು ಜೆಎಸ್‌ಎಸ್ ಸಂಸ್ಥೆಯೊಂದಿಗೆ ಕೈಜೋಡಿಸಿದ್ದಾರೆ ಹಾಗೂ ಕೊಡಗಿನಲ್ಲಿ ಪ್ರವಾಹ ಸಂದರ್ಭದಲ್ಲಿ ಕೂಡ ಅಲ್ಲಿನ ನಿರಾಶ್ರಿತರಿಗೆ ಸಹಾಯವನ್ನು ಮಾಡಿರುತ್ತಾರೆ. ಭ್ರಮರ ಟ್ರಸ್ಟ್ ಸೇವೆ ಸ್ಮರಣೀಯವಾದುದು ಎಂದರು.

ದತ್ತಿ ದಾನಿಗಳಾದ ಭ್ರಮರ ಟ್ರಸ್ಟಿನ ಮ್ಯಾನೇಜಿಂಗ್ ಟ್ರಸ್ಟಿಯವರಾದ ಶ್ರೀಮತಿ ಮಾಧುರಿ ತಾತಾಚಾರಿ ಯವರು ಮಾತನಾಡಿ ನಮ್ಮ ಸಂಸ್ಥೆಯು ಸಮಾಜಕ್ಕೆ ನೀಡುವ ಸೇವೆಯನ್ನು ಗುರುತಿಸಿ ಬಡವ ಶ್ರೀಮಂತ ಎನ್ನದೇ ಎಲ್ಲಾ ರೋಗಿಗಳ ಬಗ್ಗೆ ಕಾಳಜಿ, ಕರ್ತವ್ಯದ ಬಗ್ಗೆ ಬದ್ಧತೆ, ಸಮರ್ಪಣೆಯನ್ನು ಗಮನಿಸಿ ಜೆಎಸ್‌ಎಸ್ ಆಸ್ಪತ್ರೆಯ ನರವಿಜ್ಞಾನ ವಿಭಾಗದ ಡಾ. ನೇಮಿಚಂದ್ರರವರಿಗೆ ನೀಡುತ್ತಿದ್ದೇವೆ ಎಂದರು.

ಜೆಎಸ್‌ಎಸ್ ಆಸ್ಪತ್ರೆಯ ನಿರ್ದೇಶಕರಾದ ಡಾ. ಸಿ.ಪಿ. ಮಧುರವರು ಸ್ವಾಗತಿಸಿದರು. ಉಪನಿರ್ದೇಶಕರಾದ ಡಾ. ಜಿ.ವಿ. ಮಂಜುನಾಥ್ ರವರು ವಂದಿಸಿದರು.

## ನಶಾಮುಕ್ತ ಭಾರತ ಅಭಿಯಾನ

**ನಂಜನಗೂಡಿನ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ದಿನಾಂಕ 13.8.2025ರಂದು ಕಾಲೇಜಿನ ರಾಜ್ಯಶಾಸ್ತ್ರ ವಿಭಾಗ ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಘಟಕದ ವತಿಯಿಂದ ಆಂತರಿಕ ಗುಣಮಟ್ಟ ಭರವಸೆ ಘಟಕದ ಸಹಯೋಗದೊಂದಿಗೆ ಕೇಂದ್ರ ಸರ್ಕಾರದ ನಶಾ ಮುಕ್ತ ಭಾರತ ಅಭಿಯಾನ ಯೋಜನೆಯ ಅಂಗವಾಗಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮ ಕುರಿತಾದ ಅರಿವು ಮೂಡಿಸುವ ವಿಶೇಷ ಮಾರ್ಗದರ್ಶಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ನಂಜನಗೂಡು ಪಟ್ಟಣ ಆರಕ್ಷಕ ನಿರೀಕ್ಷಕರಾದ ಶ್ರೀ ಸಿ.ಎಂ. ರವೀಂದ್ರರವರು ಪದವಿ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತಂತ್ರಜ್ಞಾನ ಯುಗದಲ್ಲಿ ಹೆಚ್ಚಿನ ಸಮಯವನ್ನು ಮೊಬೈಲ್ ಬಳಕೆಯಲ್ಲಿ ತೊಡಗಿಸಿಕೊಂಡಿದ್ದಾರೆ. ತಮ್ಮ ವಿನಾಶಕಾರಿ ಜೀವನಶೈಲಿಯಿಂದ ಮಾದಕ ವಸ್ತುಗಳ ಬಳಕೆ, ಮದ್ಯಪಾನ ಹಾಗೂ ಧೂಮಪಾನಗಳಂತಹ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಇದರಿಂದ ತಮ್ಮ ಆರೋಗ್ಯವನ್ನು ಕಳೆದುಕೊಳ್ಳುವುದಲ್ಲದೇ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವ ಸ್ಥಿತಿ ನಿರ್ಮಾಣವಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಯುವ ಜನತೆ ಪೋಷಕರ ಕನಸನ್ನು ನನಸಾಗಿಸುವ ನಿಟ್ಟಿನಲ್ಲಿ ವಿದ್ಯಾಭ್ಯಾಸ ಮಾಡಿ ಶಿಕ್ಷಣ ಸಂಸ್ಥೆಗೆ, ಶಿಕ್ಷಕರಿಗೆ ಹಾಗೂ ಸಮಾಜಕ್ಕೆ ಕೀರ್ತಿ ತರುವಂತಹ ಪ್ರಜೆಗಳಾಗಿ ಹೊರಹೊಮ್ಮಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಸಿ.ಎಸ್. ಹೊನ್ನೇಗೌಡರವರು ಭಾರತದ ಸಂವಿಧಾನ ವ್ಯವಸ್ಥೆ ಜಗತ್ತಿನ ಎಲ್ಲ ರಾಷ್ಟ್ರಗಳಿಗೆ ಮಾದರಿಯಾಗಿದೆ. ಜ್ಞಾನ, ವಿಜ್ಞಾನ ಹಾಗೂ ತಾಂತ್ರಿಕ ಯುಗದಲ್ಲಿ ವಿದ್ಯಾರ್ಥಿಗಳು ಅಂಕಾಧಾರಿತ ಪ್ರಮಾಣ ಪತ್ರಗಳನ್ನು ಪಡೆಯುವುದರೊಂದಿಗೆ ಸತ್ಸಂಗ, ಸದ್ವಿನಯ ಹಾಗೂ ಸತ್ಕಾರ್ಯಗಳನ್ನು ರೂಢಿಸಿಕೊಳ್ಳಬೇಕು. ಭಾರತೀಯ ಸಂಸ್ಕೃತಿ ಹಾಗೂ ಪರಂಪರೆಯನ್ನು ಆದರ್ಶವಾಗಿರಿಸಿಕೊಂಡು ಯಾರಿಗೂ ಕೆಡುಕು ಮಾಡದೇ ಸ್ವಾವಲಂಬಿ ಬದುಕನ್ನು ಸಾಗಿಸಬೇಕು. ಎಲ್ಲರಿಗೂ ಬೇಕಾದವರಾಗಿ ಸಮಾಜದಲ್ಲಿ ಮಾದರಿ ವ್ಯಕ್ತಿಗಳಾಗಿ ರೂಪುಗೊಳ್ಳಬೇಕೆಂದು ಹೇಳಿದರು.

ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಕೆ.ಎನ್. ಶಿವಕುಮಾರ್, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್.ಎಸ್. ಪರಶಿವ, ರಾಷ್ಟ್ರೀಯ ಸೇವಾ ಯೋಜನೆ ಘಟಕದ ಕಾರ್ಯಕ್ರಮಾಧಿಕಾರಿ ಶ್ರೀ

ಹೆಚ್.ಆರ್. ಗುರು, ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕು. ಸಿಂಚನ ಸ್ವಾಗತಿಸಿದರು. ಶ್ರೀ ಎಚ್.ಆರ್. ಗುರು ವಂದಿಸಿದರು. ಕು. ಎಂ. ಸಹನಾ ನಿರೂಪಿಸಿದರು.

## ಸ್ವಾಗತ ಸಮಾರಂಭ

**ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ** ದಿನಾಂಕ 20.8.2025 ರಂದು ಸ್ವಾಗತ ಸಮಾರಂಭ ನಡೆಯಿತು. ಐಕ್ಯೂಐಸಿ ಸಂಚಾಲಕರು ಹಾಗೂ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಎಸ್. ಮಮತಾರವರು ಮಾತನಾಡಿ, ವಿದ್ಯಾರ್ಥಿಗಳೊಡನೆ ಹೆಚ್ಚು ಸಮಯವನ್ನು ಕಳೆಯುವ ಬೋಧಕರು ವಿದ್ಯಾರ್ಥಿಗಳಿಗೆ ಸೂಕ್ತ ಪ್ರೇರಣೆ ಹಾಗೂ ಮಾರ್ಗದರ್ಶನ ನೀಡಿ ಅವರ ಭವಿಷ್ಯಕ್ಕೆ ಭದ್ರ ಬುನಾದಿಯನ್ನು ಹಾಕಬೇಕಿದೆ. ಗ್ರಾಮೀಣ ವಿದ್ಯಾರ್ಥಿಗಳನ್ನು ಮುಖ್ಯವಾಹಿನಿಗೆ ತರುವುದು ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಅವರನ್ನು ಉತ್ತಮರನ್ನಾಗಿಸುವುದು ಕರ್ತವ್ಯವಾಗಬೇಕು. ಕಾಲೇಜು ಹಂತದಲ್ಲಿ ಅವರಿಗೆ ಮಾರ್ಗದರ್ಶನ ನೀಡಿ ಅವಕಾಶ ನೀಡುವುದರ ಮೂಲಕ ಭವಿಷ್ಯ ರೂಪಿಸಬೇಕಿದೆ. ಮುಖ್ಯವಾಗಿ ಸ್ಪರ್ಧಾತ್ಮಕ ಮನೋಭಾವ ಬೆಳೆಸಿ ಸ್ಪರ್ಧಾತ್ಮಕ ಪ್ರಪಂಚದಲ್ಲಿ ಯಶಸ್ವಿಯನ್ನಾಗಿಸಬೇಕಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ಹೆಚ್.ಎಸ್. ಕೊಂಗಳ್ಳಪ್ಪನವರು ಬದುಕಿನ ಸಾರ್ಥಕತೆಗೆ ಶಿಕ್ಷಣವಷ್ಟೇ ಸಾಲದು, ಜೀವನ ರೂಪಿಸಿಕೊಳ್ಳಲು ಅಗತ್ಯ ಕೌಶಲಗಳೂ ಬೇಕು. ಸ್ವಯಂ-ಪ್ರೇರಣೆ, ಸ್ವಯಂ-ಗೌರವ, ಆತ್ಮವಿಶ್ವಾಸ, ಪ್ರಾಮಾಣಿಕತೆ, ಆಶಾವಾದ, ಜೀವನೋತ್ಸಾಹ ಮುಂತಾದ ನಿಲುವುಗಳು ಮತ್ತು ಕೌಶಲಗಳು, ವೃತ್ತಿ ಮತ್ತು ವೈಯಕ್ತಿಕ ಬದುಕಿನ ಯಶಸ್ಸಿಗೆ ಕಾರಣವಾಗುತ್ತದೆ. ಈಗಿನ ವಿದ್ಯಾರ್ಥಿಗಳು ಮೊದಲು ಕೋರ್ಸ್ ನಂತರ ವೃತ್ತಿ ಎಂಬ ಮನಃಸ್ಥಿತಿಯಲ್ಲಿದ್ದಾರೆ. ಆದರೆ ಮೊದಲು ವೃತ್ತಿಯ ಆಯ್ಕೆ ನಂತರ ಕೋರ್ಸ್ ಆಯ್ಕೆ ಎಂದು ಬದಲಾಯಿಸಿಕೊಳ್ಳಬೇಕಿದೆ. ಅಧ್ಯಾಪಕರ ಜವಾಬ್ದಾರಿ ಪಠ್ಯಕ್ರಮಕ್ಕೆ ಸೀಮಿತಗೊಳ್ಳದೆ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಮತ್ತು ಬದುಕಿಗೆ ದಾರಿದೀಪವಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಆಡಳಿತಾಧಿಕಾರಿಯಾದ ಶ್ರೀ ಎಚ್.ಬಿ. ಗಿರೀಶ್ ಇವರು ಉಪಸ್ಥಿತರಿದ್ದರು.

## ಸಮಾಲೋಚನ ಸಭೆ

**ಮೈಸೂರಿನ ಜೆಎಸ್‌ಎಸ್ ಲಕ್ಷ್ಮೀಪುರಂ** ಕ್ಲಸ್ಟರ್‌ನಲ್ಲಿ ಶಿಕ್ಷಕರ ಸಮಾಲೋಚನ ಸಭೆಯನ್ನು ಏರ್ಪಡಿಸಲಾಗಿತ್ತು ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಮೈಸೂರಿನ ದಕ್ಷಣವಲಯ ಇಸಿಓ ಶ್ರೀ ವೈ.ಎನ್. ರಾಜೇಶ್‌ರವರು ಎಲ್‌ಬಿಎ ಬಗ್ಗೆ ಮಾರ್ಗದರ್ಶನ ಮಾಡಿ ಪಾಠ ಆಧಾರಿತ ಮೌಲ್ಯಮಾಪನದ ಉದ್ದೇಶಗಳು, ಮೌಲ್ಯಮಾಪನ ಮಾಡುವ ರೀತಿ ಹಾಗೂ ಎಸ್‌ಎಟಿಎಸ್ ನಲ್ಲಿ ಫಲಿತಾಂಶವನ್ನು ದಾಖಲೆ ಮಾಡುವ ಬಗ್ಗೆ ತಿಳಿಸಿಕೊಟ್ಟರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದ ವಿಷಯ ಪರಿವೀಕ್ಷಕರಾದ ಶ್ರೀ ನಾಗರಾಜು ರವರು 'ಗುಣಮಟ್ಟದ ಕಲಿಕಾ ವೃತ್ತ'ದ ಬಗ್ಗೆ ಮಾರ್ಗದರ್ಶನ ಮಾಡಿ ಪ್ರಾಥಮಿಕ ಹಂತದಿಂದಲೇ ಮಕ್ಕಳ ಕಲಿಕಾ ಮಟ್ಟವನ್ನು ಉತ್ತಮ ಪಡಿಸುವುದರಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಗುಣಮಟ್ಟದ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ. ಆದ್ದರಿಂದ ಎಲ್ಲಾ ಶಿಕ್ಷಕರು

ಗುಣಮಟ್ಟದ ಕಲಿಕಾ ವೃತ್ತ ಕಾರ್ಯಕ್ರಮವನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡು ಮಕ್ಕಳ ಕಲಿಕಾ ಮಟ್ಟವನ್ನು ಉತ್ತಮ ಪಡಿಸಬೇಕೆಂದು ತಿಳಿಸಿದರು.

ವಿಷಯ ಪರಿವೀಕ್ಷಕರಾದ ಶ್ರೀ ಎಸ್.ಸಿ. ಚೆನ್ನಬಸಪ್ಪನವರು ಮಾತನಾಡಿ ಸರ್ಕಾರ ಮತ್ತು ಸಂಸ್ಥೆಯವರು ರೂಪಿಸಿರುವ ವಿವಿಧ ಕಾರ್ಯಕ್ರಮಗಳಾದ ಎಫ್‌ಎಲ್‌ಎ, ಎಲ್‌ಬಿಎ ಹಾಗೂ ಗುಣಮಟ್ಟದ ಕಲಿಕಾ ವೃತ್ತ ಮುಂತಾದ ಕಾರ್ಯಕ್ರಮಗಳನ್ನು ಸದುಪಯೋಗಪಡಿಸಿಕೊಂಡು ಮಕ್ಕಳ ಕಲಿಕಾ ಪ್ರಗತಿಯನ್ನು ಉತ್ತಮ ಪಡಿಸಬೇಕೆಂದು ತಿಳಿಸಿಕೊಟ್ಟರು. ಸಭೆಯಲ್ಲಿ ಪರಖ್ ರಾಷ್ಟ್ರೀಯ ಸರ್ವೇಕ್ಷಣ–2024 ವರದಿಯನ್ನು ಜೆಎಸ್‌ಎಸ್ ಬಾಲ್‌ಜಗತ್ ಶಾಲೆಯ ಸಹ ಶಿಕ್ಷಕರಾದ ಶ್ರೀ ಎಸ್. ಮಲ್ಲಣ್ಣರವರು ಮಂಡಿಸಿದರು.

ಕಾರ್ಯಕ್ರಮದಲ್ಲಿ ಲಕ್ಷ್ಮೀಪುರಂ ಕ್ಲಸ್ಟರ್‌ನ ವಿವಿಧ ಶಾಲೆಯ ಮುಖ್ಯಸ್ಥರುಗಳಾದ ಶ್ರೀ ಎಸ್.ಎನ್. ನಾಗೇಂದ್ರಪ್ರಸಾದ್, ಶ್ರೀಮತಿ ಎಚ್.ಸಿ. ಮಂಜುಳ, ಶ್ರೀ ಬಿ. ಜಗದೀಶ್, ಶ್ರೀ ಚಂದ್ರೇಗೌಡ, ಶ್ರೀ ರಾಜಣ್ಣ, ಶ್ರೀಮತಿ ನಾಗರತ್ನ, ಶ್ರೀ ಜಯಣ್ಣನವರು ಹಾಗೂ ಶಿಕ್ಷಕರುಗಳು ಭಾಗವಹಿಸಿದ್ದರು.

ಜೆಎಸ್‌ಎಸ್ ಬಾಲಜಗತ್ ಶಾಲೆಯ ಶ್ರೀ ಶಿವಕುಮಾರ್ ಪ್ರಾರ್ಥನೆ ಮಾಡಿದರು. ಮನುಗನಹಳ್ಳಿ ಜೆಎಸ್‌ಎಸ್ ಶಾಲೆಯ ಶ್ರೀ ಚಂದ್ರೇಗೌಡರವರು ಸ್ವಾಗತ ಕೋರಿದರು. ಲಕ್ಷ್ಮೀಪುರಂ ಜೆಎಸ್‌ಎಸ್ ಶಾಲೆಯ ಶ್ರೀ ವಿ. ಪ್ರಕಾಶ್‌ರವರು ವಂದನಾರ್ಪಣೆ ಮಾಡಿದರು. ಶ್ರೀ ಕೆ.ಎಂ. ಬಸವಣ್ಣನವರು ನಿರೂಪಿಸಿದರು.

□

